ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 178 RNI Number : KNKAN/25/A2770 07-07-2026 Tuesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :178 ರಾಯಚೂರು 07-07-2026 ಮಂಗಳವಾರ ಪುಟ 04 ಬೆಲೆ ರೂ.2/- ಮೊ:8660146563

ಆರ್‌ಎಸ್‌ಎಸ್ ಪಥಸಂಚಲನಕ್ಕೆ ಅನುಮತಿ ಕಡ್ಡಾಯ

ಕಲಬುರಗಿ,ಜು.6-

ಆರ್‌ಎಸ್‌ಎಸ್‌ಗೆ ಬರೆದ ಪತ್ರಕ್ಕೆ ಇನ್ನೂ ಉತ್ತರ ಬಂದಿಲ್ಲ. ಬರಲಿ ಬಿಡಿ ಅವಸರ ಯಾಕೆ? 'ಅಭಿ ಪಿಕ್ಚರ್ ಬಾಕಿ ಹೈ' ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಸೋಮವಾರ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ತಮ್ಮನ್ನು ಭೇಟಿಯಾದ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡುತ್ತಿದ್ದ ಅವರು, ಹಲವಾರು ಪ್ರಶ್ನೆಗಳನ್ನು ಹಾಕಿ ಆರ್‌ಎಸ್‌ಎಸ್‌ಗೆ ಪತ್ರ ಬರೆದಿದ್ದೇನೆ. ಇನ್ನೂ ಉತ್ತರ ನೀಡಿಲ್ಲ. ನೀಡಲಿ ಬಿಡಿ, ಯಾಕೆ ಅವಸರ 'ಅಭಿ ಪಿಕ್ಚರ್ ಬಾಕಿ ಹೈ'. ಅವರು ಕೂಡಾ ನನ್ನ ಹಾಗೂ ಕುಟುಂಬದ ವೈಯಕ್ತಿಕ ಮಾಹಿತಿ ಕಲೆ ಹಾಕುತ್ತಿದ್ದಾರೆ. ಹಾಕಲಿ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸುತ್ತಾ ಹೇಳಿದರು.

ಮುಂದಿನ ದಿನಗಳಲ್ಲಿ ಆರ್‌ಎಸ್‌ಎಸ್ ಪಥ ಸಂಚಲನ ನಡೆಸಬೇಕಿದ್ದರೆ ಕಡ್ಡಾಯಾಗಿ ಅನುಮತಿ ಪಡೆದುಕೊಳ್ಳಲೇಬೇಕೆ ಎಂದು ಕೇಳಲಾದ ಪ್ರಶ್ನೆಗೆ ಉತ್ತರಿಸಿದ ಗೃಹ ಸಚಿವರು, ನಾನು ಗೃಹ ಸಚಿವನಾಗಿರುವವರಗೆ ಕಡ್ಡಾಯ. ಆರ್‌ಎಸ್‌ಎಸ್ ಅವರು ಇದುವರೆಗೆ ಮಾಹಿತಿ ಮಾತ್ರ ನೀಡುತ್ತಿದ್ದರು. ಚಿತ್ತಾಪುರದಲ್ಲಿಯೂ ಹಾಗೆಯೇ ಮಾಡಿದರು. ಅನುಮತಿ ಕೊಡಲಿಲ್ಲ ಎಂದು



ಕೋರ್ಟ್‌ಗೆ ಹೋಗಿದ್ದರು. ಕೋರ್ಟ್ ನಿರ್ದೇಶನದಂತೆ ಅರ್ಜಿ ಸಲ್ಲಿಸಿದರು. ಇನ್ನು ಮುಂದೆಯೂ ಕೂಡಾ ಅವರು ಅರ್ಜಿ ಸಲ್ಲಿಸಿದರೆ, ಕೋರ್ಟ್ ನಿರ್ದೇಶನ ಹಾಗೂ ಸರ್ಕಾರದ ಮಾನದಂಡ, ಸ್ಥಳ, ಸಮಯ ಹಾಗೂ ಸಂದರ್ಭಕ್ಕನುಗುಣವಾಗಿ ಮುಂದಿನ ಕ್ರಮ ವಹಿಸಲಾಗುವುದು ಎಂದು ಸ್ಪಷ್ಟಪಡಿಸಿದರು.

ಗುರುದಕ್ಷಿಣೆ ಲೆಕ್ಕ ತೋರಿಸಲಿ: ಆರ್‌ಎಸ್‌ಎಸ್ ಗುರುದಕ್ಷಿಣೆ ತೆಗೆದುಕೊಳ್ಳುತ್ತಾರಂತೆ. ಗುರು ಎಂದರೆ ಯಾರು? ಧ್ವಜ ತಾನೆ? ಧ್ವಜದ ಮೇಲೆ ಗುರುದಕ್ಷಿಣೆ ತೆಗೆದುಕೊಂಡರೆ, ಅದಕ್ಕೆ ಲೆಕ್ಕ ತೋರಿಸಲಿ ಎಂದು ಸವಾಲಾಕಿದರು.

ಶ್ರೀರಾಮನ ಹುಂಡಿ ಕಳ್ಳತನ ವಿಚಾರ ಪ್ರಸ್ತಾಪಿಸಿದ ಗೃಹ ಸಚಿವರು, ಬೆಳ್ಳಿ, ಚಿನ್ನ, ಆಭರಣ, ಹಣ ಸೇರಿದಂತೆ ಇಟ್ಟಿಗೆಗಳನ್ನು ಕೂಡಾ ಕಳವು ಮಾಡಿದ್ದಾರೆ. ಕರ್ನಾಟಕದ ಗಣೇಶ್ ಎನ್ನುವರು ಕಟ್ಟಡ ನಿರ್ಮಾಣ ಗುತ್ತಿಗೆ ಪಡೆದುಕೊಂಡಿದ್ದಾರಂತೆ. ಇಲ್ಲಿಂದ ಹೋಗಿ ಅಲ್ಲಿ ಕಮಿಷನ್ ಹೊಡೆದಿದ್ದಾರಂತೆ. ಶ್ರೀರಾಮ ವಿಗ್ರಹದ ಪ್ರಾಣ ಪ್ರತಿಷ್ಠಾನದ ವಿಚಾರದಲ್ಲಿ ಕೆಲವರು ವಿರೋಧ ಮಾಡಿದ್ದರು. ಆದರೂ ಮೋದಿ ತರಾತುರಿಯಲ್ಲಿ ಮಾಡಿದ್ದರು. ಚಂದಾ ಚೋರಿಯಲ್ಲಿ ಆರ್‌ಎಸ್‌ಎಸ್‌ಗೂ ಪಾಲು ಹೋಗಿದ್ದರೆ ನನಗೆ ಅನುಮಾನವಿಲ್ಲ ಎಂದು ಆರೋಪಿಸಿದರು.

ಇದೇ ವೇಳೆ ಕೇಂದ್ರ ಸರ್ಕಾರದ ವಿದೇಶಾಂಗ ನೀತಿ ವಿಫಲವಾಗಿದೆ ಎಂದು ಟೀಕಿಸಿದ ಸಚಿವರು, ಮೋದಿ ವಿದೇಶಾಂಗ ನೀತಿ ಇನ್ಸ್ಟಾದಲ್ಲಿ ರೀಲ್ ಮಾಡಲು ಹಾಗೂ ಚಾಕೋಲೇಟ್ ವಿತರಣೆ ಮಾಡಲು ಮಾತ್ರ ಸೀಮಿತವಾಗಿದೆ. ಕಚ್ಚಾ ತೈಲ ಬೆಲೆ ಕಡಿಮೆಯಾಗಿದೆಯಲ್ಲ ಈಗೇಕೆ ಪೆಟ್ರೋಲಿಯಂ ಬೆಲೆ ಕಡಿಮೆ ಮಾಡುತ್ತಿಲ್ಲ? ಎಂದು ಪ್ರಶ್ನಿಸಿದರು.

ರಾಜ್ಯ ಮಂತ್ರಿಮಂಡಲದಲ್ಲಿ ನಮ್ಮ ಕಲ್ಯಾಣ ಕರ್ನಾಟಕಕ್ಕೆ ಹೆಚ್ಚಿನ ಪ್ರಾತಿನಿಧ್ಯ ನೀಡುವಂತೆ ಹೈಕಮಾಂಡ್ ಮುಂದೆ ಬೇಡಿಕೆ ಇದ್ದೇ ಇರುತ್ತದೆ. ನಮ್ಮ ಭಾಗದಿಂದ ಯಾರೇ ಸಚಿವರಾದರೂ ಕೂಡಾ ಹೆಚ್ಚಿನ ಅಭಿವೃದ್ಧಿಗೆ ಸಹಕಾರಿಯಾಗುತ್ತದೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸುತ್ತಾ ಹೇಳಿದರು.

ಆರ್ಟಿಕಲ್ 371ಜೆ ಅಡಿಯಲ್ಲಿ ಗ್ರೇಡ್ 2 ತಹಶಿಲ್ದಾರಗಳ ಪದೋನ್ನತಿ ವಿಚಾರ, ಸಚಿವ ಸಂಪುಟದಲ್ಲಿ ಚರ್ಚೆ ನಡೆಸಲಾಗುವುದು. ಕಲಬುರಗಿ ಮಹಾನಗರ ಪಾಲಿಕೆ ಸೇರಿದಂತೆ ಸ್ಥಳೀಯ ಸಂಸ್ಥೆಗಳಲ್ಲಿ ಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ವಾಟರ್ ಮೆನ್, ಬಿಲ್ ಕಲೆಕ್ಟರ್‌ಗಳ ಖಾಯಮಾತಿ ವಿಚಾರದಲ್ಲಿಯೂ ಕೂಡಾ ಆರ್ಥಿಕ ಇಲಾಖೆಯೊಂದಿಗೆ ಚರ್ಚೆ ನಡೆಸಿ ಅಗತ್ಯ ಕ್ರಮವಹಿಸಲಾಗುವುದು ಎಂದು ಸಚಿವರು ತಿಳಿಸಿದರು.

ಡಬರಾಬಾದ್ ಬಳಿಯ ರೇಷ್ಮೆ ಇಲಾಖೆಯ ಕಟ್ಟಡದ ಕಳಪೆ ಕಾಮಗಾರಿ ವಿಚಾರ ಪ್ರಸ್ತಾಪಿಸಿದ್ದಕ್ಕೆ ಉತ್ತರಿಸಿದ ಸಚಿವರು ಮುಂದಿನ ವಾರ ಭೇಟಿ ನೀಡುತ್ತೇನೆ, ಕಳಪೆ ಆಗಿದ್ದರೆ ಕ್ರಮ ವಹಿಸಲಾಗುವುದು ಎಂದರು.

ದೀರ್ಘಾವಧಿ ಕಾಲ ಒಂದೇ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬಂಧಿಖಾನೆ ಇಲಾಖೆ ಹಾಗೂ ಗೃಹ ಇಲಾಖೆಯ ಸಿಬ್ಬಂದಿಗಳ ವರ್ಗಾವಣೆಗೆ

3ನೇಯ ಪುಟಕ್ಕೆ

ರಾಜ್ಯದಲ್ಲಿ ಪರ್ಯಾಯ ರಾಜಕೀಯ ಶಕ್ತಿ ನಿರ್ಮಾಣಕ್ಕೆ ಚೇತನ್ ಅಹಿಂಸಾ ಕರೆ

2028ರ ಚುನಾವಣೆಯಲ್ಲಿ 224 ಕ್ಷೇತ್ರಗಳಲ್ಲಿ ಸ್ಪರ್ಧೆ ಗುರಿ

ರಾಯಚೂರು,ಜು.6-

ರಾಜ್ಯದಲ್ಲಿ ಸಂವಿಧಾನದ ಆಶಯಗಳು, ಸಾಮಾಜಿಕ ನ್ಯಾಯ, ಸಮಾನತೆ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳ ಆಧಾರದ ಮೇಲೆ ಹೊಸ ರಾಜಕೀಯ ಪರ್ಯಾಯ ಶಕ್ತಿಯನ್ನು ನಿರ್ಮಿಸುವ ಅಗತ್ಯವಿದ್ದು, 2028ರ ಕರ್ನಾಟಕ ವಿಧಾನಸಭೆ ಚುನಾವಣೆಯಲ್ಲಿ ರಾಜ್ಯದ ಎಲ್ಲಾ 224 ವಿಧಾನಸಭಾ ಕ್ಷೇತ್ರಗಳಲ್ಲಿ ಅಭ್ಯರ್ಥಿಗಳನ್ನು ಕಣಕ್ಕಿಳಿಸುವ ಗುರಿಯನ್ನು ಹೊಂದಲಾಗಿದೆ ಎಂದು ಸಮಾಜಮುಖಿ ಚಿಂತಕರು ಹಾಗೂ ನಟ ಚೇತನ್ ಹೇಳಿದರು.

ನಗರದ ಅಂಬೇಡ್ಕರ್ ಸರ್ಕಲ್ ಸಮೀಪದ ನೃಪತುಂಗ ಹೋಟೆಲ್‌ನಲ್ಲಿ ನಡೆದ 26ನೇ



ರಾಜಕೀಯ ಮುನ್ನೋಟ ಸಭೆಯಲ್ಲಿ ಮಾತನಾಡಿದ ಅವರು, ಪ್ರಸ್ತುತ ರಾಜಕೀಯ ವ್ಯವಸ್ಥೆ ಜನಸಾಮಾನ್ಯರ ಆಶಯಗಳಿಗೆ ಸಮರ್ಪಕವಾಗಿ ಸ್ಪಂದಿಸುತ್ತಿಲ್ಲ. ಜನರ ಬದುಕಿನ ಮೂಲಭೂತ ಸಮಸ್ಯೆಗಳು, ಸಾಮಾಜಿಕ ಅಸಮಾನತೆ ಮತ್ತು ಪ್ರಜಾಪ್ರಭುತ್ವದ ಮೌಲ್ಯಗಳಿಗೆ ಎದುರಾಗಿರುವ ಸವಾಲುಗಳನ್ನು ಗ'ವ'ು'ನ'ದ'ಲ್ಲಿಟ್ಟು'ಕ'ೊ'ಂ'ಡ'ು ಪರ್ಯಾಯ ರಾಜಕೀಯ ವೇದಿಕೆಯನ್ನು ಕಟ್ಟುವುದು ಇಂದಿನ ಅಗತ್ಯವಾಗಿದೆ ಎಂದು ಹೇಳಿದರು.

ಸಂವಿಧಾನದ ಮೌಲ್ಯಗಳು, ಸಾಮಾಜಿಕ ನ್ಯಾಯ, ಸಮಾನತೆ, ಜಾತ್ಯತೀತತೆ ಹಾಗೂ ಪ್ರಜಾಪ್ರಭುತ್ವದ ತತ್ವಗಳನ್ನು ಆಧಾರವಾಗಿಟ್ಟುಕೊಂಡು ಹೊಸ ರಾಜಕೀಯ ಪಕ್ಷವನ್ನು ಕಟ್ಟುವ ಉದ್ದೇಶವಿದ್ದು, ಜನಸಾಮಾನ್ಯರ ಏಳಿಗೆ ಮತ್ತು ಸಮ ಸಮಾಜದ ನಿರ್ಮಾಣಕ್ಕಾಗಿ ಸಮಾನತೆ ಬಯಸುವ ಎಲ್ಲ ಶಕ್ತಿಗಳು ಒಂದಾಗಬೇಕು ಎಂದು ಕರೆ ನೀಡಿದರು.

2028ರ ಕರ್ನಾಟಕ ವಿಧಾನಸಭೆ ಚುನಾವಣೆಯಲ್ಲಿ ರಾಜ್ಯದ ಎಲ್ಲ 224 ಕ್ಷೇತ್ರಗಳಲ್ಲಿ ಅಭ್ಯರ್ಥಿಗಳನ್ನು ಕಣಕ್ಕಿಳಿಸುವ ಗುರಿ ಹೊಂದಿದ್ದು, ಅದರ ಮೂಲಕ ರಾಜ್ಯದಲ್ಲಿ ಹೊಸ ರಾಜಕೀಯ ಬದಲಾವಣೆಗೆ ಮುನ್ನುಡಿ ಬರೆಯುವ ಸಂಕಲ್ಪ ಮಾಡಲಾಗಿದೆ. ಈ ಪ್ರಯತ್ನ ಯಶಸ್ವಿಯಾಗಲು ಯುವಜನರು, ರೈತರು, ಕಾರ್ಮಿಕರು, ಮಹಿಳೆಯರು, ವಿದ್ಯಾರ್ಥಿಗಳು, ದಲಿತರು, ಹಿಂದುಳಿದ ವರ್ಗಗಳು, ಅಲ್ಪಸಂಖ್ಯಾತರು ಹಾಗೂ ಸಮಾಜದ ಎಲ್ಲ ವರ್ಗದ ಜನರು ಕೈಜೋಡಿಸಬೇಕೆಂದು ಮನವಿ ಮಾಡಿದರು.

ಇಂದಿನ ರಾಜಕೀಯ ವ್ಯವಸ್ಥೆಯಲ್ಲಿ ಜನಸಾಮಾನ್ಯರಿಗೆ ಸಮರ್ಪಕ ಪ್ರತಿನಿಧಿತ್ವ ದೊರೆಯುತ್ತಿಲ್ಲ. ಅಧಿಕಾರ ಕೇಂದ್ರೀಕೃತ ರಾಜಕಾರಣಕ್ಕೆ ಪರ್ಯಾಯವಾಗಿ ಜನಪರ, ಪಾರದರ್ಶಕ ಮತ್ತು ಸಂವಿಧಾನಬದ್ಧ ರಾಜಕೀಯ ವ್ಯವಸ್ಥೆಯನ್ನು

3ನೇಯ ಪುಟಕ್ಕೆ

ಕಾರುಣ್ಯ ಆಶ್ರಮದಲ್ಲಿ ಹಂಪನಗೌಡ ಬಾದರ್ಲಿ ಅಭಿಮಾನಿಗಳಿಂದ ಮಹಾಪ್ರಸಾದ ಸೇವೆ

ಸಿಂಧನೂರು :5-7-2026: ಹಂಪನಗೌಡ ಬಾದರ್ಲಿ ಅಭಿಮಾನಿ ಬಳಗ. ಸಿಂಧನೂರು ನಗರ ಅಭಿವೃದ್ಧಿ ಪ್ರಾಧಿಕಾರದ (ಸುಡಾ) ಅಧ್ಯಕ್ಷರಾದ.ವೆಂಕನಗೌಡ (ಬಾಬು ಗೌಡ) ಬಾದರ್ಲಿ ಇವರ ನೇತೃತ್ವದಲ್ಲಿ ಹಂಪನಗೌಡ ಬಾದರ್ಲಿ ಅವರಿಗೆ. ಡಿಕೆ ಶಿವಕುಮಾರ್ ಸಂಪುಟದಲ್ಲಿ ಸಚಿವ ಸ್ಥಾನ ದೊರೆಯಲಿ ಎನ್ನುವ ವಿಶೇಷ ಸಂಕಲ್ಪದೊಂದಿಗೆ. ಕಾರುಣ್ಯ ಆಶ್ರಮದಲ್ಲಿ ವಿವಿಧ ಬಗೆಯ ಮಹಾಪ್ರಸಾದ ಸೇವೆಯನ್ನು ಸಲ್ಲಿಸಿ ಪ್ರಾರ್ಥನೆ ಮಾಡಲಾಯಿತು. ಈ ಕಾರ್ಯಕ್ರಮದಲ್ಲಿ ಆಶ್ರಮದ ಕಾರ್ಯಾಧ್ಯಕ್ಷರಾದ. ಡಾಕ್ಟರ್ ಚನ್ನಬಸವ ಸ್ವಾಮಿ ಹಿರೇಮಠ ಮಾತನಾಡಿ. ನಮ್ಮ ಸಿಂಧನೂರಿನ ಜನಪ್ರಿಯ ಶಾಸಕರು ಹಿರಿಯ ಅನುಭವಿ ರಾಜಕಾರಣಿಗಳು ಹಾಗೂ ಐದು ಬಾರಿ ಶಾಸಕರಾಗಿ ಆಯ್ಕೆಯಾದ ಹಂಪನಗೌಡ ಬಾದರ್ಲಿ ಇವರಿಗೆ. ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ಸಂಪುಟದಲ್ಲಿ ಸಚಿವ ಸ್ಥಾನ ದೊರೆಯಬೇಕೆಂದು ಸಿಂಧನೂರಿನ ಜನತೆಯ ಆಶಯವಾಗಿದೆ. ಅವರ ನಿರಂತರ



ಜನಪರ ಕಾರ್ಯಗಳು ಮತ್ತು ತಾಲೂಕಿನ ಅಭಿವೃದ್ಧಿ ಮತ್ತು ರೈತರ ಕಾಳಜಿ ಅಂಶಗಳನ್ನು ಗಮನದಲ್ಲಿಟ್ಟುಕೊಂಡು.

3ನೇಯ ಪುಟಕ್ಕೆ

ಎಂ.ಎಸ್.ಪಾಟೀಲರ ಅಭಿನಂದನಾ ಸಮಾರಂಭ, ಗ್ರಂಥ ಲೋಕಾರ್ಪಣೆ

ರಾಯಚೂರು,ಜು.6-

ರಾಜಕೀಯದಲ್ಲಿ ತೀವ್ರ ಪೈಪೋಟಿ ನಡೆಸಿದ ಎದುರಾಳಿಗಳೇ ಇಂದು ವ್ಯಕ್ತಿತ್ವ, ಅಭಿವೃದ್ಧಿ ದೃಷ್ಟಿಕೋನ ಮತ್ತು ಸಾರ್ವಜನಿಕ ಸೇವೆಯನ್ನು ಗೌರವಿಸಿ ಒಂದೇ ವೇದಿಕೆಯಲ್ಲಿ ಸೇರುವ ಅಪರೂಪದ ಸಮಾರಂಭಕ್ಕೆ ರಾಯಚೂರು ನಗರ ಸಾಕ್ಷಿಯಾಗಲಿದೆ. ಮಾಜಿ ಸಚಿವ ಎಂ.ಎಸ್. ಪಾಟೀಲ ಅವರ 87ನೇ ಜನ್ಮದಿನದ ಅಂಗವಾಗಿ ಅಭಿವೃದ್ಧಿ ಚಿಂತಕರಾದ ಮುತ್ಸದ್ದಿ ರಾಜಕಾರಣಿ ಎಂ.ಎಸ್. ಪಾಟೀಲ ಅಭಿನಂದನಾ ಗ್ರಂಥದ ಲೋಕಾರ್ಪಣೆ ಹಾಗೂ ಅಭಿನಂದನಾ ಸಮಾರಂಭವನ್ನು ಜುಲೈ 8ರಂದು ಬೆಳಿಗ್ಗೆ 10.30ಕ್ಕೆ ನಗರದ ಗಂಜ್ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಳ್ಳಲಾಗಿದೆ.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ನಡೆದ



ಸುದ್ದಿಗೋಷ್ಠಿಯಲ್ಲಿ ಅಭಿನಂದನಾ ಸಮಿತಿ ಅಧ್ಯಕ್ಷ ಹಾಗೂ ಮಾಜಿ ಶಾಸಕ ಎ. ಪಾಪಾರೆಡ್ಡಿ ಮಾತನಾಡಿ, ರಾಜಕೀಯದಲ್ಲಿ ನಾವು ಎಷ್ಟೇ ವಿರೋಧಿಗಳಾಗಿದ್ದರೂ ಎಂ.ಎಸ್. ಪಾಟೀಲ ಅವರು ಎಂದಿಗೂ ವೈಯಕ್ತಿಕ ದ್ವೇಷ ಬೆಳೆಸಲಿಲ್ಲ. 1990ರಲ್ಲಿ ನಾನು ಶಾಸಕರಾಗಿದ್ದಾಗ ನಗರ ಅಭಿವೃದ್ಧಿಗೆ ಸಂಬಂಧಿಸಿದ ಅನೇಕ ಕೆಲಸಗಳಿಗೆ ಅವರು ಬೆಂಬಲವಾಗಿ ನಿಂತಿದ್ದರು. ನಗರಸಭೆಯಲ್ಲಿ ಯಾವುದೇ ವಿಚಾರ ಬಂದರೂ ಅಭಿವೃದ್ಧಿಯ ದೃಷ್ಟಿಯಿಂದ ಸಹಕಾರ ನೀಡುತ್ತಿದ್ದರು. ನನ್ನನ್ನು ಸೋಲಿಸಲು ರಾಜಕೀಯವಾಗಿ ಹೋರಾಡಿದ್ದರೂ, ಸಾರ್ವಜನಿಕ ಹಿತಾಸಕ್ತಿಯ ವಿಷಯದಲ್ಲಿ ಎಂದಿಗೂ ರಾಜಕೀಯ ಮಾಡಲಿಲ್ಲ. ಇಂದು ಅವರ ಆರೋಗ್ಯದ ಸ್ಥಿತಿ ನೋಡಿ ಅವರಿಗೆ ಗೌರವ ಸಲ್ಲಿಸಬೇಕೆಂಬ ಭಾವನೆ ಮೂಡಿದ್ದು, ಅದಕ್ಕಾಗಿ ಈ ಅಭಿನಂದನಾ ಸಮಾರಂಭ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಜುಲೈ 8ರಂದು ಎಂ.ಎಸ್. ಪಾಟೀಲ ಅವರ 87ನೇ ಹುಟ್ಟುಹಬ್ಬವೂ ಆಗಿರುವುದರಿಂದ ಅದೇ ದಿನ ಅವರ ಸಾರ್ವಜನಿಕ ಬದುಕು, ಅಭಿವೃದ್ಧಿ ಕಾರ್ಯಗಳು ಮತ್ತು ರಾಜಕೀಯ ಕೊಡುಗೆಗಳನ್ನು ದಾಖಲಿಸುವ ಅಭಿನಂದನಾ ಗ್ರಂಥವನ್ನು ಲೋಕಾರ್ಪಣೆ ಮಾಡಿ ಸನ್ಮಾನಿಸಲಾಗುವುದು ಎಂದು ಹೇಳಿದರು.

ನಗರ ಶಾಸಕ ಡಾ. ಎಸ್. ಶಿವರಾಜ ಪಾಟೀಲ ಮಾತನಾಡಿ, ರಾಜಕೀಯದಲ್ಲಿ ಒಬ್ಬರ ವಿರುದ್ಧ ಮತ್ತೊಬ್ಬರು ಚುನಾವಣೆ ಎದುರಿಸಿ, ಬಳಿಕ ಅವರ ಸಾಧನೆಯನ್ನು ಗುರುತಿಸಿ ಗ್ರಂಥ ರಚಿಸಿ ಸಾರ್ವಜನಿಕವಾಗಿ ಅಭಿನಂದಿಸುವುದು ಅಪರೂಪದ ಸಂಗತಿ. ಇಂತಹ ಕಾರ್ಯಕ್ರಮಗಳು ರಾಜಕೀಯ ಸಂಸ್ಕೃತಿಗೆ ಮಾದರಿಯಾಗಲಿದ್ದು, ಎ. ಪಾಪಾರೆಡ್ಡಿ ಅವರ ವಿಶಾಲ ಮನೋಭಾವಕ್ಕೆ ಇದು ಸಾಕ್ಷಿಯಾಗಿದೆ ಎಂದು ಹೇಳಿದರು.

ಕಾರ್ಯಕ್ರಮಕ್ಕೆ ವಿವಿಧ ಮಠಗಳ ಪೂಜ್ಯ ಸ್ವಾಮೀಜಿಗಳು ದಿವ್ಯ ಸಾನಿಧ್ಯ ವಹಿಸಲಿದ್ದಾರೆ. ಶಾಸಕ ಡಾ. ಎಸ್. ಶಿವರಾಜ ಪಾಟೀಲ

3ನೇಯ ಪುಟಕ್ಕೆ

ಗ್ರಾ.ಪಂ. ದಾಖಲೆ ಕಳವುಹಣ ದುರುಪಯೋಗಕ್ಕೆ ಹೊಸ ತಿರುವು

ರಾಯಚೂರು, ಜು.6

ಸಿಂಧನೂರು ತಾಲೂಕಿನ ಆರ್.ಹೆಚ್.ನಂ.1 ಗ್ರಾಮ ಪಂಚಾಯತಿಯಲ್ಲಿ ಸರ್ಕಾರಿ ದಾಖಲೆಗಳ ಕಳವು, ದಾಖಲೆ ತಿರುಚುವ ಯತ್ನ ಹಾಗೂ ಸರ್ಕಾರಿ ಹಣದ ದುರುಪಯೋಗ ನಡೆದಿದೆ ಎಂಬ ಗಂಭೀರ ಆರೋಪಗಳು ಮತ್ತೆ ಮುನ್ನೆಲೆಗೆ ಬಂದಿವೆ. ಪ್ರಕರಣದ ಕುರಿತು ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕೆಂದು ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷ ಎಂ. ರಹಮತ್ ಪಾಷಾ ಆಗ್ರಹಿಸಿದರು.



ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2021ರಿಂದ 2024ರವರೆಗೆ ಕರ್ತವ್ಯ ನಿರ್ವಹಿಸಿದ್ದ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಪೂರ್ಣಿಮಾ ವಿರುದ್ಧ ಸಲ್ಲಿಸಿದ್ದ ದೂರಿನ ತನಿಖೆಯಲ್ಲಿ ಆರೋಪಗಳು ಸಾಬೀತಾದ ಹಿನ್ನೆಲೆಯಲ್ಲಿ ಅವರನ್ನು ಅಮಾನತುಗೊಳಿಸಲಾಗಿದೆ ಎಂದು ಹೇಳಿದರು.

ಅಮಾನತ್ತಿನ ಬಳಿಕ ಪಂಚಾಯತಿಯ ಹಲವು ಸರ್ಕಾರಿ ದಾಖಲೆಗಳು ಕಚೇರಿಯಲ್ಲಿ ಲಭ್ಯವಿಲ್ಲ ಎಂದು ಹಿಂದಿನ ಹಾಗೂ ಹಾಲಿ ಅಧಿಕಾರಿಗಳು ಲಿಖಿತವಾಗಿ ತಿಳಿಸಿದ್ದರೂ, ಬಳಿಕ ಅದೇ ದಾಖಲೆಗಳು ಅನುಮಾನಾಸ್ಪದ ರೀತಿಯಲ್ಲಿ ಮತ್ತೆ ಕಚೇರಿಗೆ ಬಂದಿರುವುದು ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದೆ ಎಂದು ಆರೋಪಿಸಿದರು. ಡಾಟಾ ಎಂಟ್ರಿ ಆಪರೇಟರ್ ಪ್ರೀತಮ್ ಸರ್ದಾರ ದಾಖಲೆಗಳನ್ನು ಕಚೇರಿಗೆ ತಂದು ಇಟ್ಟಿರುವ ದೃಶ್ಯಗಳು ಸಿಸಿಟಿವಿಯಲ್ಲಿ ಸೆರೆಯಾಗಿದ್ದು, ಅದರ ಸಿಡಿಯನ್ನು ಸಂಬಂಧಪಟ್ಟ ಅಧಿಕಾರಿಗಳಿಗೆ ಸಲ್ಲಿಸಲಾಗಿದೆ ಎಂದು ತಿಳಿಸಿದರು.

ಡಾಟಾ ಎಂಟ್ರಿ ಆಪರೇಟರ್ ಪ್ರೀತಮ್ ಸರ್ದಾರ ಅವರು ಸರ್ಕಾರಿ ಸೇವೆಯಲ್ಲಿದ್ದರೂ ಮತ್ತೊಂದು ಗ್ರಾಮ ಪಂಚಾಯತಿಯ ಕೆಲಸ ಮಾಡಿಕೊಡುವುದಾಗಿ ಹೇಳಿ ಮೂರು ಕಂತುಗಳಲ್ಲಿ ಒಟ್ಟು ₹15 ಸಾವಿರವನ್ನು ತಮ್ಮ ವೈಯಕ್ತಿಕ ಬ್ಯಾಂಕ್ ಖಾತೆಗೆ ವರ್ಗಾಯಿಸಿ ಕೊಂಡಿರುವ ದಾಖಲೆಗಳು ತಮ್ಮ ಬಳಿ ಇವೆ ಎಂದು ಅವರು ದೂರಿದರು.

ಈ ಸಂಬಂಧ ಸರ್ಕಾರ, ಜಿಲ್ಲಾ ಪಂಚಾಯಿತಿ ಹಾಗೂ ಸಂಬಂಧಪಟ್ಟ ಅಧಿಕಾರಿಗಳಿಗೆ ಹಲವು ಬಾರಿ

3ನೇಯ ಪುಟಕ್ಕೆ

ಕ.ಕರ್ನಾಟಕ ಶೈಕ್ಷಣಿಕವಾಗಿ ಅಭಿವೃದ್ಧಿ ಆಗಲಿ. ಪ್ರೊ. ಶಿವಾನಂದ ಕೆಳಗಿನಮನಿ

ರಾಯಚೂರು ಜು. 6.

ಕಲ್ಯಾಣ ಕರ್ನಾಟಕದ ಶೈಕ್ಷಣಿಕ ಗುಣಮಟ್ಟವನ್ನು ಉನ್ನತಿಕರಿಸಲು ನಮ್ಮ ವಿಶ್ವವಿದ್ಯಾಲಯ ನಿರಂತರ ಪರಿಶ್ರಮಿಸುತ್ತದೆ ಅದರೊಂದಿಗೆ ಈ ಭಾಗದ ಸಾಮಾಜಿಕ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವಲ್ಲಿ ಈ ಭಾಗದ ಜನಪ್ರತಿನಿಧಿಗಳು, ಸಾಹಿತಿಗಳು ಹಾಗೂ ತಮ್ಮೆಲ್ಲರ ಸಹಕಾರದಿಂದ ಮುಂದಿನ ದಿನಗಳಲ್ಲಿ ನಮ್ಮ ಆದಿಕವಿ ಮಹರ್ಷಿ ಶ್ರೀ ವಾಲ್ಮೀಕಿ ವಿಶ್ವವಿದ್ಯಾನಿಲಯ ಪ್ರಯತ್ನಿಸುತ್ತದೆ ಎಂದು ಹೇಳಲು ಖುಷಿಯಾಗುತ್ತದೆ ಅದರೊಂದಿಗೆ ಈ ಎರಡು ಜಿಲ್ಲೆಗಳ ಶೈಕ್ಷಣಿಕ ಗುಣಮಟ್ಟವನ್ನು ಅಂದರೆ ಅದರಲ್ಲಿ ಮುಖ್ಯವಾಗಿ ಉನ್ನತ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಬೇಕಾಗಿರುವುದನ್ನು ಕಂಡುಕೊಂಡಿದ್ದೇನೆ ಈ ಭಾಗದ ಅನೇಕ ಸಮಸ್ಯೆಗಳಿಗೆ ಸಂಶೋಧನಾತ್ಮಕ ಪರಿಹಾರಗಳನ್ನು



ಕಂಡುಕೊಳ್ಳಲು ಸಾಧ್ಯವಿದೆ ಅದನ್ನು ಮುಂದಿನ ದಿನಗಳಲ್ಲಿ ನಮ್ಮ ವಿಶ್ವವಿದ್ಯಾಲಯ ಎಲ್ಲಾ ಪ್ರಯತ್ನ ಮಾಡುತ್ತದೆ. ಆದರೆ ಇದರೊಂದಿಗೆ ತಮ್ಮೆಲ್ಲರ ಸಹಕಾರವಿದ್ದರೆ ಈ ವಿಶ್ವವಿದ್ಯಾಲಯವನ್ನು ರಾಜ್ಯವು ಟ್ಟದ ಮಾದರಿ ವಿಶ್ವವಿದ್ಯಾನಿಲಯ ಮಾಡುವುದರಲ್ಲಿ ತಮ್ಮೆಲ್ಲರ ಸಹಕಾರ ನನಗೆ ಬೇಕಾಗುತ್ತದೆ. ಈಗ ತಾವೆಲ್ಲರೂ ನನ್ನ ಒಂದು ವರ್ಷದ ಕಾರ್ಯವಿಧಾನವನ್ನು ಪರಿಗಣಿಸಿ ಅಭಿನಂದಿಸುತ್ತಿರುವುದಕ್ಕೆ ತಮ್ಮೆಲ್ಲರಿಗೂ ನಾನು ಋಣಿಯಾಗಿರುತ್ತೇನೆ ಎಂದು ಆದಿಕವಿ ಮಹರ್ಷಿ ಶ್ರೀ ವಾಲ್ಮೀಕಿ ವಿಶ್ವವಿದ್ಯಾನಿಲಯದ ಗೌರವಾನ್ವಿತ ಕುಲಪತಿಗಳಾದ ಪ್ರೊ ಶಿವಾನಂದ ಕೆಳಗಿನಮನಿ ಅವರು ಅಭಿನಂದನೆಯನ್ನು ಸ್ವೀಕರಿಸಿ ಮಾತನಾಡಿದರು.

ಕಲಾ ಸಂಕುಲ ಸಂಸ್ಥೆ (ರಿ). ಹಾಗೂ ಲೋಹಿಯಾ ಪ್ರತಿಷ್ಠಾನ ಇವರ ಸಹಯೋಗದಲ್ಲಿ ಗೌರವಾನ್ವಿತ ಕುಲಪತಿಗಳಿಗೆ ಅಭಿನಂದನಾ ಸಮಾ

3ನೇಯ ಪುಟಕ್ಕೆ

ಗೌಡೂರು ಗ್ರಾಮ ಪಂಚಾಯಿತಿಯಲ್ಲಿ ಸ್ವಚ್ಛತೆ ಹಾಗೂ ಅಭಿವೃದ್ಧಿ ಕಾಮಗಾರಿಗಳಿಗೆ ತುರ್ತು ಕ್ರಮಕ್ಕೆ ಆಗ್ರಹ

ಗೌಡೂರು, ಜು.06-

ಗೌಡೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ವಿವಿಧ ವಾರ್ಡ್‌ಗಳಲ್ಲಿ ಚರಂಡಿಗಳ ಸ್ವಚ್ಛತೆ, ಕೊಳಚೆ ನೀರಿನ ನಿರ್ವಹಣೆ ಹಾಗೂ ಮೂಲಭೂತ ಸೌಲಭ್ಯಗಳ ಅಭಿವೃದ್ಧಿ ಕಾಮಗಾರಿಗಳನ್ನು ತುರ್ತಾಗಿ ಕೈಗೊಳ್ಳುವಂತೆ ಗ್ರಾಮ ಪಂಚಾಯಿತಿಯ ಆಡಳಿತಾಧಿಕಾರಿಗಳು ಮತ್ತು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದೆ.

ಮನವಿಯಲ್ಲಿ, ಗ್ರಾಮದ ವಿವಿಧ ವಾರ್ಡ್‌ಗಳು ಹಾಗೂ ಮುಖ್ಯ ರಸ್ತೆಗಳಿಗೆ ಹೊಂದಿಕೊಂಡಿರುವ ಚರಂಡಿಗಳಲ್ಲಿ ಕೊಳಚೆ ನೀರು ನಿಂತು ಉಕ್ಕಿ ಹರಿಯುತ್ತಿರುವು



ದರಿಂದ ತೀವ್ರ ದುರ್ವಾಸನೆ ಉಂಟಾಗುತ್ತಿದ್ದು, ಸಾರ್ವಜನಿಕರ ಆರೋಗ್ಯಕ್ಕೆ ಧಕ್ಕೆ ಉಂಟಾಗುವ ಸಾಧ್ಯತೆ ಹೆಚ್ಚಾಗಿದೆ ಎಂದು ತಿಳಿಸಲಾಗಿದೆ. ಚರಂಡಿಗಳಲ್ಲಿ ಕಸ- ಕಡ್ಡಿಗಳು ಸಂಗ್ರಹವಾಗಿರುವು ದರಿಂದ ನೀರು ಸರಾಗವಾಗಿ ಹರಿ ಯದೆ ಕೊಳಚೆ ವಾತಾವರಣ ನಿರ್ಮಾಣವಾಗಿದ್ದು, ಸಾಂಕ್ರಾಮಿಕ ರೋಗಗಳು ಹರಡುವ ಆತಂಕ ಎದುರಾಗಿದೆ ಎಂದು ಉಲ್ಲೇಖಿಸಲಾಗಿದೆ.

ಗ್ರಾಮದಲ್ಲಿ ಸ್ವಚ್ಛತಾ ಕಾರ್ಯಗಳಿಗೆ ಅಗತ್ಯ ಮಾನವ ಸಂಪನ್ಮೂಲ ಮತ್ತು ಸೌಲಭ್ಯಗಳು

3ನೇಯ ಪುಟಕ್ಕೆ

ಮಾದಕ ವ್ಯಸನದಿಂದ ದೂರವಿದ್ದು ಕಾನೂನು ಅರಿವು ಬೆಳೆಸಿಕೊಳ್ಳಿ: ನ್ಯಾ.ಲಕ್ಷ್ಮೀನಾರಾಯಣ

ಕಲಬುರಗಿ:

ಇಂದಿನ ಯುವಜನತೆ ಹೆತ್ತವರ ನಿರೀಕ್ಷೆಗಳನ್ನು ಈಡೇರಿಸುವಂತೆ ಕಠಿಣ ಪರಿಶ್ರಮದಿಂದ ವಿದ್ಯಾಭ್ಯಾಸ ಮಾಡಿ ಕುಟುಂಬ, ಸಮಾಜ ಹಾಗೂ ದೇಶಕ್ಕೆ ಕೀರ್ತಿ ತರಬೇಕು. ಮಾದಕ ವ್ಯಸನ ಮತ್ತು ಲೈಂಗಿಕ ದೌರ್ಜನ್ಯದಂತಹ ಸಾಮಾಜಿಕ ಪಿಡುಗುಗಳಿಂದ ದೂರವಿದ್ದು, ಕಾನೂನಿನ ಅರಿವಿನೊಂದಿಗೆ ಉತ್ತಮ ಪ್ರಜೆಗಳಾಗಿ ರೂಪುಗೊಳ್ಳಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶ ಜಿ.ಎಲ್. ಲಕ್ಷ್ಮೀನಾರಾಯಣ ಕರೆ ನೀಡಿದರು.



ನಗರದ ಶರಣಬಸವೇಶ್ವರ ವಿಶ್ವವಿದ್ಯಾಲಯದ ಪೂಜ್ಯ ದೊಡ್ಡಪ್ಪ ಅಪ್ಪ ಸಭಾಂಗಣದಲ್ಲಿ ಮಕ್ಕಳ ರಕ್ಷಣಾ ನಿರ್ದೇಶನಾಲಯ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಶ್ರೀ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ''ಪೋಕ್ಸೋ ಕಾಯ್ದೆ ಹಾಗೂ ಮಾದಕ ದ್ರವ್ಯ ವ್ಯಸನ ಮುಕ್ತ'' ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಾಮೀಣ ಭಾಗಗಳಲ್ಲಿ ಚಿಕ್ಕ ವಯಸ್ಸಿನಲ್ಲೇ ಮದ್ಯ, ಗಾಂಜಾ ಹಾಗೂ ತಂಬಾಕು ಸೇವನೆಯಂತಹ ದುಶ್ಚಟಗಳಿಗೆ ಯುವಕರು ಬಲಿಯಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಇಂತಹ ವ್ಯಸನಗಳಿಂದ ಕ್ಯಾನ್ಸರ್ ಸೇರಿದಂತೆ ಮಾರಕ ಕಾಯಿಲೆಗಳು ಉಂಟಾಗುತ್ತಿದ್ದು, ಅಮೂಲ್ಯ ಜೀವಗಳು ಹಾಳಾಗುತ್ತಿವೆ ಎಂದು ವಿಷಾದ ವ್ಯಕ್ತಪಡಿಸಿದರು.

2012ರ ನಿರ್ಭಯ ಪ್ರಕರಣದ ಬಳಿಕ ಮಹಿಳೆಯರು ಮತ್ತು ಮಕ್ಕಳ ರಕ್ಷಣೆಗಾಗಿ ಪೋಕ್ಸೋ ಕಾಯ್ದೆ ಜಾರಿಗೆ ತರಲಾಗಿದೆ. ವಿದ್ಯಾರ್ಥಿಗಳು ದುಷ್ಟ ಆಲೋಚನೆಗಳಿಗೆ ಬಲಿಯಾಗದೆ ಶಿಕ್ಷಣದತ್ತ ಗಮನಹರಿಸಿ ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಜಿಲ್ಲಾ ನ್ಯಾಯಾಧೀಶ ಶಶಿಧರ ಶೆಟ್ಟಿ ಹೆಚ್. ಮಾತನಾಡಿ, ಕಾನೂನಿನ ಅರಿವು ಪ್ರತಿಯೊಬ್ಬರಿಗೂ ಅಗತ್ಯವಾಗಿದೆ. ಜನ್ಮ ಪ್ರಮಾಣಪತ್ರ, ಚಾಲನಾ ಪರವಾನಗಿ, ರಸ್ತೆ ಸುರಕ್ಷತೆ ಸೇರಿದಂತೆ ದೈನಂದಿನ ಬದುಕಿಗೆ ಸಂಬಂಧಿಸಿದ ಮೂಲಭೂತ ಕಾನೂನುಗಳ ಅರಿವು ಹೊಂದಬೇಕು ಎಂದರು.

ಬಡವರು ಮತ್ತು ಕಾರ್ಮಿಕ ವರ್ಗದವರಿಗೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಿಂದ ಉಚಿತ ಕಾನೂನು ನೆರವು ಹಾಗೂ ಲೋಕ ಅದಾಲತ್ ಮೂಲಕ ತ್ವರಿತ ನ್ಯಾಯ ದೊರೆಯುತ್ತಿದೆ ಎಂದು ತಿಳಿಸಿದರು.

18 ವರ್ಷದೊಳಗಿನ ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ತಡೆಗಟ್ಟಲು ಪೋಕ್ಸೋ ಕಾಯ್ದೆ ಪರಿಣಾಮಕಾರಿ ಸಾಧನವಾಗಿದೆ. ಮಕ್ಕಳ ಹಕ್ಕುಗಳ ಉಲ್ಲಂಘನೆಯಾದರೆ ಧೈರ್ಯದಿಂದ ವಿರೋಧಿಸಬೇಕು. ಬಾಲ್ಯ ವಿವಾಹ, ಲೈಂಗಿಕ ದೌರ್ಜನ್ಯ ಅಥವಾ ಮಕ್ಕಳ ಮೇಲಿನ ಯಾವುದೇ ದೌರ್ಜನ್ಯ ಕಂಡುಬಂದರೆ ಮಕ್ಕಳ ಸಹಾಯವಾಣಿ 1098ಕ್ಕೆ ಮಾಹಿತಿ ನೀಡುವಂತೆ ಮನವಿ ಮಾಡಿದರು.

ಮಾದಕ ವಸ್ತುಗಳ ಕಳ್ಳಸಾಗಣೆ ಮತ್ತು ಮಾರಾಟದ ಬಗ್ಗೆ ಮಾಹಿತಿ ದೊರೆತರೆ ಸಾರ್ವಜನಿಕರು 1933 ಸಹಾಯವಾಣಿಗೆ ಕರೆ ಮಾಡಿ ಸಮಾಜದ ರಕ್ಷಣೆಗೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಬಸವರಾಜ ದೇಶಮುಖ ಮಾತನಾಡಿ, ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಕಾನೂನು ಅರಿವನ್ನೂ ಬೆಳೆಸಿಕೊಳ್ಳಬೇಕು. ಎಸ್‌ಎಸ್‌ಎಲ್‌ಸಿ ನಂತರದ ಎರಡು ವರ್ಷಗಳು ಜೀವನದ ಅತ್ಯಂತ ಮಹತ್ವದ ಹಂತವಾಗಿದ್ದು, ಸ್ಪಷ್ಟ ಗುರಿಯೊಂದಿಗೆ ದೇಶದ ಅಭಿವೃದ್ಧಿಗೆ ಕೊಡುಗೆ ನೀಡುವ ನಾಗರಿಕರಾಗಿ ಬೆಳೆಯಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸಾರ್ವಜನಿಕ ಸಂಪರ್ಕ ಅಧಿಕಾರಿ ಬಾಲಸುಬ್ರಮಣಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶ್ರೀನಿವಾಸ ನವಲೆ, ಮಾನವ ಹಕ್ಕುಗಳ ರಕ್ಷಣಾ ಸಂಸ್ಥೆಯ ಸದಸ್ಯ ಮಹೋನ ನಲವಾಡೆ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷ ವಿಶ್ವರಾಧ್ಯ ಕೆ. ಇಜೇರಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿ ಮಂಜುಳಾ ಬಿ. ಪಾಟೀಲ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಂಜುಳಾದೇವಿ ರೆಡ್ಡಿ ಕಾರ್ಯಕ್ರಮ ನಿರೂಪಿಸಿದರೆ, ಭರತೇಶ್ ಶೀಲವಂತ ವಂದಿಸಿದರು.



ಕಲ್ಯಾಣ ಕರ್ನಾಟಕ ವಕೀಲರ ಸಹಕಾರಿ ಸಂಘದ ವಾರ್ಷಿಕ ಸಭೆ

ಸದಸ್ಯರ ಸಹಕಾರದಿಂದ ನಾಲ್ಕು ವರ್ಷಗಳಲ್ಲಿ ಉತ್ತಮ ಬೆಳವಣಿಗೆ: ಅಂಬಾರಾಯ ಪಟ್ಟಣಕರ್

ಕಲಬುರಗಿ:

ನಗರದ ಗುಲ್ಬರ್ಗಾ ಬಾರ್ ಅಸೋಸಿಯೇಷನ್ ಸಭಾಂಗಣದಲ್ಲಿ ಕಲ್ಯಾಣ ಕರ್ನಾಟಕ ವಕೀಲರ ಸೌಹಾರ್ದ ಸಹಕಾರಿ ಸಂಘ ನಿಯಮಿತದ 4ನೇ ವರ್ಷದ ವಾರ್ಷಿಕ ಸರ್ವ ಸದಸ್ಯರ ಸಭೆಯನ್ನು ಗಣ್ಯರು ಉದ್ಘಾಟಿಸಿದರು. ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಂಘದ ಅಧ್ಯಕ್ಷ ನ್ಯಾಯವಾದಿ ಅಂಬಾರಾಯ ಈ. ಪಟ್ಟಣಕರ್, ಸದಸ್ಯರ ಸಹಕಾರ ಮತ್ತು ವಿಶ್ವಾಸದಿಂದ ಸಂಘವು ಕಳೆದ ನಾಲ್ಕು ವರ್ಷಗಳಲ್ಲಿ ಉತ್ತಮ ಬೆಳವಣಿಗೆ ಸಾಧಿಸಿದೆ ಎಂದು ಹೇಳಿದರು.

ಮುಂದಿನ ದಿನಗಳಲ್ಲಿ ಇನ್ನಷ್ಟು ಜನಪರ ಹಾಗೂ ಸದಸ್ಯ ಸ್ನೇಹಿ ಯೋಜನೆಗಳನ್ನು ಜಾರಿಗೆ ತರುವ ಗುರಿಯನ್ನು ಸಂಘ ಹೊಂದಿದ್ದು, ಸದಸ್ಯರ ಹಿತಾಸಕ್ತಿಗೆ ಆದ್ಯತೆ ನೀಡಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಸಂಘದ ಆರ್ಥಿಕ ಪ್ರಗತಿ, ಸದಸ್ಯರ ಕಲ್ಯಾಣ ಕಾರ್ಯಕ್ರಮಗಳು ಹಾಗೂ ಮುಂದಿನ ಅಭಿವೃದ್ಧಿ ಯೋಜನೆಗಳ ಕುರಿತು ಸವಿಸ್ತಾರವಾಗಿ ಮಾಹಿತಿ ನೀಡಲಾಯಿತು.

ಸಭೆಯಲ್ಲಿ ಸಂಘದ ಆಡಳಿತ ಮಂಡಳಿಯ ನಿರ್ದೇಶಕರಾದ ರಾಜಕುಮಾರ ಎಸ್. ಕಡಗಂಚಿ, ರಮೇಶ ಎಸ್. ಕಡಾಳೆ, ಹಣಮಂತ ಎನ್. ಭಾವಿಕಟ್ಟಿ, ದೇವನಾಥ ಎಸ್. ಮಾಳಗಿ, ಹುಲಿಗೆಪ್ಪ ಎನ್. ಕನಕಗಿರಿ, ಸಂತೋಷಕುಮಾರ ಎಂ. ಮರಡಿ, ಸುರೇಶ ಜಿ. ಕುಲಕರ್ಣಿ, ಅಶೋಕ ಎಸ್. ಬೇನೂರ, ಶಿವಲಿಂಗ ಎನ್. ಪಡಶೆಟ್ಟಿ, ವಿಜಯಲಕ್ಷ್ಮೀ ಎಸ್. ಯರಗೋಳ, ಶಿವಕುಮಾರ ಜಿ. ಬೆಳಕೇರಿ, ಮಹ್ಮದ ಖಾದರ ಖಾನ್, ಫತ್ರುಬಿ ಅಬ್ದುಲ್ ಅಜೀಮ್, ನಾಮ ನಿರ್ದೇಶಕರಾದ ರಾಜು ಎಸ್. ಕೊರಳ್ಳಿ ಹಾಗೂ ಸುರೇಶ ಪಾಟೀಲ ಜೋಗೂರ ಉಪಸ್ಥಿತರಿದ್ದರು.

ಸಂಘದ ಮುಖ್ಯ ಕಾರ್ಯನಿರ್ವಾಹಕರಾದ ಅಶ್ವಿನಿ ಎಸ್.ಎಂ. ಅವರು ವಾರ್ಷಿಕ ವರದಿ ಹಾಗೂ ಲೆಕ್ಕಪತ್ರಗಳನ್ನು ಮಂಡಿಸಿದರು. ಸಭೆಯಲ್ಲಿ ವಿವಿಧ ವಿಷಯಗಳ ಕುರಿತು ಚರ್ಚೆ ನಡೆಸಿ, ಸದಸ್ಯರ ಅಭಿಪ್ರಾಯಗಳನ್ನು ಆಲಿಸಲಾಯಿತು.



ವಿಯೆಟ್ನಾಂ ಇಂಡಸ್ಟ್ರಿಯಲ್ ವಿಶ್ವವಿದ್ಯಾಲಯದೊಂದಿಗೆ ಶರಣಬಸವ ವಿವಿ ಒಪ್ಪಂದ

ಕಲಬುರಗಿ.ಜು.06

ಉನ್ನತ ಶಿಕ್ಷಣ, ಸಂಶೋಧನೆ ಹಾಗೂ ಅಂತರರಾಷ್ಟ್ರೀಯ ಶೈಕ್ಷಣಿಕ ಸಹಕಾರವನ್ನು ವಿಸ್ತರಿಸುವ ಉದ್ದೇಶದಿಂದ ಕಲಬುರಗಿಯ ಶರಣಬಸವ ವಿಶ್ವವಿದ್ಯಾಲಯವು ವಿಯೆಟ್ನಾಂನ ಹೋ ಚಿ ಮಿನ್ ಸಿಟಿಯ ಇಂಡಸ್ಟ್ರಿಯಲ್ ವಿಶ್ವವಿದ್ಯಾಲಯದೊ ಂದಿಗೆ ಐದು ವರ್ಷಗಳ ಅವಧಿಯ ಮಹತ್ವದ ತಿಳುವಳಿಕೆ ಒಪ್ಪಂದ (ಎಂಒಯು)ಕ್ಕೆ ಸಹಿ ಹಾಕಿದೆ.

ಒಪ್ಪಂದಕ್ಕೆ ವಿಯೆಟ್ನಾಂ ಇಂಡಸ್ಟ್ರಿಯಲ್ ವಿಶ್ವವಿದ್ಯಾಲಯದ ಡೇಟಾ ಸೈನ್ಸ್ ವಿಭಾಗದ ಮುಖ್ಯಸ್ಥ ಹಾಗೂ ಪ್ರಾಧ್ಯಾಪಕ ಡಾ. ಬುಯಿ ಥನ್ಹ್ ಹಂಗ್ ಮತ್ತು ಶರಣಬಸವ ವಿಶ್ವವಿದ್ಯಾಲಯದ ಕುಲಸಚಿವ ಡಾ. ಲಕ್ಷ್ಮೀ ಪಾಟೀಲ ಮಾಕಾ ಸಹಿ ಹಾಕಿ, ಒಪ್ಪಂದ ಪತ್ರಗಳನ್ನು ಪರಸ್ಪರ ವಿನಿಮಯ ಮಾಡಿಕೊಂಡರು.

ಈ ಸಂದರ್ಭದಲ್ಲಿ ಉಪಕುಲಪತಿ ಪ್ರೊ. ಅನಿಲಕುಮಾರ ಬಿಡವೆ, ಸಂಶೋಧನಾ ನಿರ್ದೇಶಕ ಪ್ರೊ. ವಿ.ಡಿ. ಮೈತ್ರಿ, ಮೌಲ್ಯಮಾಪನ ಕುಲಸಚಿವ ಡಾ. ಎಸ್.ಎಚ್. ಹೊನ್ನಳ್ಳಿ, ಸಂಶೋಧನಾ ಡೀನ್ ಡಾ. ಸುಜಾತಾ ಮಲ್ಲಾಪುರ ಹಾಗೂ ಡೀನ್ ಡಾ. ಶಿವಕುಮಾರ ಜವಳಿಗಿ ಉಪಸ್ಥಿತರಿದ್ದರು.

ಒಪ್ಪಂದದಡಿ ಎರಡೂ ವಿಶ್ವವಿದ್ಯಾಲಯಗಳು ಜಂಟಿ ಸಂಶೋಧನಾ ಯೋಜನೆಗಳು, ರಾಷ್ಟ್ರೀಯ ಹಾಗೂ ಅಂತರ ರಾಷ್ಟ್ರೀಯ ಸಂಶೋಧನಾ ಅನುದಾನ, ಸಂಶೋಧನಾ ಲೇಖನಗಳು, ಪುಸ್ತಕಗಳು ಮತ್ತು ಸಮ್ಮೇಳನ ಪ್ರಬಂಧಗಳ ಪ್ರಕಟಣೆಯಲ್ಲಿ ಸಹಕರಿಸಲಿವೆ.

ಇದಲ್ಲದೆ ಪದವಿ, ಸ್ನಾತಕೋತ್ತರ ಹಾಗೂ ಪಿಎಚ್‌ಡಿ ವಿದ್ಯಾರ್ಥಿಗಳಿಗೆ ಅಲ್ಪಾವಧಿ ಮತ್ತು ದೀರ್ಘಾವಧಿಯ ವಿದ್ಯಾರ್ಥಿ ವಿನಿಮಯ ಕಾರ್ಯಕ್ರಮಗಳು, ಇಂಟರ್ನ್‌ಶಿಪ್, ಪ್ರಾಜೆಕ್ಟ್ ಕಾರ್ಯಗಳು

ಹಾಗೂ ಸಂಶೋಧನಾ ಭೇಟಿಗಳಿಗೆ ಅವಕಾಶ ಕಲ್ಪಿಸಲಾಗುತ್ತದೆ. ಅಧ್ಯಾಪಕರ ಪರಸ್ಪರ ವಿನಿಮಯ, ಬೋಧನೆ ಮತ್ತು ಸಂಶೋಧನಾ ಚಟುವಟಿಕೆಗಳಲ್ಲಿಯೂ ಸಹಭಾಗಿತ್ವ ಇರಲಿದೆ.

ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಸಮ್ಮೇಳನಗಳು, ವಿಚಾರ ಸಂಕಿರಣಗಳು, ಕಾರ್ಯಾಗಾರಗಳು, ಸಿಂಪೋಸಿಯಂಗಳು ಹಾಗೂ ತರಬೇತಿ ಕಾರ್ಯಕ್ರಮಗಳನ್ನು ಜಂಟಿಯಾಗಿ ಆಯೋಜಿಸುವ ಜೊತೆಗೆ, ಸಂಯುಕ್ತ ಸಂಶೋಧನೆಯಿಂದ ಉಂಟಾಗುವ ಬೌದ್ಧಿಕ ಆಸ್ತಿ ಹಕ್ಕುಗಳಿಗೂ ಸ್ಪಷ್ಟ ನಿಯಮಗಳನ್ನು ಒಪ್ಪಂದದಲ್ಲಿ ಸೇರಿಸಲಾಗಿದೆ.

ಈ ಒಪ್ಪಂದದಿಂದ ಶರಣಬಸವ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು ಮತ್ತು ಅಧ್ಯಾಪಕರಿಗೆ ಜಾಗತಿಕ ಮಟ್ಟದ ಸಂಶೋಧನೆ ಹಾಗೂ ಶೈಕ್ಷಣಿಕ ವಿನಿಮಯದ ಹೊಸ ಅವಕಾಶಗಳು ದೊರೆಯಲಿದ್ದು, ವಿಶ್ವವಿದ್ಯಾಲಯದ ಅಂತರರಾಷ್ಟ್ರೀಯ ಶೈಕ್ಷಣಿಕ ಬಾಂಧವ್ಯ ಮತ್ತಷ್ಟು ಬಲಗೊಳ್ಳುವ ನಿರೀಕ್ಷೆ ವ್ಯಕ್ತವಾಗಿದೆ.

ಬರ ಪರಿಸ್ಥಿತಿಯಲ್ಲಿ ಸಾರ್ವಜನಿಕರು ಹತ್ತಿರದ ಆಸ್ಪತ್ರೆಗಳಲ್ಲೇ ಉಚಿತ ಆರೋಗ್ಯ ಸೇವೆ ಪಡೆಯಿರಿ: ಡಿ.ಹೆಚ್.ಓ ಡಾ.ಯಲ್ಲಾ ರಮೇಶ್ ಬಾಬು ಕರೆ

ಬಳ್ಳಾರಿ,ಜು.05-

ಬರದಂತಹ ಕಠಿಣ ಪರಿಸ್ಥಿತಿಯಲ್ಲಿ ರೈತರು ಮತ್ತು ಸಾರ್ವಜನಿಕರು ಆರ್ಥಿಕ ಸಂಕಷ್ಟದ ಜೊತೆಗೆ ಮಾನಸಿಕ ಹಾಗೂ ದೈಹಿಕ ಆರೋಗ್ಯದ ಸಮಸ್ಯೆಗಳನ್ನು ಎದುರಿಸುತ್ತಾರೆ. ಈ ಸಮಯದಲ್ಲಿ ಸಾರ್ವಜನಿಕರು ವಿನಾಕಾರಣ ಖರ್ಚು-ವೆಚ್ಚ ಮಾಡದೆ, ತಮಗೆ ಲಭ್ಯವಿರುವ ಸರ್ಕಾರಿ ಆಸ್ಪತ್ರೆಗಳ ಉಚಿತ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಯಲ್ಲಾ ರಮೇಶ್ ಬಾಬು ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ಹೊರಡಿಸಿರುವ ಅವರು, ಜನರ ಆಸರೆಗಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಗ್ರಾಮ ಮಟ್ಟದಲ್ಲಿ ಹಲವು ವಿಶೇಷ ಮತ್ತು ಉಚಿತ ಆರೋಗ್ಯ ಸೇವೆಗಳನ್ನು ಹಮ್ಮಿಕೊಂಡಿದ್ದು, ಸಾರ್ವಜನಿಕರು ನಗರ ಪ್ರದೇಶಗಳಿಗೆ ಅಲೆಯುವ ಅಗತ್ಯವಿಲ್ಲ ಎಂದು ಅವರು ತಿಳಿಸಿದ್ದಾರೆ.

ಗ್ರಾಮ ಮಟ್ಟದಲ್ಲೇ ವಿಶೇಷ ಆರೋಗ್ಯ ಶಿಬಿರಗಳು:

ಬರದಂತಹ ಸ್ಥಿತಿ ಎದುರಿಸುವ ಹಳ್ಳಿಗಳ ಜನರು ಆಸ್ಪತ್ರೆಗಳಿಗೆ ಅಲೆಯುವುದನ್ನು ತಪ್ಪಿಸಲು ಆರೋಗ್ಯ ಇಲಾಖೆಯೇ ಹಳ್ಳಿಗಳ ಕಡೆಗೆ ಬರಲಿದೆ. ಗ್ರಾಮ ಮಟ್ಟದಲ್ಲಿ ಉಚಿತ ತಪಾಸಣಾ ಶಿಬಿರಗಳನ್ನು ನಡೆಸಿ ರಕ್ತದೊತ್ತಡ, ಮಧುಮೇಹ ಮತ್ತು ಕಣ್ಣಿನ ಉಚಿತ ತಪಾಸಣೆ ಮಾಡಿ, ಅಗತ್ಯ ಮಾತ್ರೆ ಹಾಗೂ ಕನ್ನಡಕಗಳನ್ನು ಉಚಿತವಾಗಿ ನೀಡಲಾಗುವುದು. ಆಸ್ಪತ್ರೆಗಳಿಲ್ಲದ ದೂರದ ಹಳ್ಳಿಗಳಿಗೆ ಸಂಚಾರಿ ಆರೋಗ್ಯ ಘಟಕಗಳು ಭೇಟಿ ನೀಡಿ ಪ್ರಾಥಮಿಕ ಚಿಕಿತ್ಸೆ ಒದಗಿಸಲಿವೆ.



★ಸಾಂಕ್ರಾಮಿಕ ರೋಗಗಳ ತಡೆ ಹಾಗೂ ಕುಡಿಯುವ ನೀರು ಪರೀಕ್ಷೆ:★

ಮಳೆ ಕೊರತೆಯ ಸಮಯದಲ್ಲಿ ನೀರಿನ ಅಭಾವದಿಂದ ಕಾಮಾಲೆ, ಕಾಲರಾ, ಟೈಫಾಯಿಡ್ ಮತ್ತು ಚರ್ಮರೋಗಗಳಂತಹ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆ ಹೆಚ್ಚಿರುತ್ತದೆ. ಇಂತಹ ಸಮಸ್ಯೆಗಳಿಗೆ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಸಂಪೂರ್ಣ ಉಚಿತ ತಪಾಸಣೆ ಹಾಗೂ ಔಷಧಿ ನೀಡಲಾಗುವುದು. ಗ್ರಾಮೀಣ ಭಾಗದ ನೀರಿನ ಮೂಲಗಳಾದ ಬೋರ್‌ವೆಲ್ ಹಾಗೂ ಟ್ಯಾಂಕರ್ ನೀರನ್ನು ನಿಯಮಿತವಾಗಿ ಕ್ಲೋರಿನೇಷನ್ ಮಾಡಲು ಮತ್ತು ನೀರಿನ ಗುಣಮಟ್ಟವನ್ನು ಉಚಿತವಾಗಿ ಜೈವಿಕ ಪರೀಕ್ಷೆ ಮಾಡಲು ಇಲಾಖೆ ಕ್ರಮ ಕೈಗೊಂಡಿದೆ.

★ಗರ್ಭಿಣಿಯರು, ಬಾಣಂತಿಯರು ಮತ್ತು ಮಕ್ಕಳಿಗೆ ಪೌಷ್ಟಿಕಾಂಶ:★

ಆರ್ಥಿಕ ಮುಗ್ಗಟ್ಟಿನಿಂದಾಗಿ ಮಹಿಳೆಯರು ಮತ್ತು ಮಕ್ಕಳಲ್ಲಿ ಪೌಷ್ಟಿಕಾಂಶದ ಕೊರತೆ ಕಾಡದಂತೆ ತಡೆಯಲು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಸಹಯೋಗ'ದೊಂದಿಗೆ ವಿಶೇಷ ಸೇವೆ ನೀಡಲಾಗುತ್ತಿದೆ. ಗರ್ಭಿಣಿ ಮತ್ತು ಬಾಣಂತಿಯರಿಗೆ ರಕ್ತಹೀನತೆ ತಡೆಯಲು ಕಬ್ಬಿಣದಂಶ ಹಾಗೂ ಫೋಲಿಕ್ ಆಸಿಡ್ ಮಾತ್ರೆಗಳನ್ನು ಉಚಿತವಾಗಿ ನೀಡಲಾಗುವುದು. ಅಪೌಷ್ಟಿಕತೆಯಿಂದ ಬಳಲುವ ಮಕ್ಕಳನ್ನು ಗುರುತಿಸಿ ಅವರಿಗೆ ಉಚಿತ ಪೌಷ್ಟಿಕ ಆಹಾರದ ಕಿಟ್‌ಗಳು ಮತ್ತು ಚಿಕಿತ್ಸೆ ನೀಡಲಾಗುತ್ತದೆ.

★ಉಚಿತ ತುರ್ತು ಸೇವೆ ಹಾಗೂ ರೂ.5 ಲಕ್ಷದವರೆಗೆ ಆರೋಗ್ಯ ವಿಮೆ:★

ಆಯುಷ್ಮಾನ್ ಭಾರತ್ - ಆರೋಗ್ಯ ಕರ್ನಾಟಕ ಯೋಜನೆಯಡಿ ಬರಗಾಲದ ಸಮಯದಲ್ಲಿ ಬರುವ ಯಾವುದೇ ದೊಡ್ಡ ಕಾಯಿಲೆ ಅಥವಾ ಶಸ್ತ್ರಚಿಕಿತ್ಸೆಗೆ ನೋಂದಾಯಿತ ಆಸ್ಪತ್ರೆಗಳಲ್ಲಿ ರೈತರಿಗೆ ಹಾಗೂ ಕೂಲಿ ಕಾರ್ಮಿಕ ಕುಟುಂಬಗಳಿಗೆ ವರ್ಷಕ್ಕೆ ರೂ.5 ಲಕ್ಷದವರೆಗೆ ಸಂಪೂರ್ಣ ಉಚಿತ ನಗದು ರಹಿತ ಚಿಕಿತ್ಸೆ ಸಿಗಲಿದೆ. ಯಾವುದೇ ತುರ್ತು ಆರೋಗ್ಯ ಸಮಸ್ಯೆಯ ಸಂದರ್ಭದಲ್ಲಿ ರೋಗಿಗಳನ್ನು ಉಚಿತವಾಗಿ ಹತ್ತಿರದ ಆಸ್ಪತ್ರೆಗೆ ಸಾಗಿಸಲು 108 ಆಂಬ್ಯುಲೆನ್ಸ್ ಸೇವೆ ಸದಾ ಲಭ್ಯವಿರುತ್ತದೆ.

★ರೈತರ ಮಾನಸಿಕ ಒತ್ತಡ ನಿವಾರಣೆಗೆ ಉಚಿತ ಆಪ್ತಸಮಾಲೋಚನೆ:★

ಬೆಳೆ ನಷ್ಟ ಮತ್ತು ಸಾಲದ ಸುಳಿಗೆ ಸಿಲುಕಿ ರೈತರು ತೀವ್ರ ಮಾನಸಿಕ ಒತ್ತಡಕ್ಕೆ ಒಳಗಾಗುವುದನ್ನು ತಡೆಯಲು ಇಲಾಖೆ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. 'ಮನೋಚೈತನ್ಯ' ಯೋಜನೆಯಡಿ ತಾಲ್ಲೂಕು ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳ ಮಟ್ಟದಲ್ಲಿ ರೈತರಿಗಾಗಿ ಉಚಿತ ಮಾನಸಿಕ ಸಮಾಲೋಚನೆ ಶಿಬಿರಗಳನ್ನು ನಡೆಸಿ, ಮಾನಸಿಕ ತಜ್ಞರಿಂದ ಧೈರ್ಯ ತುಂಬುವ ಕೆಲಸ ಮಾಡಲಾಗುವುದು.

ಟೆಲಿ-ಮನಸ್ ಕಾರ್ಯಕ್ರಮ ದಡಿ ರೈತರು ತಮಗಾಗುವ ತೀವ್ರ ಮಾನಸಿಕ ಒತ್ತಡ ಅಥವಾ ಖಿನ್ನತೆಯ ಸಮಯದಲ್ಲಿ 14416 ಸಂಖ್ಯೆಗೆ ಕರೆ ಮಾಡಿ ದಿನದ 24 ಗಂಟೆಯೂ ಉಚಿತವಾಗಿ ತಜ್ಞರಿಂದ ಆಪ್ತಸಮಾಲೋಚನೆ ಮತ್ತು ಮಾರ್ಗದರ್ಶನ ಪಡೆಯಬಹುದು ಎಂದು ಅವರು ತಿಳಿಸಿದ್ದಾರೆ.

ಗ್ರಾಮಕ್ಕೆ ಬರುವ ಆಶಾ ಕಾರ್ಯಕರ್ತೆಯರು ಅಥವಾ ಆರೋಗ್ಯ ಕ್ಷೇಮ ಕೇಂದ್ರದ ಸಿಬ್ಬಂದಿಯನ್ನು ಸಂಪರ್ಕಿಸಿ ಈ ಎಲ್ಲಾ ಸೌಲಭ್ಯಗಳನ್ನು ಉಚಿತವಾಗಿ ಪಡೆದುಕೊಳ್ಳಬಹುದು. ಯಾವುದೇ ಆರೋಗ್ಯ ನೆರವಿಗಾಗಿ ಇಲಾಖೆಯ ಸಹಾಯವಾಣಿ ಸಂಖ್ಯೆ 7353183474 ಗೆ ಕರೆ ಮಾಡಬಹುದು ಎಂದು ಡಿ.ಹೆಚ್.ಓ ಡಾ. ಯಲ್ಲಾ ರಮೇಶ್ ಬಾಬು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸ್ವಚ್ಛತಾ ಪಖ್ವಾಡ 2026ರ ಅಡಿಯಲ್ಲಿ ಬೀದರ್ ಕೇಂದ್ರ ಬಸ್ ನಿಲ್ದಾಣದಲ್ಲಿ ಬಿಪಿಸಿಎಲ್ ಸಿಜಿಡಿ ಬೀದರ್ ಸ್ವಚ್ಛತಾ ಅಭಿಯಾನ

ಬೀದರ್, ಜು.06-

ಭಾರತ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್ (ಬಿಪಿಸಿಎಲ್), ಸಿಜಿಡಿ (ಬಿಡಾರ್ ಜಿಎ), ದೇಶಾದ್ಯಂತ ಸ್ವಚ್ಛತಾ ಪಖ್ವಾಡ 2026ರ ಅಡಿಯಲ್ಲಿ ಬೀದರ್ ಕೇಂದ್ರ ಬಸ್ ನಿಲ್ದಾಣದಲ್ಲಿ ಸ್ವಚ್ಛತಾ ಅಭಿಯಾನವನ್ನು ಯಶಸ್ವಿಯಾಗಿ ಆಯೋಜಿಸಲಾಯಿತು.

ಪ್ರಯಾಣಿಕರು, ಸಿಬ್ಬಂದಿ ಮತ್ತು ಸಾರ್ವಜನಿಕರಲ್ಲಿ ನೈರ್ಮಲ್ಯ ಜಾಗೃತಿಯನ್ನು ಉತ್ತೇಜಿಸುವ ಉದ್ದೇಶದಿಂದ ಬಸ್ ನಿಲ್ದಾಣದ ಆವರಣದಲ್ಲಿ ಸಮಗ್ರ ಸ್ವಚ್ಛತಾ ಅಭಿಯಾನವನ್ನು ನಡೆಸಲಾಯಿತು.

ಕೆಕೆಆರ್‌ಟಿಸಿ ಬೀದರ್ ವಿಭಾಗದಿಂದ ಈ ಅಭಿಯಾನಕ್ಕೆ ಬಲವಾದ ಬೆಂಬಲ ದೊರೆಯಿತು. ವಿಭಾಗೀಯ ನಿಯಂತ್ರಕ ಶ್ರೀ ರಾಘವೇಂದ್ರ ಜಾಧವ್ ಮತ್ತು ಅವರ ತಂಡವು ಸಕ್ರಿಯವಾಗಿ ಭಾಗವಹಿಸಿ ಕಾರ್ಯಕ್ರಮದ ಉದ್ದಕ್ಕೂ ಸಂಪೂರ್ಣ ಸಹಕಾರವನ್ನು ನೀಡಿತು.

ಬಿಪಿಸಿಎಲ್ ಸಿಜಿಡಿ ಬೀದರ್‌ನಿಂದ, ಈ ಅಭಿಯಾನವನ್ನು ಟೆರಿಟರಿ ಮ್ಯಾನೇಜರ್ ಪ್ರದೀಪ್ ವಾಘ್ಮಾರೆ, ತಂಡದ ಸದಸ್ಯರಾದ ಅಮೋಲ್ (ಎಂಜಿನಿಯರಿಂಗ್ ಅಧಿಕಾರಿ), ಮೊಹಮ್ಮದ್ ಯೂಸುಫ್ (ಒ ಎಂ ಅಧಿಕಾರಿ) ಮತ್ತು ಸಮುದ್ರುಲಾ ರತ್ನಾಕರ್ (ಮಾರಾಟ ಅಧಿಕಾರಿ) ನೇತೃತ್ವ ವಹಿಸಿದ್ದರು. ಕೆಕೆಆರ್‌ಟಿಸಿ ಬೀದರ್ ವಿಭಾಗದಿಂದ, ಶ್ರೀ ರಾಜಶೇಖರ್ ವಜಂತಿ (ವಿಭಾಗೀಯ ಸಂಚಾರ ನಿಯಂತ್ರಕ ಕೆಕೆಆರ್‌ಟಿಸಿ), ಚಂದ್ರಕಾಂತ್ (ಸೀನಿಯರ್ ಡಿಪೋ ಮ್ಯಾನೇಜರ್), ಡಿಪೋ ಸಿಬ್ಬಂದಿ ಮತ್ತು ನೈರ್ಮಲ್ಯ ಕಾರ್ಮಿಕರು ಸಹ ಈ ಅಭಿಯಾನದಲ್ಲಿ ಭಾಗವಹಿಸಿದ್ದರು.



ಈ ಉಪಕ್ರಮದ ಭಾಗವಾಗಿ, ಉತ್ತಮ ಆರೋಗ್ಯ, ನೈರ್ಮಲ್ಯ ಅಭ್ಯಾಸಗಳು ಮತ್ತು ಕೆಲಸದ ಸುರಕ್ಷತೆಯನ್ನು ಉತ್ತೇಜಿಸಲು ನೈರ್ಮಲ್ಯ ಕಾರ್ಮಿಕರಿಗೆ ನೈರ್ಮಲ್ಯ ಕಿಟ್‌ಗಳನ್ನು ವಿತರಿಸಲಾಯಿತು.

ಬಿಪಿಸಿಎಲ್ ಸಿಜಿಡಿ ಬೀದರ್ ಬೀದರ್ ಜಿಲ್ಲೆಯಲ್ಲಿ ನೈಸರ್ಗಿಕ ಅನಿಲ ಮೂಲಸೌಕರ್ಯ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸುತ್ತಿದೆ, ಇದು ಶುದ್ಧ ಮತ್ತು ಹಸಿರು ಇಂಧನ ಪರಿಹಾರಗಳತ್ತ ಪರಿವರ್ತನೆಯನ್ನು ಬೆಂಬಲಿಸುತ್ತದೆ.

ಇಲ್ಲಿಯವರೆಗೆ, ಬೀದರ್ ಜಿಲ್ಲೆಯಾದ್ಯಂತ 22 ಸಿಎನ್‌ಜಿ ಕೇಂದ್ರಗಳನ್ನು ನಿಯೋಜಿಸಲಾಗಿದೆ, ಇನ್ನೂ ಹಲವಾರು ಕೇಂದ್ರಗಳು ಪ್ರಸ್ತುತ ಅಭಿವೃದ್ಧಿ ಹಂತದಲ್ಲಿವೆ. ಈ ವಿಸ್ತರಣೆಯು ಈ ಪ್ರದೇಶದಲ್ಲಿ ಪರಿಸರ ಸ್ನೇಹಿ ಸಾರಿಗೆ ಇಂಧನ (ಸಿಎನ್‌ಜಿ) ಪ್ರವೇಶವನ್ನು ಗಮನಾರ್ಹವಾಗಿ ಸುಧಾರಿಸುತ್ತಿದೆ.

ಇದರ ಜೊತೆಗೆ, ಬಿಪಿಸಿಎಲ್ ಬೀದರ್ ನಗರದಲ್ಲಿ ತನ್ನ ಪಿಎನ್‌ಜಿ (ಪೈಪ್ಡ್ ನ್ಯಾಚುರಲ್ ಗ್ಯಾಸ್) ಜಾಲವನ್ನು ಬಲಪಡಿಸಿದೆ, ಅಲ್ಲಿ ನಗರದಾದ್ಯಂತ ಹಲವಾರು ಪ್ರಮುಖ ವಸಾಹತುಗಳಲ್ಲಿ ಪೈಪ್‌ಲೈನ್‌ಗಳನ್ನು ಹಾಕಲಾಗಿದೆ, ಇದು ಶುದ್ಧ ಇಂಧನದ ವ್ಯಾಪಕ ಪ್ರವೇಶವನ್ನು ಸಕ್ರಿಯಗೊಳಿಸುತ್ತದೆ.

ಪ್ರಸ್ತುತ, 4100+ ಕ್ಕೂ ಹೆಚ್ಚು ಕುಟುಂಬಗಳು ಬಿ ಪಿ ಸಿ ಎಲ್ /ಪಿ ಎನ್ ಜಿ ಸಂಪರ್ಕಗಳನ್ನು ಬಳಸುತ್ತಿದ್ದಾರೆ, ಜೊತೆಗೆ ಹೋಟೆಲ್‌ಗಳು ಸೇರಿದಂತೆ ಸುಮಾರು 38 ವಾಣಿಜ್ಯ ಸಂಸ್ಥೆಗಳು, ಹಲವಾರು ಹೊಸ ಗ್ರಾಹಕರು ನಿರಂತರವಾಗಿ ನೆಟ್‌ವರ್ಕ್‌ಗೆ ಸೇರುತ್ತಿದ್ದಾರೆ. ಪಿ ಎನ್ ಜಿ ಸಾಂಪ್ರದಾಯಿಕ ಇಂಧನಗಳಿಗೆ ಸುರಕ್ಷಿತ, ಆರ್ಥಿಕ ಮತ್ತು ಪರಿಸರ ಸ್ನೇಹಿ ಪರ್ಯಾಯವಾಗಿ ಹೊರಹೊಮ್ಮುತ್ತಿದೆ.

ತನ್ನ ಎಲ್ ಪಿ ಜಿ ತನ್ನ ಸಿಲಿಂಡರ್ ಮುಕ್ತ ನಗರ / ಪಿ ಎನ್ ಜಿ ವಿಸ್ತರಣಾ ಉಪಕ್ರಮದ ಅಡಿಯಲ್ಲಿ, ಬಿ ಪಿ ಸಿ ಎಲ್ ಮನೆಗಳು, ವಾಣಿಜ್ಯ ಸಂಸ್ಥೆಗಳು ಮತ್ತು ಕೈಗಾರಿಕೆಗಳಲ್ಲಿ ಶುದ್ಧ ಇಂಧನ ಬಳಕೆಯತ್ತ ಬದಲಾವಣೆಯನ್ನು ಉತ್ತೇಜಿಸಲು ಬೀದರ್‌ನಲ್ಲಿ ತನ್ನ ಅನಿಲ ವಿತರಣಾ ಜಾಲವನ್ನು ಮತ್ತಷ್ಟು ಬಲಪಡಿಸುತ್ತಿದೆ.

ಪಿಎನ್ ಜಿ ಸಂಪರ್ಕಗಳಲ್ಲಿ ಆಸಕ್ತಿ ಹೊಂದಿರುವ ನಾಗರಿಕರು ಬಿಪಿಸಿಎಲ್ ಗ್ಯಾಸ್ ತುರ್ತು ದೊ.ಸಂ.9901693254 ಅನ್ನು ಸಂಪರ್ಕಿಸಬಹುದು ಅಥವಾ ಹೊಸ ಸಂಪರ್ಕಗಳು ಮತ್ತು ಸಂಬಂಧಿತ ಸೇವೆಗಳಿಗಾಗಿ hellobpcl.in ಪ್ಲಾಟ್‌ಫಾರ್ಮ್ ಮೂಲಕ ನೋಂದಾಯಿಸಿಕೊಳ್ಳಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ: ವಕ್ಫ್ ಸಂಸ್ಥೆಗಳಲ್ಲಿ ಜಾಗೃತಿ ಮೂಡಿಸಲು ಜಿಲ್ಲಾ ವಕ್ಫ್ ಅಧಿಕಾರಿ ಸೂಚನೆ

ಬಳ್ಳಾರಿ,ಜು.06-

ಭಾರತ ಚುನಾವಣಾ ಆಯೋಗವು ಕರ್ನಾಟಕ ರಾಜ್ಯಾದ್ಯಂತ ಹಮ್ಮಿಕೊಂಡಿರುವ ಮತದಾರರ ಪಟ್ಟಿಗಳ ವಿಶೇಷ ತೀವ್ರ ಪರಿಷ್ಕರಣೆ 2026 ರ ಕುರಿತು ಜಿಲ್ಲೆಯ ಎಲ್ಲಾ ವಕ್ಫ್ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಸಮಗ್ರ ಜಾಗೃತಿ ಮೂಡಿಸುವಂತೆ ಜಿಲ್ಲಾ ವಕ್ಫ್ ಅಧಿಕಾರಿಗಳು ತಿಳಿಸಿದ್ದಾರೆ.

ಪ್ರಸ್ತುತ ರಾಜ್ಯಾದ್ಯಂತ ಮತದಾರರ ನೋಂದಣಿ ಜಾಗೃತಿ ಕಾರ್ಯಕ್ರಮಗಳು ನಡೆಯುತ್ತಿದ್ದು, ಇದರ ಭಾಗವಾಗಿ ಪ್ರಾರಂಭಿಸಲಾಗಿರುವ ವಿಶೇಷ ತೀವ್ರ ಪರಿಷ್ಕರಣೆ ಅತ್ಯಂತ ನಿರ್ಣಾಯಕ ಪ್ರಕ್ರಿಯೆಯಾಗಿದೆ. ಈ ಅಭಿಯಾನವು ಹೊಸ ಅರ್ಹ ಮತದಾರರನ್ನು ನೋಂದಾಯಿಸುವ, ಮತದಾರರ ಪಟ್ಟಿಯಲ್ಲಿರುವ ದೋಷಗಳನ್ನು ಸರಿಪಡಿಸುವ ಮತ್ತು ಕುಟುಂಬದ ಸದಸ್ಯರ ಹೆಸರುಗಳನ್ನು ಒಟ್ಟಿಗೆ ಜೋಡಿಸುವ ಮೂಲಕ ಮತದಾರರ ಪಟ್ಟಿಯನ್ನು ಸಂಪೂರ್ಣವಾಗಿ ನವೀಕರಿಸುವ ಉದ್ದೇಶ ಹೊಂದಿದೆ. ಅರ್ಹವಿರುವ ಯಾವುದೇ ಒಬ್ಬ ನಾಗರಿಕನೂ ಸಹ ರಾಜ್ಯದ ನವೀಕರಿಸಿದ ಚುನಾವಣಾ ಪಟ್ಟಿಯಿಂದ ವಂಚಿತರಾಗಬಾರದು ಎನ್ನುವುದು ಇದರ ಮುಖ್ಯ ಗುರಿಯಾಗಿದೆ ಎಂದು ತಿಳಿಸಿದ್ದಾರೆ.

ವಕ್ಫ್ ಸಂಸ್ಥೆಗಳಿಗೆ ನೀಡಿರುವ ಸೂಚನೆಗಳು:

ಶುಕ್ರವಾರದ ಖುತ್ಬಾದಲ್ಲಿ ಜಾಗೃತಿ: ಜಿಲ್ಲೆಯಾದ್ಯಂತದ ಎಲ್ಲಾ ವಕ್ಫ್ ಸಂಸ್ಥೆಗಳ ಅಧ್ಯಕ್ಷರು, ಪೇಶ್ ಇಮಾಮ್‌ಗಳು ಹಾಗೂ ಉಲೇಮಾಗಳು ಪವಿತ್ರ ಜುಮ್ಮಾ ಪ್ರಾರ್ಥನೆಯ ಸಮಯದ ಖುತ್ಬಾದಲ್ಲಿ ಎಸ್.ಐ.ಆರ್-2026 ಪ್ರಕ್ರಿಯೆಯ ಮಹತ್ವದ ಬಗ್ಗೆ ಸಾರ್ವಜನಿಕರಿಗೆ ವಿವರಿಸಬೇಕು.

ಮಾಹಿತಿ ಪ್ರದರ್ಶನ: ಪ್ರತಿಯೊಂದು ವಕ್ಫ್ ಸಂಸ್ಥೆಯು ತನ್ನ ವ್ಯಾಪ್ತಿಯಲ್ಲಿ ಎಸ್.ಐ.ಆರ್ 2026 ರ ಕಾಲಮಿತಿ ಮತ್ತು ಸಂಬಂಧಪಟ್ಟ ಬಿ.ಎಲ್.ಓ ಗಳ ಪ್ರದೇಶವಾರು ಸಂಪರ್ಕ ಸಂಖ್ಯೆಗಳನ್ನು ಕಡ್ಡಾಯವಾಗಿ ಪ್ರದರ್ಶಿಸಬೇಕು.

ಸಹಾಯ ಕೇಂದ್ರಗಳ ಸ್ಥಾಪನೆ: ಸಾರ್ವಜನಿಕರಿಗೆ ಮತದಾರರ ಪಟ್ಟಿಯ ಪರಿಶೀಲನೆ ಹಾಗೂ ನೋಂದಣಿಗೆ ನೆರವಾಗಲು ಆಯಾ ಪ್ರದೇಶದ ಮಸೀದಿಗಳಲ್ಲಿ ತಾತ್ಕಾಲಿಕ ಸಹಾಯ ಕೇಂದ್ರಗಳನ್ನು ಸ್ಥಾಪಿಸಬೇಕು.

ಒಂದನೇಯ ಪುಟದಿಂದ

ಆರ್‌ಎಸ್‌ಎಸ್ ಪಥಸಂಚಲನಕ್ಕೆ ಅನುಮತಿ ಕಡ್ಡಾಯ

ಸಂಬಂಧಿಸಿದಂತೆ ತರ್ಕಬದ್ಧ ನಿಯಮಾವಳಿ ಮೂಲಕ ಕ್ರಮ ವಹಿಸಲಾಗುವುದು. ಒಂದು ವೇಳೆ, ವರ್ಗಾವಣೆ ಮಾಡಿದರೆ, ಸಿಬ್ಬಂದಿಗಳು ಕೋರ್ಟ್‌ಗೆ ಹೋಗುವ ಸಾಧ್ಯತೆ ಇರುವುದರಿಂದ ಕಾನೂನಿನ ಪ್ರಕಾರವೇ ವರ್ಗಾವಣೆಗೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಲೋಕಾಯುಕ್ತ ಸಂಸ್ಥೆ ಸೇರಿದಂತೆ ಯಾವುದೇ ಸಂಸ್ಥೆಗಳು ಒಳ್ಳೆಯ ಸಲಹೆ ನೀಡಿದರೆ ಸ್ವೀಕರಿಸಲಾಗುವುದು ಎಂದ ಸಚಿವರು ನೂತನ ಪೊಲೀಸ್ ಠಾಣೆಗಳ ಸ್ಥಾಪನೆಗೆ ಕೇಂದ್ರದ ನಿಮಯಮಾವಳಿ ಪಾಲನೆ ಮಾಡಬೇಕಿರುತ್ತದೆ. ಯಾವುದೇ ಹೊಸ ಠಾಣೆ ಸ್ಥಾಪನೆಗೆ ಆಯಾ ಪ್ರದೇಶದ ಕ್ರೈಮ್ ಪರಿಗಣನೆಗೆ ಬರುತ್ತದೆ ಹೊರತು, ವ್ಯಾಪ್ತಿ ಪ್ರದೇಶವಲ್ಲ. ಇದೇ ನಿಯಮಾವಳಿ ಪ್ರಕಾರ ಕಲಬುರಗಿ ಕಮಿಷನರೇಟ್ ಅಡಿಯಲ್ಲಿಯೂ ಕೂಡಾ ನೂತನ ಠಾಣೆಗಳ ಸ್ಥಾಪನೆಗೆ ಕ್ರಮ ವಹಿಸಲಾಗುವುದು ಎಂದು ಭರವಸೆ ನೀಡಿದರು.

ಬೆಂಗಳೂರಿನ ಕಲ್ಲು ಕ್ವಾರಿಯಂತೆ ಮಿರಿಯಾಣದಲ್ಲಿಯೂ ಕೂಡಾ ನಡೆಯುತ್ತಿದೆ ಎಂದು ಕೇಳಲಾದ ಪ್ರಶ್ನೆಗೆ ಉತ್ತರಿಸಿದ ಸಚಿವರು, ಕಲ್ಲು ಕ್ವಾರಿಗಳ ನಿರ್ವಹಣೆ, ಕ್ರಮಬದ್ಧತೆ ಹಾಗೂ ಅಕ್ರಮ ತಡೆ ವಿಚಾರ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ವ್ಯಾಪ್ತಿಗೆ ಬರುತ್ತದೆ. ಆದರೂ ನಮ್ಮ ಇಲಾಖೆಯ ಅಧಿಕಾರಿಗಳಿಗೆ ಈ ಬಗ್ಗೆ ಕಟ್ಟುನಿಟ್ಟಾಗಿ ಸೂಚಿಸಲಾಗಿದೆ ಎಂದು ಗೃಹ ಸಚಿವರು ಹೇಳಿದರು.

ಈ ಸಂದರ್ಭದಲ್ಲಿ ಶಾಸಕರಾದ ಜಗದೇವ ಗುತ್ತೇದಾರ, ಅಲ್ಲಮಪ್ರಭು ಪಾಟೀಲ್, ಕನೀಜ್ ಫಾತಿಮಾ, ತಿಪ್ಪಣ್ಣಪ್ಪ ಕಮಕನೂರು, ಪ್ರವೀಣ್ ಹರವಾಳ, ಸುಭಾಷ್ ರಾಠೋಡ, ರಾಜಗೋಪಾಲ ಮುದಿರೆಡ್ಡಿ ಸೇರಿದಂತೆ ಹಲವರಿದ್ದರು.

ಎಂ.ಎಸ್.ಪಾಟೀಲರ ಅಭಿನಂದನಾ ಸಮಾರಂಭ, ಗ್ರಂಥ ಲೋಕಾರ್ಪಣೆ

ಗೌರವಾಧ್ಯಕ್ಷತೆ ವಹಿಸಲಿದ್ದು, ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಮಾಜಿ ವಿಧಾನಸಭಾಧ್ಯಕ್ಷ ಕೆ.ಆರ್. ರಮೇಶ್ ಕುಮಾರ್ ಅಭಿನಂದನಾ ಗ್ರಂಥವನ್ನು ಲೋಕಾರ್ಪಣೆ ಮಾಡಲಿದ್ದು, ಲೇಖಕ ಬಸವಂತರಾಯ ಕುರಿ ಕೃತಿಯನ್ನು ಪರಿಚಯಿಸಲಿದ್ದಾರೆ.

ಮಾಜಿ ಕೇಂದ್ರ ಸಚಿವ ಬಸವರಾಜ ಪಾಟೀಲ್ ಅನ್ವರಿ, ಸಚಿವ ಡಾ. ಶರಣಪ್ರಕಾಶ ಪಾಟೀಲ್, ಮಾಜಿ ಸಚಿವ ಎನ್.ಎಸ್. ಬಸವರಾಜ್, ಸಂಸದ ಜಿ. ಕುಮಾರ ನಾಯಕ, ಶಾಸಕ ಗಾಲಿ ಜನಾರ್ದನ ರೆಡ್ಡಿ, ಶಾಸಕ ಹಂಪನಗೌಡ ಬಾದರ್ಲಿ, ಶಾಸಕ ಬಸನಗೌಡ ದದ್ದಲ್, ಬಸವರಾಜ ಪಾಟೀಲ್ ಇಟಗಿ, ವಿಶ್ವನಾಥ ಪಾಟೀಲ್ ಹೆಬ್ಬಾಳ, ಮನೋಹರ ಮಸ್ಕಿ ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ ಮುಖಂಡರು, ಜನಪ್ರತಿನಿಧಿಗಳು ಹಾಗೂ ಗಣ್ಯರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

ರಾಜಕೀಯ ಭಿನ್ನಾಭಿಪ್ರಾಯಗಳನ್ನು ಮೀರಿ ಸಾರ್ವಜನಿಕ ಸೇವೆ, ಅಭಿವೃದ್ಧಿ ಚಿಂತನೆ ಮತ್ತು ಮುತ್ಸದ್ದಿತನಕ್ಕೆ ಗೌರವ ಸಲ್ಲಿಸುವ ಈ ಅಪರೂಪದ ಸಮಾರಂಭಕ್ಕೆ ಜಿಲ್ಲೆಯ ನಾಗರಿಕರು, ಅಭಿಮಾನಿಗಳು ಹಾಗೂ ವಿವಿಧ ಪಕ್ಷಗಳ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕು ಎಂದು ಎ. ಪಾಪಾರೆಡ್ಡಿ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ನಾಗನಗೌಡ ಹಾರವಿ, ಆರ್.ಕೆ. ಅಮರೇಶ್ ಪಾಟೀಲ್, ಕೆ. ಶಾಂತಪ್ಪ, ಶಿವಮೂರ್ತಿ, ಶಿವಬಸಪ್ಪ, ಮಹೇಶ್ ಪಾಟೀಲ್, ರಾಜು ಸೇರಿದಂತೆ ಅಭಿನಂದನಾ ಸಮಿತಿಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಗ್ರಾ.ಪಂ. ದಾಖಲೆ ಕಳವುಹಣ ದುರುಪಯೋಗಕ್ಕೆ ಹೊಸ ತಿರುವು

ದೂರು ನೀಡಿದರೂ ಯಾವುದೇ ಪರಿಣಾಮಕಾರಿ ಕ್ರಮ ಕೈಗೊಂಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ ಅವರು, ದಾಖಲೆ ಕಳವು, ಹಣ ದುರುಪಯೋಗ ಮತ್ತು ಭ್ರಷ್ಟಾಚಾರದಲ್ಲಿ ಭಾಗಿಯಾಗಿರುವ ಎಲ್ಲರ ವಿರುದ್ಧ ನಿಷ್ಪಕ್ಷಪಾತ ತನಿಖೆ ನಡೆಸಿ ಕಠಿಣ ಕಾನೂನು ಕ್ರಮ ಜರುಗಿಸಬೇಕು. ಜೊತೆಗೆ ದುರುಪಯೋಗಗೊಂಡ ಸರ್ಕಾರಿ ಹಣವನ್ನು ವಸೂಲಿ ಮಾಡಿ, ಅಧಿಕಾರಿಗಳ ಪಾತ್ರವನ್ನೂ ತನಿಖೆಗೆ ಒಳಪಡಿಸಬೇಕು ಎಂದು ಒತ್ತಾಯಿಸಿದರು.

ಕ.ಕರ್ನಾಟಕ ಶೈಕ್ಷಣಿಕವಾಗಿ ಅಭಿವೃದ್ಧಿ ಆಗಲಿ. ಪ್ರೊ. ಶಿವಾನಂದ ಕೆಳಗಿನಮನಿ

ರಂಭವನ್ನು ರವಿವಾರ ಸಂಜೆ ರಾಯಚೂರು ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿತ್ತು. ಡಾ.ಬಸು ಪ್ರಭು ಪಾಟೀಲ್ ಬೆಟ್ಟದೂರು ಸಮಾರಂಭವನ್ನು ಉದ್ಘಾಟಿಸಿದರು. ಸಮಾರಂಭದ ಅಧ್ಯಕ್ಷತೆಯನ್ನು ಸಾಹಿತಿ ವೀರಹನುಮಾನ ವಹಿಸಿ ದ್ದರು.

ಲೋಹಿಯಾ ಪ್ರತಿಷ್ಠಾನದ ಜೆ ಎಲ್ ಈರಣ್ಣ ಮತ್ತು ಭೀಮನಗೌಡ ಪಾಟೀಲ್ ಇಟಗಿ. ಜ್ಯೋತಿ ದಮ್ಮ ಪ್ರಕಾಶ್ ಕುಲ ಸಚಿವರು ಮೌಲ್ಯ ಮಾಪನ ವಿಭಾಗ ಉಪಕುಲ ಸಚಿವರಾದ ಪಲ್ಲವ ಕೆ ವೆಂಕಟೇಶ ಜಿಲ್ಲಾ ಸರ್ಕಾರಿ ನೌಕರ ಸಂಘದ ಜಿಲ್ಲಾಧ್ಯಕ್ಷರಾದ ಕೃಷ್ಣ ಶಾವಂತಗೇರ ಮತ್ತು ಕಲಾ ಸಂಕುಲ ಸಂಸ್ಥೆಯ ಅಧ್ಯಕ್ಷರಾದ ರೇಖಾ ಬಡೆಗೇರ್ ಹಾಗೂ ಸಮಾಜಸೇವಕರಾದ ಡಿ ಶ್ರೀನಿವಾಸ್. ಹೋರಾಟಗಾರರಾದ ಬಸವರಾಜ ಕಳಸ

ವೇದಿಕೆ ಮೇಲೆ ಉಪಸ್ಥಿತರಿದ್ದರು.

ಕಾರ್ಯಕ್ರಮದ ನಿರೂಪಣೆಯನ್ನು ಡಾ. ಶಿವಲೀಲಾ ಬಸವರಾಜ್ ಮಾಡಿದರು ಸ್ವಾಗತವನ್ನು ಪತ್ರಕರ್ತ ಮಾರುತಿ ಬಡಿಗೇರ್ ನೆರವೇರಿಸಿದರು.

ಬೆಂಗಳೂರಿನ ಜೀ ಕನ್ನಡದ ಸರಿಗಮಪ ಜೂರಿ ಮೆಂಬರ್ಸ್ ಅದ್ಭುತವಾದ ಕನ್ನಡ ಹಳೆಯ ಗೀತೆಗಳು ಗಾಯನವನ್ನು ಮಾಡಿದರು. ಈ ಸಂದರ್ಭದಲ್ಲಿ ಕನಕಶ್ರೀ ಪ್ರಶಸ್ತಿಯನ್ನು ಬಿ ಜಗದೀಶ್ ಅವರಿಗೆ ಮತ್ತು ಮಾಧ್ಯಮ ರತ್ನ ಪ್ರಶಸ್ತಿ ಸಯ್ಯದ್ ಅಬ್ದುಲ್ ಗಯಾಸ್ ಮಾನ್ವಿ ಹಾಗೂ ವಾಲ್ಮೀಕಿ ಶ್ರೀ ಪ್ರಶಸ್ತಿ ರಾಮುಲು ನಾಯಕ ಅವರಿಗೆ ಪ್ರಧಾನ ಮಾಡಲಾಯಿತು.

ತುಂಬಾ ಅಚ್ಚುಕಟ್ಟಾಗಿ ಕಾರ್ಯಕ್ರಮ ನೆರವೇರಿತು.

ಗೌಡೂರು ಗ್ರಾಮ ಪಂಚಾಯಿತಿಯಲ್ಲಿ ಸ್ವಚ್ಛತೆ ಹಾಗೂ ಅಭಿವೃದ್ಧಿ ಕಾಮಗಾರಿಗಳಿಗೆ ತುರ್ತು ಕ್ರಮಕ್ಕೆ ಆಗ್ರಹ

ಲಭ್ಯವಿದ್ದರೂ ನಿಯಮಿತವಾಗಿ ಸ್ವಚ್ಛತಾ ಕಾರ್ಯಗಳನ್ನು ಕೈಗೊಳ್ಳ ಲಾಗು ತ್ತಿಲ್ಲ ಎಂಬ ಆರೋಪವೂ ಮನವಿಯಲ್ಲಿ ಮಾಡಲಾಗಿದೆ.

ಇದಲ್ಲದೆ, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಿವಿಧ ಸರ್ಕಾರಿ ಯೋಜನೆಗಳ ಅನುಷ್ಠಾನ ಹಾಗೂ ಮೂಲಭೂತ ಸೌಲಭ್ಯಗಳ ಅಭಿವೃದ್ಧಿ ಕಾಮಗಾರಿಗಳು ನಿರೀಕ್ಷಿತ ಮಟ್ಟದಲ್ಲಿ ಪ್ರಾರಂಭವಾಗಿಲ್ಲ ಎಂದು ಮನವಿಯಲ್ಲಿ ತಿಳಿಸಲಾಗಿದೆ. ಜನಪ್ರತಿನಿಧಿಗಳ ಅಧಿಕಾರಾವಧಿ ಮುಕ್ತಾಯಗೊಂಡು ಆಡಳಿತಾಧಿ ಕಾರಿಗಳು ಹಾಗೂ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಆಡಳಿತ ವಹಿಸಿಕೊಂಡ ಬಳಿಕವೂ ಗ್ರಾಮಾ ಭಿವೃದ್ಧಿಗೆ ಸಂಬಂಧಿಸಿದ ಕಾರ್ಯ ಚಟುವಟಿಕೆಗಳು ನಿರೀಕ್ಷಿತ ಮಟ್ಟದಲ್ಲಿ ನಡೆಯುತ್ತಿಲ್ಲ ಎಂಬುದು ಗ್ರಾಮಸ್ಥರ ಅಭಿಪ್ರಾಯವಾಗಿದೆ ಎಂದು ಉಲ್ಲೇಖಿಸಲಾಗಿದೆ.

ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ವಾರ್ಡ್‌ಗಳ ಚರಂಡಿಗಳನ್ನು ತಕ್ಷಣ ಸ್ವಚ್ಛಗೊಳಿಸಿ, ಕೊಳಚೆ ನೀರಿನ ಸರಾಗ ಹರಿವಿಗೆ ಅಗತ್ಯ ಕ್ರಮ ಕೈಗೊಳ್ಳಬೇಕು. ಜೊತೆಗೆ ಗ್ರಾಮದಲ್ಲಿ ನಿಯಮಿತ ಸ್ವಚ್ಛತಾ ಕಾರ್ಯಗಳನ್ನು ನಡೆಸಿ, ವಿವಿಧ ಅಭಿವೃದ್ಧಿ ಯೋಜನೆಗಳು ಹಾಗೂ ಮೂಲಭೂತ ಸೌಲಭ್ಯಗಳ ಕಾಮಗಾರಿಗಳನ್ನು ಶೀಘ್ರವಾಗಿ ಆರಂಭಿಸುವಂತೆ ಮನವಿಯಲ್ಲಿ ಒತ್ತಾಯಿಸಲಾಗಿದೆ.

ಈ ಮನವಿಯ ಮೇರೆಗೆ ಸೂಕ್ತ ಕ್ರಮ ಕೈಗೊಳ್ಳದಿದ್ದಲ್ಲಿ ಸಾರ್ವಜನಿಕ ಹಿತದೃಷ್ಟಿಯಿಂದ ತಾಲ್ಲೂಕು ಪಂಚಾ ಯಿತಿಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಜಿಲ್ಲಾ ಪಂಚಾ ಯಿತಿಯ ಮುಖ್ಯ ಕಾರ್ಯನಿರ್ವಾ ಹಕ ಅಧಿಕಾರಿಗಳಿಗೆ ಲಿಖಿತ ದೂರು ಸಲ್ಲಿಸಲಾಗುವುದು ಎಂದು ಮನವಿ ಯಲ್ಲಿ ಎಚ್ಚರಿಕೆ ನೀಡಲಾಗಿದೆ.

ಈ ಸಂಬಂಧ ವಿದ್ಯಾಸಾಗರ ನಾಯಕ, ತಾಲ್ಲೂಕು ವರದಿಗಾರರು, ಪ್ರಜಾ ಆಕ್ರೋಶ ಪಾಕ್ಷಿಕ ಪತ್ರಿಕೆ, ಗೌಡೂರು ಅವರಿಂದ ಗ್ರಾಮ ಪಂಚಾಯಿತಿಯ ಆಡಳಿತಾಧಿ ಕಾರಿಗಳು ಹಾಗೂ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದೆ.

2028ರ ಚುನಾವಣೆಯಲ್ಲಿ 224 ಕ್ಷೇತ್ರಗಳಲ್ಲಿ ಸ್ಪರ್ಧೆ ಗುರಿ

ನಿರ್ಮಿಸುವುದೇ ಈ ಚಳವಳಿಯ ಪ್ರಮುಖ ಉದ್ದೇಶವಾಗಿದೆ ಎಂದು ಅವರು ತಿಳಿಸಿದರು.

ಸಭೆಯಲ್ಲಿ ರಾಜ್ಯದ ಸಮಕಾಲೀನ ರಾಜಕೀಯ ಬೆಳವಣಿಗೆಗಳು, ಸಾಮಾಜಿಕ ನ್ಯಾಯ, ಪ್ರಜಾಪ್ರಭುತ್ವದ ಮೌಲ್ಯಗಳು, ಸಂವಿಧಾನದ ಆಶಯಗಳ ರಕ್ಷಣೆ ಹಾಗೂ ಮುಂದಿನ ರಾಜಕೀಯ ದಿಕ್ಕಿನ ಕುರಿತು ವ್ಯಾಪಕ ಚರ್ಚೆ ನಡೆಯಿತು. ರಾಯಚೂರಿನ ಪ್ರಗತಿಪರ, ಕನ್ನಡಪರ ಹಾಗೂ ದಲಿತಪರ ಸಂಘಟನೆಗಳ ಮುಖಂಡರು, ವಿದ್ಯಾರ್ಥಿಗಳು, ಯುವಜನರು, ಬುದ್ಧಿಜೀವಿಗಳು, ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಸಭೆಯಲ್ಲಿ ಭಾಗವಹಿಸಿ ಅಭಿಪ್ರಾಯಗಳನ್ನು ಹಂಚಿಕೊಂಡರು.

ಸಭೆಯ ಕೊನೆಯಲ್ಲಿ ಸಮ ಸಮಾಜದ ನಿರ್ಮಾಣ ಹಾಗೂ ಜನಪರ ರಾಜಕೀಯ ಪರ್ಯಾಯ ಕ್ಕಾಗಿ ಎಲ್ಲ ಸಮಾನತಾವಾದಿ ಶಕ್ತಿಗಳು ಒಂದಾಗಬೇಕೆಂಬ ನಿರ್ಣಯ ವ್ಯಕ್ತಪಡಿಸಲಾಯಿತು.

ಕಾರುಣ್ಯ ಆಶ್ರಮದಲ್ಲಿ ಹಂಪನಗೌಡ ಅಭಿಮಾನಿಗಳಿಂದ ಮಹಾಪ್ರಸಾದ ಸೇವೆ

ಹಂಪನಗೌಡ ಬಾದರ್ಲಿ ಅವರಿಗೆ ಸಚಿವ ಸ್ಥಾನ ನೀಡಬೇಕು. ಕಲ್ಯಾಣ ಕರ್ನಾಟಕದ ಹಿರಿಯ ಶಾಸಕರಾಗಿ. ಎ.ಐ.ಸಿ.ಸಿ.ಯ ರಾಷ್ಟ್ರೀಯ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಯವರ ಆಪ್ತರಾಗಿ. ಅವರ ಆದರ್ಶ ವ್ಯಕ್ತಿತ್ವವನ್ನು ಮೈಗೂಡಿಸಿಕೊಂಡಿರುವ. ಶಾಸಕರಾದ ಹಂಪನಗೌಡ ಬಾದರ್ಲಿ ಅವರು ಸಚಿವರಾದರೆ ನಮ್ಮ ಸಿಂಧನೂರು ತಾಲೂಕು ಸಮಗ್ರ ಅಭಿವೃದ್ಧಿಯಾಗುತ್ತದೆ. ಮತ್ತು ನಮ್ಮ ಕಾರುಣ್ಯ ಆಶ್ರಮಕ್ಕೆ ಸ್ವಂತ ಜಾಗ ಹಾಗೂ ಅನುದಾನ ದೊರೆಯಬಹುದು ಎನ್ನುವುದು ನಮ್ಮ ಸಂಸ್ಥೆಯ ಆಶಯವಾಗಿದೆ. ಇಂದಿನ ಈ ಕಾರ್ಯಕ್ರಮದಲ್ಲಿ ನಾವೆಲ್ಲರೂ ಕೂಡ ಸಕಲ ದೇವಾನುದೇವತೆಗಳಲ್ಲಿ ವಿಶೇಷ ಪ್ರಾರ್ಥನೆ ಮಾಡುವುದರ ಮೂಲಕ ಹಂಪನಗೌಡ ಬಾದರ್ಲಿ ಅವರಿಗೆ ರಾಜ್ಯ ಸರ್ಕಾರದ ಸಚಿವ ಸಂಪುಟದಲ್ಲಿ ಸಚಿವ ಸ್ಥಾನ ದೊರೆಯಲಿ ಎನ್ನುವ ವಿಶೇಷ ಪ್ರಾರ್ಥನೆ ಗೈದರು.

ಯುವಕರ ಭವಿಷ್ಯಕ್ಕೆ ನೀಲಿನಕ್ಷೆ ರೂಪಿಸಲು ಸಿಎಂ ಸೂಚನೆ : ಸಚಿವ ಪ್ರಿಯಾಂಕ್ ಖರ್ಗೆ

ಕಲಬುರಗಿ,ಜು.06-

ರಾಜ್ಯದ ಯುವಕರ ಭವಿಷ್ಯ ರೂಪಿಸುವುದು ಹಾಗೂ ಆರ್ಥಿಕ ಪ್ರಗತಿಗೆ ಹೊಸ ದಿಕ್ಕು ನೀಡುವ ಉದ್ದೇಶದಿಂದ ಸಮಗ್ರ ನೀಲಿನಕ್ಷೆ (ಬ್ಲೂಪ್ರಿಂಟ್) ಸಿದ್ಧಪಡಿಸುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ ಎಂದು ರಾಜ್ಯ ಗೃಹ, ಇ-ಆಡಳಿತ ಹಾಗೂ ಕಲಬುರಗಿಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ''ಯುವ ಕರ್ನಾಟಕ ನಿರ್ಮಾಣ ಸರ್ಕಾರದ ಪ್ರಮುಖ ಸಂಕಲ್ಪವಾಗಿದ್ದು, ಯುವಕರ ಉದ್ಯೋಗ, ಕೌಶಲ್ಯಾಭಿವೃದ್ಧಿ ಹಾಗೂ ಆರ್ಥಿಕ ಸಬಲೀಕರಣಕ್ಕೆ ವಿಶೇಷ ಯೋಜನೆಗಳನ್ನು ರೂಪಿಸಲಾಗುತ್ತಿದೆ. ಕಿತ್ತೂರು ಕರ್ನಾಟಕ ಮತ್ತು ಕಲ್ಯಾಣ ಕರ್ನಾಟಕ ಭಾಗಗಳ ಅಭಿವೃದ್ಧಿಗೆ ಅಗತ್ಯವಾದ ಕಾರ್ಯಕ್ರಮಗಳ ಕುರಿತು ಸಮಗ್ರ ಬ್ಲೂಪ್ರಿಂಟ್ ಸಿದ್ಧಪಡಿಸಲು ಮುಖ್ಯಮಂತ್ರಿ ಈಗಾಗಲೇ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ'' ಎಂದರು.

ಬರ ಪರಿಸ್ಥಿತಿ ಕುರಿತು ಮಂಗಳವಾರ ಮಹತ್ವದ ಸಭೆ :

ಸೂಪರ್ ಎಲ್‌ನಿನೋ ಪರಿಣಾಮದಿಂದ ರಾಜ್ಯದಲ್ಲಿ ಮಳೆ ಕೊರತೆಯ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಮಂಗಳವಾರ ಕಲಬುರಗಿಯಲ್ಲಿ ಕಂದಾಯ ಇಲಾಖೆಯ ವಿಭಾಗೀಯ ಅಧಿಕಾರಿಗಳ ಸಭೆ ನಡೆಸಲಿದ್ದು,



ಬರ ಪರಿಸ್ಥಿತಿ, ಬೆಳೆ ಹಾಗೂ ಕುಡಿಯುವ ನೀರಿನ ಸಮಸ್ಯೆಗಳ ಕುರಿತು ಸಮಗ್ರ ಚರ್ಚೆ ನಡೆಸಲಿದ್ದಾರೆ. ಸಭೆಯ ಬಳಿಕ ಮುಖ್ಯಮಂತ್ರಿ ಮಾಧ್ಯಮಗಳಿಗೆ ಮಾಹಿತಿ ನೀಡಲಿದ್ದಾರೆ ಎಂದು ಸಚಿವರು ಹೇಳಿದರು.

ಕುಡಿಯುವ ನೀರಿಗೆ ಪರ್ಯಾಯ ವ್ಯವಸ್ಥೆ :

ರಾಜ್ಯದಲ್ಲಿ ಎನ್‌ಡಿಆರ್‌ಎಫ್ ಮಾನದಂಡಗಳ ಪ್ರಕಾರ ಶೇ.35ರಷ್ಟು ಮಳೆ ಕೊರತೆ ದಾಖಲಾಗಿದ್ದರೂ ಮುಂಗಾರು ಸಂಪೂರ್ಣ ಕೈಕೊಟ್ಟಿಲ್ಲ. ತೊಗರಿ ಹಾಗೂ ಸೂರ್ಯಕಾಂತಿ ಬೆಳೆಗಳ ಬಿತ್ತನೆಗೆ ಜುಲೈ ಕೊನೆಯ ವಾರದವರೆಗೂ ಅವಕಾಶವಿದೆ ಎಂದು ತಿಳಿಸಿದ ಅವರು, ಜಿಲ್ಲೆಯಲ್ಲಿ ಸದ್ಯ ಸುಮಾರು 45 ದಿನಗಳವರೆಗೆ ಕುಡಿಯುವ ನೀರು ಲಭ್ಯವಿದ್ದು, ಅಗತ್ಯವಿದ್ದರೆ ನೆರೆಯ ರಾಜ್ಯಗಳಿಂದ ನೀರು ಪಡೆಯುವ ಕುರಿತು ಸರ್ಕಾರ ಈಗಾಗಲೇ ಪತ್ರ ಬರೆದಿದೆ ಎಂದರು.

ಮೋಡ ಬಿತ್ತನೆ ಕುರಿತು ಸದ್ಯ ಯಾವುದೇ ಚರ್ಚೆ ನಡೆದಿಲ್ಲ. ಅಂತಹ ನಿರ್ಧಾರ ಕೈಗೊಂಡರೂ ಅದು ವೈಜ್ಞಾನಿಕ ಆಧಾರದ ಮೇಲೆಯೇ ಆಗಲಿದೆ ಎಂದು ಸ್ಪಷ್ಟಪಡಿಸಿದರು.

ಎಸ್‌ಐಆರ್ ಕುರಿತು ಚುನಾವಣಾ ಆಯೋಗಕ್ಕೆ 12 ಪ್ರಶ್ನೆಗಳು :

ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಕುರಿತು ಪ್ರತಿಕ್ರಿಯಿಸಿದ ಪ್ರಿಯಾಂಕ್ ಖರ್ಗೆ, ಈ ಪ್ರಕ್ರಿಯೆ ಚುನಾವಣಾ ಆಯೋಗದ ವ್ಯಾಪ್ತಿಗೆ ಸೇರಿದ್ದು, ರಾಜ್ಯ ಸರ್ಕಾರದ ಪಾತ್ರ ಇಲ್ಲ ಎಂದು ಹೇಳಿದರು.

''ಎಸ್‌ಐಆರ್‌ಕುರಿತು ಪಾರದರ್ಶಕತೆ ಕಾಪಾಡುವ ಉದ್ದೇಶದಿಂದ ಚುನಾವಣಾ ಆಯೋಗಕ್ಕೆ 12 ಪ್ರಶ್ನೆಗಳನ್ನು ಕೇಳಿದ್ದೇನೆ. ನಮಗೆ ಸಮಯ ನೀಡದ ಆಯೋಗ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರಿಗೆ ಸಮಯ ನೀಡಿದೆ. ಇದರಿಂದ ಆಯೋಗದ ಕಾರ್ಯವೈಖರಿ ಕುರಿತು ಪ್ರಶ್ನೆಗಳು ಉದ್ಭವಿಸುತ್ತವೆ. ನಾವು ಎಸ್‌ಐಆರ್ ವಿರೋಧಿಸುತ್ತಿಲ್ಲ; ಆದರೆ ಪ್ರಕ್ರಿಯೆ ನ್ಯಾಯಸಮ್ಮತ ಹಾಗೂ ಪಾರದರ್ಶಕವಾಗಿರಬೇಕು ಎಂಬುದೇ ನಮ್ಮ ಆಗ್ರಹ'' ಎಂದು ಹೇಳಿದರು.

ಗೃಹ ಇಲಾಖೆಯಲ್ಲಿ ಸುಧಾರಣೆಗೆ ಕ್ರಮ :

ಗೃಹ ಇಲಾಖೆಯಲ್ಲಿ ಅಗತ್ಯವಿರುವ ಕಡೆ ಹೊಸ ಪೊಲೀಸ್ ಠಾಣೆಗಳ ಸ್ಥಾಪನೆ ಸೇರಿದಂತೆ ವಿವಿಧ ಸುಧಾರಣೆಗಳ ಕುರಿತು ಒಂದು ವಾರದೊಳಗೆ ಸಮಗ್ರ ಚರ್ಚೆ ನಡೆಸಲಾಗುವುದು ಎಂದು ಸಚಿವರು ತಿಳಿಸಿದರು.

ಈ ವೇಳೆ ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಮಾತನಾಡಿ, ಚುನಾವಣಾ ಪ್ರಕ್ರಿಯೆಯಲ್ಲಿ ಹೊರರಾಜ್ಯದ ಅಧಿಕಾರಿಗಳನ್ನು ಬಳಸುವಂತೆ ಬಿಜೆಪಿ ಮಾಡಿರುವ ಆಗ್ರಹವನ್ನು ಟೀಕಿಸಿ, ''ಚುನಾವಣಾ ವ್ಯವಸ್ಥೆಯನ್ನು ದುರ್ಬಳಕೆ ಮಾಡುವ ಉದ್ದೇಶದಿಂದಲೇ ಇಂತಹ ಬೇಡಿಕೆ ಮುಂದಿಡಲಾಗಿದೆ'' ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ಸಚಿವರಾದ ಶಾಸಕರಾದ ಎಂ.ವೈ. ಪಾಟೀಲ್, ಅಲ್ಲಮಪ್ರಭು ಪಾಟೀಲ್, ವಿಧಾನ ಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರು, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಜಗದೇವ ಗುತ್ತೇದಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕಾನೂನು ನೆರವು ಕೇಂದ್ರದ ಬಗ್ಗೆ ಜಾಗೃತಿ: ನ್ಯಾಯಾಧೀಶ ಶ್ರೀನಿವಾಸ ನವಲೆ

ಕಲಬುರಗಿ: ಜು.06-

: ಕಾಲೇಜುಗಳಲ್ಲಿ ಕಾನೂನು ನೆರವು ಕೇಂದ್ರಗಳನ್ನು ಸ್ಥಾಪಿಸಿ, ವಿದ್ಯಾರ್ಥಿಗಳಿಂದಲೇ ಸಾರ್ವಜನಿಕರಿಗೆ ಉಚಿತ ಕಾನೂನು ಸೇವೆ ಹಾಗೂ ನೆರವು ಒದಗಿಸುವ ಪ್ರವೃತ್ತಿ ಬೆಳೆಸುವ ಉದ್ದೇಶದಿಂದ ನಗರದಲ್ಲಿ ಇದೇ ಜುಲೈ 6 ರಂದು 5ನೇ ವಿಭಾಗೀಯ ಮಟ್ಟದ ಕಾನೂನು ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಶ್ರೀನಿವಾಸ ನವಲೆ ತಿಳಿಸಿದರು.

ಶನಿವಾರ ಇಲ್ಲಿನ ಜಿಲ್ಲಾ ನ್ಯಾಯಾಲಯದ ಆವರಣದ ಎ.ಡಿ.ಆರ್ ಕಟ್ಟಡದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾನೂನು ವಿಶ್ವವಿದ್ಯಾಲಯ ಹಾಗೂ ಈ ವಿಭಾಗದ 25 ಕಾನೂನು ವಿದ್ಯಾಲಯಗಳ ಸಂಯುಕ್ತಾಶ್ರಯದಲ್ಲಿ ತರಗತಿಯಿಂದ ನ್ಯಾಯಾಲಯದವರೆಗೆ: ಸಾಮಾಜಿಕ ನ್ಯಾಯದ ವೇಗವರ್ಧಕರಾಗಿ ಕಾನೂನು ವಿದ್ಯಾರ್ಥಿಗಳು (From Classroom to Courtroom: Law Students as Catalysts for Social Justice) ಎಂಬ ವಿಷಯದ ಕುರಿತು ವಲಯ ಮಟ್ಟದ ತರಬೇತಿ ಕಾರ್ಯಾಗಾರವನ್ನು ಆಯೋಜಿಸಲಾಗಿದೆ. ನಗರದ ಪಿ.ಡಿ.ಎ. ಎಂಜಿನಿಯರಿಂಗ್ ಕಾಲೇಜ್ ಸಭಾಂಗಣದಲ್ಲಿ ಜುಲೈ 06 ರಂದು ಬೆಳಿಗ್ಗೆ 9.30 ಕ್ಕೆ ಕಾರ್ಯಕ್ರಮ ಉದ್ಘಾಟನೆಗೊಳ್ಳಲಿದೆ ಎಂದರು.

ಕರ್ನಾಟಕ ಹೈಕೋರ್ಟ್ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಮುಖ್ಯ ಪೋಷಕರಾದ ಗೌರವಾನ್ವಿತ ಮುಖ್ಯ ನ್ಯಾಯಮೂರ್ತಿ ವಿಭು ಬಾಖ್ರು ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಬೆಂಗಳೂರು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಕಾರ್ಯನಿರ್ವಾಹಕ ಅಧ್ಯಕ್ಷರು ಗೌರವಾನ್ವಿತ ನ್ಯಾಯಮೂರ್ತಿ ಶ್ರೀಮತಿ ಅನು ಶಿವರಾಮನ್ ಉಪಸ್ಥಿತಿ ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯ ಮತ್ತು ಅಧ್ಯಕ್ಷರು ಉಚ್ಚ ನ್ಯಾಯಾಲಯ ಕಾನೂನು ಸೇವೆಗಳ ಸಮಿತಿ ನ್ಯಾಯಮೂರ್ತಿ ಆರ್. ದೇವದಾಸ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಅಧ್ಯಕ್ಷರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಜಿ..ಎಲ್. ಲಕ್ಷ್ಮೀನಾರಾಯಣ, ಬೆಂಗಳೂರು ಕರ್ನಾಟಕ ಉಚ್ಚನ್ಯಾಯಾಲಯ ರಜಿಸ್ಟ್ರಾರ್ ಜನರಲ್ ಶ್ರೀ ಎಂ. ಚಂದ್ರಶೇಖರ ರೆಡ್ಡಿ, ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ ಹುಬ್ಬಳ್ಳಿ ಕುಲಪತಿಗಳಾದ ಪ್ರೋ. (ಡಾ) ಸಿ. ಬಸವರಾಜು. ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿಗಳಾದ ಹೆಚ್. ಶಶೀಧರ ಶೆಟ್ಟಿ, ಕಾನೂನು ಸಹಾಯಕರಾದ ಹೆಚ್.ಕೆ.ಇ. ಸೊಸೈಟಿ ಅಧ್ಯಕ್ಷರು ರಾಜಕುಮಾರ ಕಡಗಂಚಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಶ್ರೀನಿವಾಸ ನವಲೆ ವಹಿಸಲಿದ್ದಾರೆ.

ಈ ಒಂದು ದಿನದ ವಿಭಾಗೀಯ ಕಾರ್ಯಾಗಾರದಲ್ಲಿ ವಿದ್ಯಾರ್ಥಿಗಳ ಪ್ರಾಯೋಗಿಕ ಕಲಿಕೆಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ಪ್ರತಿ ವಿಷಯದ ಕುರಿತು ತಜ್ಞರಿಂದ 45 ನಿಮಿಷಗಳ ಕಾಲ ವಿಶೇಷ ಉಪನ್ಯಾಸ ನಡೆಯಲಿದೆ. ಕಾರ್ಯಕ್ರಮದ ಕೊನೆಯ ಅವಧಿಯಲ್ಲಿ ವಿದ್ಯಾರ್ಥಿಗಳಲ್ಲಿ ಮೂಡುವ ಕಾನೂನಾತ್ಮಕ ಗೊಂದಲ ಹಾಗೂ ಸಂಶಯಗಳನ್ನು ನಿವಾರಿಸಲು ಹಿರಿಯ ನ್ಯಾಯಮೂರ್ತಿಗಳು ಮತ್ತು ಕಾನೂನು ತಜ್ಞರೊಂದಿಗೆ ಮುಖಾಮುಖಿ ಸಂವಾದಕ್ಕೆ ವಿಶೇಷ ಅವಕಾಶ ಕಲ್ಪಿಸಲಾಗಿದೆ ಎಂದರು.

ಮೊರೆರಾ ಬೆಟ್ಟದ ಸಮಾಧಿ ಸ್ಥಳಗಳ ಸಂರಕ್ಷಣೆ, ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಒತ್ತು: ಕೆ.ಪಿ. ಮೋಹನ್ ರಾಜ್



ಕೊಪ್ಪಳ ಜು.06-

ಬೃಹತ್ ಶಿಲಾಯುಗದ ನೆಲೆ ಎಂದೇ ಪ್ರಸಿದ್ಧಿ ಪಡೆದ ಹಾಗೂ ಯುನೆಸ್ಕೋ ವಿಶ್ವ ಪರಂಪರೆ ಪಟ್ಟಿಯಲ್ಲಿ ತಾತ್ಕಾಲಿಕ ಸ್ಥಾನ ಪಡೆದಿರುವ ಹಿರೇಬೆನಕಲ್ ಮೊರೆರಾ ಬೆಟ್ಟದಲ್ಲಿನ ಸಮಾಧಿ ಸ್ಥಳಗಳ ಸಂರಕ್ಷಣೆ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ವಿಶೇಷ ಒತ್ತು ನೀಡಲಾಗುವುದು ಎಂದು ವಸತಿ ಮತ್ತು ಸಮಾಜ ಕಲ್ಯಾಣ ಇಲಾಖೆಯ ಕಾರ್ಯದರ್ಶಿಗಳು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಕೆ.ಪಿ. ಮೋಹನ್ ರಾಜ್ ಅವರು ಹೇಳಿದರು.

ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲೂಕಿನ ಹಿರೇಬೆನಕಲ್ ಮೊರೆರಾ ಬೆಟ್ಟದಲ್ಲಿರುವ ಬೃಹತ್ ಶಿಲಾಯುಗದ ಸಮಾಧಿ ಸ್ಥಳಗಳ ಸಂರಕ್ಷಣೆ ಹಾಗೂ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಕುರಿತು ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಶನಿವಾರ (ಜು. 4ರಂದು) ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹಿರೇಬೆನಕಲ್ ಮೊರೆರಾ ಬೆಟ್ಟಕ್ಕೆ ಸೂಕ್ತ ರಕ್ಷಣೆ ಒದಗಿಸಬೇಕು. ಅರಣ್ಯ ಸಂರಕ್ಷಣೆಯ ಜೊತೆಗೆ ಬೆಟ್ಟದ ಅಭಿವೃದ್ಧಿಗೂ ಕ್ರಮ ಕೈಗೊಳ್ಳಬೇಕಿದ್ದು, ಈ ಹಿನ್ನೆಲೆಯಲ್ಲಿ ಮೋರೆರ್ ಬೆಟ್ಟದ ಪ್ರದೇಶದಲ್ಲಿ ಅರಣ್ಯ ಇಲಾಖೆಯಿಂದ ಸಿಸಿಟಿವಿ ಅಳವಡಿಕೆ ಎಪಿಸಿ ಕ್ಯಾಂಪ್, ಸೋಲಾರ್ ಲೈಟ್ ಅಳವಡಿ, ವಾಚ್ ಟವರ್, ಬೋರ್‌ವೆಲ್ ಪಂಪ್, ಬೋರ್‌ವೆಲ್‌ಗೆ ವಿದ್ಯುತ್ ಸಂಪರ್ಕ, ಶೌಚಾಲಯಗಳು, ಪ್ರವೇಶ ಕಮಾನು, ಗೇಟ್, ಆಸನ ವ್ಯವಸ್ಥೆ ಹೀಗೆ ವಿವಿಧ ಸೌಲಭ್ಯಗಳನ್ನು ಕಲ್ಪಿಸುವ ಕಾಮಗಾರಿಗಳ ಟೆಂಡರ್ ಪ್ರಕ್ರೀಯೆಯನ್ನು ತ್ವರಿತವಾಗಿ ಪೂರ್ಣಗೊಳಿಸಿ, ಈ ಎಲ್ಲಾ ಕಾಮಗಾರಿಗಳನ್ನು ಕೂಡಲೇ ಪ್ರಾರಂಭಿಸಲು ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಹಿರೇಬೆನಕಲ್ ಮೊರೆರಾ ಬೆಟ್ಟದಲ್ಲಿ ಪ್ರತಿನಿತ್ಯ ಬೆಳಿಗ್ಗೆ 8 ರಿಂದ ಮಧ್ಯಾಹ್ನ 12 ಗಂಟೆಯವರೆಗೆ ಮತ್ತು ಮಧ್ಯಹ್ನ 2 ರಿಂದ ಸಂಜೆ 6 ಗಂಟೆಯವರಿಗೆ ಪುರಾತತ್ವ ಇಲಾಖೆ (ಎ.ಎಸ್.ಐ) ವತಿಯಿಂದ ಮೂರು ಜನರು ರಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ. ಬೆಟ್ಟದಲ್ಲಿ ರಾತ್ರಿ ವೇಳೆಯಲ್ಲಿಯೂ ರಕ್ಷಕರನ್ನು ನಿಯೋಜಿಸುವುದು ಅತ್ಯವಶ್ಯಕವಾಗಿದ್ದು, ಮತ್ತಿಬ್ಬರು ಸ್ಮಾರಕ ಮಿತ್ರರನ್ನು ನೇಮಿಸಿಕೊಳ್ಳುವ ವ್ಯವಸ್ಥೆಯಾಗಬೇಕು. ಈ ಬಗ್ಗೆ ಅರಣ್ಯ ಇಲಾಖೆಯಿಂದ ಸೂಕ್ತ ಕ್ರಮ ಕೈಗೊಳ್ಳಬೇಕು. ಜೊತೆಗೆ ಅರಣ್ಯ ಇಲಾಖೆಯ ರಕ್ಷಕರು ರಾತ್ರಿ ವೇಳೆ ಈ ಪ್ರದೇಶಲ್ಲಿ ಗಸ್ತು ಹಾಕಬೇಕು ಎಂದು ಹೇಳಿದರು.

ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಮಾತನಾಡಿ, ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲ್ಲೂಕಿನ ಹಿರೇಬೆಣಕಲ್ ಗ್ರಾಮದ ಮೊರೆರ್ ಬೆಟ್ಟದ ಪ್ರದೇಶದಲ್ಲಿ ಅರಣ್ಯ ಇಲಾಖೆಯಿಂದ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಈಗಾಗಲೇ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಮ್ಯಾಕ್ರೋ ಯೋಜನೆಯಡಿ ರೂ. 80 ಲಕ್ಷಗಳ ಅನುದಾನ ನೀಡಲಾಗಿದೆ. ಟೆಂಡರ್ ಪ್ರಕ್ರಿಯೆಯಲ್ಲಿರುತ್ತದೆ. ಮೊರೆರ ಬೆಟ್ಟದ ಸ್ಮಾರಗಳ ರಕ್ಷಣೆಗೆ ಸರ್ವ ರೀತಿಯಲ್ಲಿಯೂ ಪ್ರಯತ್ನಿಸಲಾಗುವುದು ಎಂದರು.

ಹಿರೇಬೆಣಕಲ್ ಮೊರೆರ ಬೆಟ್ಟದ ಇತಿಹಾಸದ ಕುರಿತು ಕೊಪ್ಪಳ ಪ್ರವಾಸೋದ್ಯಮ ಇಲಾಖೆಯ ಪ್ರಭಾರಿ ಸಹಾಯಕ ನಿರ್ದೇಶಕರಾದ ವಿಠ್ಠಲ್ ಜಾಬಗೌಡರ್ ಅವರು ತಿಳಿಸಿದರು.

ಸಭೆಯಲ್ಲಿ ಕೊಪ್ಪಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ವರ್ಣಿತ್ ನೇಗಿ, ಕೊಪ್ಪಳ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಾದ ನಿರ್ಮಲ, ಗಂಗಾವತಿ ವಲಯ ಅರಣ್ಯಾಧಿಕಾರಿ ಬಸವರಾಜ ಪೂಜಾರ ಸೇರಿದಂತೆ ಪುರಾತತ್ವ ಇಲಾಖೆ, ಗಂಗಾವತಿಯ ಕಂದಾಯ ಮತ್ತು ತಾ.ಪಂ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಪ್ರವಾಸೋದ್ಯಮ ಇಲಾಖೆಯ ಸಿಬ್ಬಂದಿ ಉಪಸ್ಥಿತರಿದ್ದರು.

ಎಡಿಎಫ್ ಉಚಿತ ಆರೋಗ್ಯ ಶಿಬಿರಕ್ಕೆ ಭರ್ಜರಿ ಸ್ಪಂದನೆ; 600ಕ್ಕೂ ಹೆಚ್ಚು ಮಂದಿಗೆ ತಪಾಸಣೆ

ಹೊಸಪೇಟೆ/ವಿಜಯನಗರ:,ಜು.06-

ಅಂಜುಮನ್ ಡೆವಲಪ್ಮೆಂಟ್ ಫೋರಂ () ವತಿಯಿಂದ ಸಾರ್ವಜನಿಕರ ಆರೋಗ್ಯ ಹಿತದೃಷ್ಟಿಯಿಂದ ಆಯೋಜಿಸಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರಕ್ಕೆ ಅಭೂತ ಪೂರ್ವ ಸ್ಪಂದನೆ ವ್ಯಕ್ತವಾಗಿದ್ದು, 600ಕ್ಕೂ ಹೆಚ್ಚು ಮಂದಿ ಆರೋಗ್ಯ ತಪಾಸಣೆ ಮಾಡಿಸಿಕೊಂಡು ತಜ್ಞ ವೈದ್ಯರಿಂದ ಉಚಿತ ವೈದ್ಯಕೀಯ ಸಲಹೆ ಹಾಗೂ ಮಾರ್ಗದರ್ಶನ ಪಡೆದರು.

ಶಿಬಿರದಲ್ಲಿ ಯೆನೆಪೊಯ ವೈದ್ಯಕೀಯ ಕಾಲೇಜಿನ 17 ಮಂದಿ ತಜ್ಞ ವೈದ್ಯರು ಭಾಗವಹಿಸಿ ಸಾಮಾನ್ಯ ಆರೋಗ್ಯ ತಪಾಸಣೆ, ಸ್ತನ ಕ್ಯಾನ್ಸರ್ ಹಾಗೂ ಗರ್ಭಕಂಠ ಕ್ಯಾನ್ಸರ್ ತಪಾಸಣೆ ಸೇರಿದಂತೆ ವಿವಿಧ ಆರೋಗ್ಯ ಸೇವೆಗಳನ್ನು ಉಚಿತವಾಗಿ ಒದಗಿಸಿದರು. ಆರೋಗ್ಯ ಸಮಸ್ಯೆಗಳನ್ನು ಆರಂಭಿಕ



ಹಂತದಲ್ಲೇ ಪತ್ತೆಹಚ್ಚುವ ಮಹತ್ವ ಮತ್ತು ನಿಯಮಿತ ಆರೋಗ್ಯ ತಪಾಸಣೆಯ ಅಗತ್ಯದ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಡಾ. ಹಬೀಬುಲ್ಲಾ, ಡಾ. ಮೊಹಮ್ಮದಿ, ಫರುಲ್ಲಾ, ಎಸ್‌ಡಿಪಿಐ ವಿಜಯನಗರ ಜಿಲ್ಲಾ ಅಧ್ಯಕ್ಷ ಸದ್ದಾಂ ಹಂಪಿ, ಸೈಯದ್ ನಾಜಿಮುದ್ದೀನ್, ಫೈರೋಜ್ ಪೀರಾನ್ ಹಾಗೂ 16ನೇ ವಾರ್ಡ್ ನಗರಸಭೆ ಸದಸ್ಯೆ ಮುಮ್ತಾಜ್ ಬೇಗಂ ಭಾಗವಹಿಸಿದ್ದರು. ಸಮಾಜದ ಆರೋಗ್ಯ ರಕ್ಷಣೆಗೆ ಪೂರಕವಾಗಿರುವ ಇಂತಹ ಜನಪರ ಕಾರ್ಯಕ್ರಮಗಳು ನಿರಂತರವಾಗಿ ನಡೆಯಬೇಕು ಎಂದು ಅವರು ಅಭಿಪ್ರಾಯಪಟ್ಟರು.

ಅಂಜುಮನ್ ಡೆವಲಪ್ಮೆಂಟ್ ಫೋರಂನ ಪದಾಧಿಕಾರಿಗಳು ಹಾಗೂ ಸದಸ್ಯರಾದ ಜಿ. ಖಾಜಾ ಹುಸೇನ್ ನಿಯಾಜಿ, ಬಿ. ಬಾಬಾ ಸಾಬ್, ಡಾ. ಕಲಿಮುಲ್ಲಾ, ಅಡ್ವೊಕೇಟ್ ಮೊಹಮ್ಮದ್ ಅಜರುದ್ದೀನ್, ಅಡ್ವೊಕೇಟ್ ಸದ್ದಾಂ ಹುಸೇನ್, ಅಬ್ದುಲ್ ಸುಭಾನ್, ಘೌಸ್ ಪೀರ್ ಶೇಖ್ ತಾಜುದ್ದೀನ್, ಮೊಹಮ್ಮದ್ ಜಾಫರ್, ಜೀಲಾನ್ ಕೆ. ಹಾಗೂ ಮೊಹಮ್ಮದ್ ನೂರ್ ಸೇರಿದಂತೆ ಹಲವರು ಶಿಬಿರದ ಯಶಸ್ಸಿಗೆ ಶ್ರಮಿಸಿದರು.

ಕಾರ್ಯಕ್ರಮದ ಕೊನೆಯಲ್ಲಿ ಯೆನೆಪೊಯ ವೈದ್ಯಕೀಯ ಕಾಲೇಜಿನ ವೈದ್ಯರ ತಂಡ, ಸಹಕರಿಸಿದ ಗಣ್ಯರು, ಸ್ವಯಂಸೇವಕರು ಹಾಗೂ ಶಿಬಿರದಲ್ಲಿ ಭಾಗವಹಿಸಿದ ಸಾರ್ವಜನಿಕರಿಗೆ ಅಂಜುಮನ್ ಡೆವಲಪ್ಮೆಂಟ್ ಫೋರಂ ವತಿಯಿಂದ ಕೃತಜ್ಞತೆ ಸಲ್ಲಿಸಲಾಯಿತು.

ನಿಮ್ಮೂರು ಸುದ್ದಿ

ಸಂಪಾದಕೀಯ

ಶಾಲಾ ವಾಹನಗಳಲ್ಲಿ ಮಕ್ಕಳ ರಕ್ಷಣೆಯ ಹೊಣೆ ಯಾರದ್ದು?

ಶಾಲಾ ಬಸ್‌ಗಳಲ್ಲಿ ಪ್ರಯಾಣಿಸುವ ಮಕ್ಕಳ ಸುರಕ್ಷೆ ಮತ್ತು ರಕ್ಷಣೆಯ ಜವಾಬ್ದಾರಿ ಆಯಾ ಶಾಲಾ ಆಡಳಿತ ಮಂಡಳಿಗಳದ್ದೇ ಆಗಿರಲಿದೆ ಎಂದು ಹೈಕೋರ್ಟ್ ಹೇಳಿದೆ. 2025ರ ಆ. 1ರಂದು ಮಂಡ್ಯದಲ್ಲಿ ಶಾಲಾ ಬಸ್‌ನಲ್ಲಿ ಸಂಭವಿಸಿದ ಅಪಘಾತದಲ್ಲಿ ನಾಲ್ಕನೇ ತರಗತಿಯ ವಿದ್ಯಾರ್ಥಿ ಕಣ್ಣು ಕಳೆದು ಕೊಂಡ ಘಟನೆಗೆ ಸಂಬಂಧಿಸಿ ಶಾಲಾ ಆಡಳಿತ ಮಂಡಳಿಯ ವಿರುದ್ಧ ಪ್ರಕರಣ ದಾಖಲಾಗಿತ್ತು. ಇದನ್ನು ರದ್ದುಗೊಳಿಸಬೇಕು ಎಂದು ಒತ್ತಾಯಿಸಿ ಶಾಲಾ ಆಡಳಿತ ಮಂಡಳಿ ಸಲ್ಲಿಸಿದ್ದ ಕ್ರಿಮಿನಲ್ ಅರ್ಜಿಯನ್ನು ವಿಚಾರಣೆ ನಡೆಸಿದ ಏಕಸದಸ್ಯ ನ್ಯಾಯ ಪೀಠ, ಪ್ರಕರಣ ರದ್ದುಪಡಿಸಲು ನಿರಾಕರಿಸಿದೆ. ಶಾಲಾ ಆವರಣದಲ್ಲಷ್ಟೇ ಅಲ್ಲ, ಮಗು ಬಸ್ ಹತ್ತಿದಾಗಿನಿಂದ ಸುರಕ್ಷಿತವಾಗಿ ಪೋಷಕರಲ್ಲಿ ಸೇರುವ ತನಕ ಮಗುವಿನ ರಕ್ಷಣೆಯ ಜವಾಬ್ದಾರಿ ಶಾಲಾ ಆಡಳಿತ ಮಂಡಳಿಯದ್ದೇ ಆಗಿರಲಿದೆ ಎಂದು ಹೈಕೋರ್ಟ್ ಹೇಳಿದೆ. ಆಡಳಿತ ಮಂಡಳಿಯ ನಿರ್ಲಕ್ಷ್ಯ ಇದೆಯೇ ಇಲ್ಲವೇ ಎನ್ನುವುದು ತನಿಖೆಯ ಬಳಿಕವಷ್ಟೇ ಸಾಬೀತಾಗಬೇಕು ಎಂದು ಹೈಕೋರ್ಟ್ ಅಭಿಪ್ರಾಯ ಪಟ್ಟಿದೆ.

ಹಿಂದೆಲ್ಲ ಮಕ್ಕಳು ಹಲವು ಕಿಲೋಮೀಟರ್ ನಡೆದು ಶಾಲೆ ಸೇರುತ್ತಿದ್ದರು. ವ್ಯಾಯಾಮದ ಜೊತೆ ಜೊತೆಗೇ ಮಕ್ಕಳು ಪರಿಸರದೊಂದಿಗೆ ಬೆರೆಯುತ್ತಾ ಜೊತೆ ಜೊತೆಯಾಗಿ ಶಾಲೆಯ ಕಡೆಗೆ ನಡೆಯುವುದು ಒಂದು ರೀತಿಯ ಶಿಕ್ಷಣವೇ ಆಗಿತ್ತು. ಪೋಷಕರಿಗಾಗಲಿ, ಮಕ್ಕಳಿಗಾಗಲಿ ಈ ಶಾಲೆಯ ದಾರಿ ಒಂದು ಸಮಸ್ಯೆಯಾಗಿರಲಿಲ್ಲ. ಇಂದಿಗೂ ಗ್ರಾಮೀಣ ಪ್ರದೇಶದಲ್ಲಿ ಹಲವು ಕಿಲೋಮೀಟರ್ ನಡೆದು ಶಾಲೆ ಸೇರುವ ಮಕ್ಕಳಿದ್ದಾರೆ. ಮಳೆಗಾಲದಲ್ಲಿ ಹತ್ತು ಹಲವು ಸವಾಲುಗಳನ್ನು ದಾಟಿ ಶಾಲೆ ಕಲಿಯಬೇಕಾದ ಪರಿಸ್ಥಿತಿ ಗ್ರಾಮೀಣ ಪ್ರದೇಶಗಳಲ್ಲಿವೆ. ಆದರೆ ನಗರ ಪ್ರದೇಶಗಳಲ್ಲಿ ಖಾಸಗಿ ಶಾಲೆಗಳಲ್ಲಿ ಪ್ರವೇಶ ಪಡೆಯುವುದರ ಜೊತೆ ಜೊತೆಗೇ ಶಾಲಾವಾಹನದ ಶುಲ್ಕ ಕಟ್ಟುವುದು ಅನಿವಾರ್ಯ ಎನ್ನುವ ಪರಿಸ್ಥಿತಿಯಿದೆ. ಇಂದು ನಗರ ಪ್ರದೇಶಗಳಲ್ಲಿ ಎಲ್‌ಕೆಜಿಯಿಂದ ಹಿಡಿದು ಎಸ್‌ಎಸ್‌ಎಲ್‌ಸಿವರೆಗೆ ಖಾಸಗಿ ಶಾಲೆಗಳಿಗೆ ಸಮಯಕ್ಕೆ ಸರಿಯಾಗಿ ತಲುಪಬೇಕಾದರೆ ವಾಹನಗಳ ಬಳಕೆ ಅತ್ಯಗತ್ಯ ಎನ್ನಿಸಿ ಬಿಟ್ಟಿದೆ. ಪೋಷಕರು ತಮ್ಮ ಮಕ್ಕಳನ್ನು ಕರೆದೊಯ್ಯುವ ಶಾಲಾ ವಾಹನಗಳಿಗೆ ಪ್ರತೀ ತಿಂಗಳು ಶುಲ್ಕ ಪಾವತಿ ಮಾಡುವುದು ಅನಿವಾರ್ಯ. ಈ ಶುಲ್ಕವನ್ನು ಶಾಲಾ ಮಂಡಳಿ ವಾರ್ಷಿಕ ಮುಂಗಡವಾಗಿಯೇ ವಸೂಲಿ ಮಾಡುತ್ತದೆ. ಇಂದು ಪೋಷಕರು ಶಾಲೆಗಳ ಶುಲ್ಕಗಳಿಗೆ ನೀಡುವ ಹಣದಷ್ಟೇ ಶಾಲಾ ವಾಹನಗಳಿಗಾಗಿಯೂ ಪಾವತಿಸುತ್ತಾರೆ. ಆದರೆ ವಿದ್ಯಾರ್ಥಿಗಳನ್ನು ಮನೆಯಿಂದ ಶಾಲೆಗೆ, ಶಾಲೆಯಿಂದ ಮನೆಗೆ ತಲುಪಿಸುವ ಸಂದರ್ಭದಲ್ಲಿ ಈ ಶಾಲಾ ವಾಹನಗಳು ಎಷ್ಟರಮಟ್ಟಿಗೆ ತನ್ನ ಹೊಣೆಗಾರಿಕೆಗಳನ್ನು ನಿಭಾಯಿಸುತ್ತವೆ ಎನ್ನುವುದನ್ನು ಆಡಳಿತ ಮಂಡಳಿ ಗಂಭೀರವಾಗಿ ತೆಗೆದುಕೊಳ್ಳುತ್ತಿಲ್ಲ. ಪರಿಣಾಮವಾಗಿ ಈ ಶಾಲಾ ವಾಹನಗಳೇ ವಿದ್ಯಾರ್ಥಿಗಳ ಪಾಲಿಗೆ ಅಪಾಯಕಾರಿಯಾಗಿ ಬಿಡುತ್ತವೆ. ಶಾಲಾ ವಾಹನಗಳು ಅವಘಡ ಸಂಭವಿಸಿದಾಗ ಅಥವಾ ಚಾಲಕರ ಬೇಜವಾಬ್ದಾರಿಯಿಂದ ಮಕ್ಕಳಿಗೆ ತೊಂದರೆಯಾದಾಗ ಆಡಳಿತ ಮಂಡಳಿ ಮಾತ್ರ ಹೆಗಲು ಜಾರಿಸಿಕೊಳ್ಳುತ್ತವೆ.

ಶಾಲಾ ವಾಹನಗಳು ಶಾಲೆಯ ಒಂದು ಭಾಗವೇ ಆಗಿದೆ. ಶಾಲೆಯ ಆವರಣದಲ್ಲಿ ಅವಘಡಗಳು ಸಂಭವಿಸುವುದಿಲ್ಲ ಎನ್ನುವ ಕಾರಣಕ್ಕಾಗಿ ಅದರ ಹೊಣೆಗಾರಿಕೆಯಿಂದ ಆಡಳಿತ ಮಂಡಳಿ ಯಾವ ಕಾರಣಕ್ಕೂ ನುಣುಚಿಕೊಳ್ಳುವಂತಿಲ್ಲ. ಶಾಲಾ ವಾಹನಗಳಲ್ಲಿ ಮನೆಗೆ ಸಾಗುವ ದಾರಿಯಲ್ಲಿ ವಿದ್ಯಾರ್ಥಿಗಳಿಗೆ ಏನಾದರೂ ಅನಾಹುತ ಸಂಭವಿಸಿದರೆ ಕೇವಲ ಚಾಲಕ, ನಿರ್ವಾಹಕರ ಮೇಲೆ ಕ್ರಮ ತೆಗೆದುಕೊಂಡರೆ ಸಾಕಾಗುವುದಿಲ್ಲ. ಯಾಕೆಂದರೆ ಅಂತಹ ಬೇಜವಾಬ್ದಾರಿ ಚಾಲಕನನ್ನು, ನಿರ್ವಾಹಕನನ್ನು ನೇಮಕ ಮಾಡಿರುವುದು ಶಾಲಾ ಆಡಳಿತ ಮಂಡಳಿಯಾಗಿರುವುದರಿಂದ, ಮೊದಲು ಶಿಕ್ಷೆಯಾಗಬೇಕಾಗಿರುವುದು ಆ ಮಂಡಳಿ ಮುಖ್ಯಸ್ಥರಿಗೆ. ಶಾಲಾ ವಾಹನಗಳಲ್ಲಿ ಸಾಗುವ ಸಂದರ್ಭದಲ್ಲಿ ವಿದ್ಯಾರ್ಥಿಗಳು ಹತ್ತು ಹಲವು ಅಪಾಯಗಳನ್ನು ಎದುರಿಸುವ ಸಂದರ್ಭಗಳಿವೆ. ಚಾಲಕ ಮದ್ಯ ವ್ಯಸನಿಯಾಗಿದ್ದರೆ ಅಥವಾ ಬೇಜವಾಬ್ದಾರಿ ಚಾಲನೆಯನ್ನು ಮಾಡುತ್ತಿದ್ದರೆ ಅಪಘಾತಗಳಿಗೆ ಕಾರಣವಾಗಬಹುದು. ಇದೇ ಸಂದರ್ಭದಲ್ಲಿ ಪುಟ್ಟ ವಿದ್ಯಾರ್ಥಿಗಳು ಇತರ ಪ್ರಯಾಣಿಕರಂತಲ್ಲ. ಅವರೊಂದಿಗೆ ಅತ್ಯಂತ ಸೂಕ್ಷ್ಮವಾಗಿ, ಪ್ರಬುದ್ಧವಾಗಿ ವ್ಯವಹರಿಸಬೇಕಾಗುತ್ತದೆ. ಅವರ ಆತಂಕ, ಬೇಡಿಕೆ, ಅಳಲುಗಳಿಗೆ ಕಿವಿಯಾಗುವ ಹೃದಯವನ್ನು ಅವರು ಹೊಂದಿರುವುದು ಅತ್ಯಗತ್ಯ. ಯಾವುದೇ ಪೂರ್ವಾಪರ ವಿಚಾರಿಸದೆ ಚಾಲಕರನ್ನು ಮತ್ತು ನಿರ್ವಾಹಕರನ್ನು ಆಡಳಿತ ಮಂಡಳಿ ನೇಮಕ ಮಾಡಿದರೆ ಅದು ಮಕ್ಕಳ ಮೇಲೆ ದುಷ್ಪರಿಣಾಮ ಬೀರಬಹುದು.

ಮನೆಗೆ ಕೊಂಡೊಯ್ಯುವ ಸಂದರ್ಭದಲ್ಲಿ ಶಾಲಾ ವಾಹನದ ಚಾಲಕ ವಿದ್ಯಾರ್ಥಿಗಳ ಮೇಲೆ ದೌರ್ಜನ್ಯ ಎಸಗಿರುವ ಹಲವು ಪ್ರಕರಣಗಳು ಈಗಾಗಲೇ ವರದಿಯಾಗಿವೆ. ಆಡಳಿತ ಮಂಡಳಿ ಕಡಿಮೆ ವೇತನಕ್ಕೆ ಸಿಗುವ ಚಾಲಕನನ್ನು ಹುಡುಕುವ ಭರದಲ್ಲಿ ಆತನ ಹಿನ್ನೆಲೆಯ ಬಗ್ಗೆ ವಿಚಾರಣೆ ನಡೆಸುವುದಿಲ್ಲ. ಕೆಲವೊಮ್ಮೆ ಆತನ ಮೇಲೆ ಕ್ರಿಮಿನಲ್ ಪ್ರಕರಣಗಳು ದಾಖಲಾಗಿರಬಹುದು. ಆತ ಮದ್ಯ, ಗಾಂಜಾ ವ್ಯಸನಿಯಾಗಿದ್ದು ಆ ಕುರಿತಂತೆ ಯಾವುದೋ ಪೊಲೀಸ್ ಠಾಣೆಯಲ್ಲಿ ಕೇಸು ದಾಖಲಾಗಿರಬಹುದು. ಅಂತಹ ಹಿನ್ನೆಲೆಯಿರುವ ಚಾಲಕರನ್ನು ಶಾಲಾ ವಾಹನಗಳಿಗೆ ನೇಮಕ ಮಾಡುವುದು ಆಡಳಿತ ಮಂಡಳಿಯ ಅಪರಾಧವೇ ಆಗಿದೆ. ಆದುದರಿಂದ, ಏನಾದರೂ ದುರ್ಘಟನೆ ಸಂಭವಿಸಿದರೆ ಮೊದಲು ಪ್ರಕರಣ ದಾಖಲಿಸಬೇಕಾದುದು ಶಾಲಾ ಆಡಳಿತ ಮಂಡಳಿಯ ಮೇಲೆ. ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳ ಜೊತೆಗೆ ಹೇಗೆ ವರ್ತಿಸಬೇಕು, ವಿದ್ಯಾರ್ಥಿಗಳನ್ನು ಹೇಗೆ ಜೋಪಾನವಾಗಿ ಮನೆಗೆ ತಲುಪಿಸಬೇಕು, ಹೇಗೆ ಜೋಪಾನವಾಗಿ ರಸ್ತೆ ದಾಟಿಸಬೇಕು ಇತ್ಯಾದಿಗಳ ಬಗ್ಗೆ ಚಾಲಕರಿಗೆ, ನಿರ್ವಾಹಕರಿಗೆ ಆಡಳಿತ ಮಂಡಳಿ ವಿಶೇಷ ತರಬೇತಿಯನ್ನು ನೀಡಬೇಕಾಗಿದೆ. ಆದುದರಿಂದ, ಎಲ್ಲ ಖಾಸಗಿ ಶಾಲೆಗಳ ಶಾಲಾವಾಹನಗಳಿಗೆ ಸಂಬಂಧಿಸಿದ ವಿವರಗಳನ್ನು, ವರದಿಗಳನ್ನು ಶಿಕ್ಷಣ ಇಲಾಖೆ ಪಡೆದುಕೊಳ್ಳುವುದು ಅತ್ಯಗತ್ಯವಾಗಿದೆ. ಹಾಗೆಯೇ ಶಾಲಾವಾಹನಗಳಿಗೆ ದುಬಾರಿ ಶುಲ್ಕಗಳನ್ನು ವಿಧಿಸುವ ಶಾಲೆಗಳ ಮೇಲೂ ಕಠಿಣ ಕ್ರಮ ತೆಗೆದುಕೊಳ್ಳಬೇಕಾಗಿದೆ. ಪೋಷಕರ ಅನಿವಾರ್ಯವನ್ನು ದುರುಪಯೋಗ ಪಡಿಸಿಕೊಂಡು ಅವರನ್ನು ಶೋಷಿಸುವ ಶಾಲೆಗಳಿಗೆ ಕಡಿವಾಣ ವಿಧಿಸಬೇಕಾಗಿದೆ.ಶಾಲಾ ಬಸ್ಸು ಗಳು ಮನೆ ಮತ್ತು ಶಾಲೆಗಳನ್ನು ಬೆಸೆಯುವ ಸೇತುವೆಯಾಗಿದೆ. ಮನೆಯಿಂದ ಯಾವಾಗ ಬಸ್ಸಿ ನ ಮೆಟ್ಟಿಲನ್ನು ವಿದ್ಯಾರ್ಥಿಗಳು ತುಳಿಯುತ್ತಾರೋ ಆಗಲೇ ಅವರು ಶಾಲೆಯ ಆವರಣದಲ್ಲಿರುತ್ತಾರೆ ಎನ್ನುವ ಎಚ್ಚರಿಕೆ ಶಾಲಾ ಆಡಳಿತ ಮಂಡಳಿಗೆ ಬೇಕಾಗಿದೆ. ಹೇಗೆ ಶಿಕ್ಷಕರ ದುರ್ವರ್ತನೆ ವಿದ್ಯಾರ್ಥಿಗಳ ಮನಸ್ಸಿ ನ ಮೇಲೆ ಗಾಯಗಳನ್ನುಂಟು ಮಾಡಬಹುದೋ ಹಾಗೆಯೇ ಬಸ್ ಚಾಲಕ, ನಿರ್ವಾಹಕರ ದುರ್ವರ್ತನೆಗಳೂ ವಿದ್ಯಾರ್ಥಿಗಳ ಮೇಲೆ ದುಷ್ಪರಿಣಾಮ ಬೀರಬಹುದು. ಈ ಹಿನ್ನೆಲೆಯಲ್ಲಿ ಶಾಲಾ ವಾಹನಗಳ ಜವಾಬ್ದಾರಿಗೆ ಸಂಬಂಧಿಸಿ ಹೈಕೋರ್ಟ್ ನೀಡಿದ ತೀರ್ಪು ಮಹತ್ವ ಪೂರ್ಣವಾಗಿದೆ.

ರಾಜ್ಯದಲ್ಲಿ ವಿಳಂಬದ ನಡುವೆಯೂ ಬಿರುಸು ಪಡೆದ ಮುಂಗಾರು: ನೀಗುವುದೇ ನೀರಿನ ಕೊರತೆ?

ಈಗಾಗಲೇ ಮುಂಗಾರು ವಿಳಂಬದಿಂದ ಶೇ.50ರಷ್ಟು ಮಳೆ ಕೊರತೆಯಾಗಿದ್ದು, ರಾಜ್ಯಯದ ಬಹುತೇಕ ಜಲಾಶಯಗಳು ಬರಿದಾಗಿದ್ದವು. ಈಗ ಸುರಿಯುತ್ತಿರುವ ಮಳೆ ಮುಂದುವರೆದರೆ, ಕುಡಿಯುವ ನೀರಿನ ಆತಂಕವನ್ನು ಸ್ವಲ್ಪಮಟ್ಟಿಗೆ ನೀಗಿಸಿಕೊಳ್ಳಬಹುದು. ತುಂಗಾ ಭರ್ತಿಯಾಗಿದ್ದು, ಇತರೆ ಜಲಾಶಯಗಳಿಗೆ ಒಳಹರಿವು ಹೆಚ್ಚಿರುವುದು ಅಚ್ಚುಕಟ್ಟು ಪ್ರದೇಶದ ರೈತರಲ್ಲಿ ಸಧ್ಯಕ್ಕೆ ಭರವಸೆಯನ್ನುಂಟುಮಾಡಿದೆ.

ರಾಜ್ಯದಲ್ಲಿ ಸುಮಾರು ಶೇ.21ರಷ್ಟು ಮಳೆ ಕೊರತೆ ಎದುರಾಗಿದ್ದು, ರಾಜ್ಯದ 22 ಪ್ರಮುಖ ಜಲಾಶಯಗಳಲ್ಲಿ ಒಟ್ಟು ನೀರು ಸಂಗ್ರಹ ಸುಮಾರು ಶೇ.27.51 ಗ್ರಾಸ್ ಸಾಮರ್ಥ್ಯಕ್ಕೆ ಇಳಿದಿದ್ದು, ಜುಲೈ 1ರವರೆಗೆ ಕೇವಲ ಶೇ.12.27ರಷ್ಟು ನೀರು ಮಾತ್ರ ಸಂಗ್ರಹವಾಗಿತ್ತು. ಕೆಆರ್‌ಎಸ್(ಕೃಷ್ಣರಾಜ ಸಾಗರ), ಕಬಿನಿ, ಹಾರಂಗಿ, ಹೇಮಾವತಿ ಮುಂತಾದ ಪ್ರಮುಖ ಅಣೆಕಟ್ಟುಗಳಲ್ಲಿ ನೀರಿನ ಕೊರತೆಯಾಗಿರುವುದಾಗಿ ಕರ್ನಾಟಕ ವಾಟರ್ ರಿಸೋರ್ಸಸ್ ಇನ್ಫಾರ್ಮೇಷನ್ ಸಿಸ್ಟಮ್() ಮತ್ತು ಇತರ ಮೂಲಗಳು ದೃಢಪಡಿದ್ದವು. ಇದೀಗ ಮುಂಗಾರು ಕೊಂಚ ಚುರುಕಾಗಿದ್ದು, ಒಳಹರಿವು ಹೆಚ್ಚಾಗುವ ನಿರೀಕ್ಷೆ ಮೂಡಿಸಿದೆ.

ಕೆಆರ್‌ಎಸ್ ನೀರು ಏಪ್ರಿಲ್-ಮೇ ತಿಂಗಳಲ್ಲಿಯೇ 94 ಅಡಿ ಮಟ್ಟಕ್ಕೆ ಇಳಿದಿದ್ದು, ಇದು ದೀರ್ಘಕಾಲದ ಕನಿಷ್ಠ ಮಟ್ಟದ್ದಾಗಿತ್ತು. ಇದೇ ಮುಂದುವರೆದಿದ್ದರೆ ಬೆಂಗಳೂರು, ಮೈಸೂರು, ಮಂಡ್ಯ ಮುಂತಾದ ಪ್ರದೇಶಗಳ ಕುಡಿಯುವ ನೀರು ಪೂರೈಕೆಗೆ ನೇರ ಪರಿಣಾಮ ಬೀರುವುದರಲ್ಲಿ ಯಾವುದೇ ಅನುಮಾನ ಇರಲಿಲ್ಲ. ಬೆಂಗಳೂರು ಸೇರಿದಂತೆ ಹಲವು ನಗರಗಳಲ್ಲಿ ನೀರು ಪೂರೈಕೆಯಲ್ಲಿ ಕಡಿತವಾಗುವ ಸಾಧ್ಯತೆ ಹೆಚ್ಚಿದ್ದು, ಗ್ರಾಮೀಣ ಪ್ರದೇಶಗಳಲ್ಲಿ ಟ್ಯಾಂಕರ್‌ಗಳ ಮೂಲಕ ನೀರು ಸರಬರಾಜು ಮಾಡುವ ಸ್ಥಿತಿ ಬಂದಿತ್ತು. ಉತ್ತರ ಕರ್ನಾಟಕದಲ್ಲಿ ಈಗಾಗಲೇ ನೀರಿನ ಹಾಹಾಕಾರ ಆರಂಭವಾಗಿದ್ದು, ಸರ್ಕಾರವು 7 ಜಿಲ್ಲೆಗಳಿಗೆ ₹5 ಕೋಟಿ ವಿಶೇಷ ಅನುದಾನ ನೀಡಿ ಕ್ರಮ ಕೈಗೊಳ್ಳುತ್ತಿದೆ ಎನ್ನಲಾಗಿತ್ತು.

ದುರ್ಬಲವಾದ ನೈಋತ್ಯ ಮುಂಗಾರಿನಿಂದ ಬೆಳಗಾವಿ, ಬಾಗಲಕೋಟೆ ಜಿಲ್ಲೆಗಳಿಗೆ ಕೃಷಿ, ಕುಡಿವ ನೀರಿಗೆ ಮೂಲವಾದ ಕೃಷ್ಣಾ ನದಿ ಬರಿದಾಗುತ್ತಿತ್ತು. ಹಿಪ್ಪರಗಿ ಬ್ಯಾರೇಜ್‌ನಲ್ಲಿ ಕಡಿಮೆ ಪ್ರಮಾಣದ ನೀರು ಸಂಗ್ರಹವಿತ್ತು. ಬೆಳಗಾವಿ ಜಿಲ್ಲೆಯ ಚಿಕ್ಕೋಡಿ, ಕಾಗವಾಡ, ಅಥಣಿ, ರಾಯಬಾಗ ಹಾಗೂ ಬಾಗಲಕೋಟೆ ಜಿಲ್ಲೆಯ ತೇರದಾಳ, ರಬಕವಿ-ಬನಹಟ್ಟಿ, ಜಮಖಂಡಿ ತಾಲೂಕುಗಳ ಅಪಾರ ಜಮೀನು ನೀರಾವರಿಗೆ ಬ್ಯಾರೇಜ್ ನೀರೇ ಮೂಲ. ಜನವರಿ ತಿಂಗಳಲ್ಲಿ ಬ್ಯಾರೇಜ್‌ನ ಗೇಟ್ ಮುರಿದ ಪರಿಣಾಮ 2 ಟಿಎಂಸಿ ನೀರು ಪೋಲಾಗಿತ್ತು. ಬ್ಯಾರೇಜ್ ಕೆಳ ಭಾಗದ ಚಿಕ್ಕಪಡಸಲಗಿಯ ಶ್ರಮಬಿಂದು ಬ್ಯಾರೇಜ್‌ನಲ್ಲೂ ನೀರಿನ ಪ್ರಮಾಣ ಕಡಿಮೆಯಾಗಿತ್ತು. ಇದರಿಂದಾಗಿ ಬೆಳಗಾವಿ ಜಿಲ್ಲೆಯಲ್ಲಿ ಗಂಭೀರ ನೀರಿನ ಬಿಕ್ಕಟ್ಟು ಎದುರಾಗಿತ್ತು.

ಇದೀಗ, ಮಹಾರಾಷ್ಟ್ರದ ಕೃಷ್ಣಾ ಜಲಾನಯನ ಪ್ರದೇಶಗಳಲ್ಲಿ ಸುರಿಯುತ್ತಿರುವ ಮಳೆಯಿಂದಾಗಿ ಕೃಷ್ಣಾ ನದಿಗೆ ಬರೋಬ್ಬರಿ 15 ಸಾವಿರ ಕ್ಯುಸೆಕ್ ನೀರು ಹರಿದುಬರುತ್ತಿದ್ದು, ಇದೀಗ ಒಳಹರಿವು ಗಣನೀಯವಾಗಿ ಹೆಚ್ಚಾಗಿದೆ. ಜಮಖಂಡಿ ತಾಲೂಕಿನ ಹಿಪ್ಪರಗಿ ಬ್ಯಾರೇಜ್‌ನಲ್ಲಿ ಭಾನುವಾರ 30 ಸಾವಿರ ಕ್ಯುಸೆಕ್ ಒಳಹರಿವು ದಾಖಲಾಗಿದೆ. ಬ್ಯಾರೇಜ್‌ನ ಹತ್ತು ಗೇಟ್‌ಗಳ ಮೂಲಕ ನದಿಗೆ ನೀರು ಬಿಡಲಾಗಿದೆ. ಸೋಮವಾರ ಐವತ್ತು ಸಾವಿರ ಕ್ಯುಸೆಕ್‌ವರೆಗೆ ನೀರು ಹರಿದು ಬರುವುದಾಗಿ ತಿಳಿದುಬಂದಿದೆ. ಚಿಕ್ಕೋಡಿ ತಾಲೂಕಿನ ಕಲ್ಲೋಳ ಗ್ರಾಮದ ಬಳಿ ನದಿಯಲ್ಲಿ ನೀರಿನ ಹರಿವು ಸ್ಪಷ್ಟವಾಗಿ ಗೋಚರಿಸುತ್ತಿದೆ. ಇದರಿಂದಾಗಿ ರೈತರು ಮತ್ತು ಸಾರ್ವಜನಿಕರಲ್ಲಿ ಸಂತಸ ಉಂಟಾಗಿದ್ದು, ಸ್ಥಳೀಯರು, ಮತ್ತಷ್ಟು ಒಳಹರಿವು ಹೆಚ್ಚಾಗುವ ನಿರೀಕ್ಷೆಯಲ್ಲಿದ್ದಾರೆ.

ಘಟ್ಟ ಪ್ರದೇಶದಲ್ಲಿ ನಿರಂತರ ಮಳೆ ಸುರಿಯುತ್ತಿರುವುದರಿಂದ ಭದ್ರಾ ಮತ್ತು ಲಿಂಗನಮಕ್ಕಿ ಜಲಾಶಯಗಳಲ್ಲೂ ಒಳಹರಿವಿನ ಪ್ರಮಾಣದಲ್ಲಿ ಏರಿಕೆಯಾಗಿದೆ. ಭದ್ರಾ ಜಲಾಶಯದಲ್ಲಿ ಶನಿವಾರ 2,108 ಕ್ಯುಸೆಕ್‌ನಷ್ಟಿದ್ದ ಒಳಹರಿವಿನ ಪ್ರಮಾಣ ಭಾನುವಾರ 7,919 ಕ್ಯುಸೆಕ್‌ಗೆ ಏರಿಕೆಯಾಗಿತ್ತು. ಲಿಂಗನಮಕ್ಕಿಯಲ್ಲಿ 7,950 ಕ್ಯುಸೆಕ್‌ರಷ್ಟಿದ್ದ ಒಳಹರಿವು 15,376 ಕ್ಯುಸೆಕ್‌ಗೆ ಹೆಚ್ಚಳವಾಗಿತ್ತು. ಲಿಂಗನಮಕ್ಕಿ ಜಲಾನಯನ ಪ್ರದೇಶದ ವ್ಯಾಪ್ತಿಯಲ್ಲಿ 137.4 ಎಂ.ಎಂ ಮಳೆ ಸುರಿದಿದೆ. ಆಗುಂಬೆಯಲ್ಲಿ 186.2 ಮಿ.ಮೀ., ಹುಲಿಕಲ್‌ನಲ್ಲಿ 170 ಮಿ.ಮೀ. ಮಳೆಯಾಗಿದೆ.

ಕೆಆರ್‌ಎಸ್, ತುಂಗಭದ್ರಾ, ಕಬಿನಿ, ಆಲಮಟ್ಟಿ ಸಹಿತ ಪ್ರಮುಖ ಜಲಾಶಯಗಳ ನೀರನ್ನು ಕುಡಿಯುವುದಕ್ಕೂ ಬಳಕೆ ಮಾಡಿಕೊಳ್ಳಲಾಗುತ್ತಿದೆ. ಶೇ.35ರಿಂದ 40ರಷ್ಟು ನೀರನ್ನು ಕುಡಿಯುವುದಕ್ಕಾಗಿಯೇ ಮೀಸಲಾಡುತ್ತದೆ. ಕೇಂದ್ರ ಸರ್ಕಾರ ಜಾರಿಗೊಳಿಸಿರುವ ಜಲಜೀವನ್ ಮಿಷನ್(ಜೆಜೆಎಂ) ಯೋಜನೆ ಜಾರಿಗೊಂಡ ನಂತರ ಜಲಾಶಯಗಳ ನೀರಿಗೆ ಬೇಡಿಕೆ ಹೆಚ್ಚಿದೆ. ನಗರ, ಪಟ್ಟಣಗಳಲ್ಲದೇ ಗ್ರಾಮಾಂತರ ಪ್ರದೇಶಗಳಿಗೂ ನೀರು ಒದಗಿಸುವುತ್ತಿರುವುದರಿಂದ ಅದಕ್ಕೂ ತೊಂದರೆಯಾಗಬಹುದು. ಮೊದಲೆಲ್ಲ ಜಲಾಶಯಗಳು ಎಂದರೆ ಕೃಷಿಗೆ ಮೀಸಲು ಎನ್ನುವ ಪರಿಕಲ್ಪನೆಯಿತ್ತು. ಇತ್ತೀಚಿನ ವರ್ಷಗಳಲ್ಲಿ ಶುದ್ಧ ಕುಡಿಯುವ ನೀರಿನ ಪರಿಕಲ್ಪನೆ ಬೆಳೆದು, ಅಂತರ್ಜಲವೂ ತಗ್ಗುತ್ತಿರುವುದರಿಂದ ಜನರಿಗೆ ಜಲಾಶಯದಿಂದಲೇ ನೀರು ಒದಗಿಸಲಾಗುತ್ತಿದೆ. ಉದಾಹರಣೆಗೆ ಬೆಂಗಳೂರು, ಮೈಸೂರು, ಮಂಡ್ಯ ಸಹಿತ ಪ್ರಮುಖ ನಗರಗಳಿಗೆ ಕೆಆರ್‌ಎಸ್ ಜಲಾಶಯದಿಂದಲೇ ವರ್ಷಕ್ಕೆ 24 ಟಿಎಂಸಿ ನೀರು ಒದಗಿಸಲಾಗುತ್ತಿದೆ. 2050 ಹೊತ್ತಿಗೆ ಇದು 35 ಟಿಎಂಸಿಗೆ ತಲುಪಿದರೆ ಕೃಷಿ ಉತ್ಪಾದನೆಗೆ ಹೊಡೆತ ಬೀಳಬಹುದು ಎನ್ನುವುದು ಜಲಸಂಪನ್ಮೂಲ ಇಲಾಖೆ ಹಿರಿಯ ಅಧಿಕಾರಿಯೊಬ್ಬರು ಆತಂಕ ವ್ಯಕ್ತಪಡಿಸಿದ್ದಾರೆ.

ಮಳೆ ಹೀಗೆಯೇ ಮುಂದುವರೆದರೆ, ಈ ವರ್ಷದ ಕುಡಿಯುವ ನೀರಿನ ಆತಂಕ ಕೊಂಚ ಕಡಿಮೆಯಾಗಬಹುದು. ಈಗ ಸುರಿಯುತ್ತಿರುವ ಮಳೆ ಇಲ್ಲಿಗೇ ಸ್ಥಗಿತಗೊಂಡರೆ, ಕುಡಿಯುವ ನೀರಿಗೆ ಹಾಹಾಕಾರ ಉಂಟಾಗುವುದರಲ್ಲಿ ಯಾವುದೇ ಅನುಮಾನವಿಲ್ಲ. ಉತ್ತರ ಕರ್ನಾಟಕದಲ್ಲಿ ಬರದಂತಹ ಪರಿಸ್ಥಿತಿ ಇತ್ತು. ಈಗಾಗಲೇ 122 ತಾಲೂಕುಗಳಲ್ಲಿ ಕುಡಿಯುವ ನೀರಿನ ಕೊರತೆ ಎದುರಾಗುತ್ತಿದ್ದು, ಕೇಂದ್ರ ಜಲ ಆಯೋಗ() ವರದಿಗಳ ಪ್ರಕಾರ, ದಕ್ಷಿಣ ಭಾರತದ ಅನೇಕ ಜಲಾಶಯಗಳ ನೀರು ಶೇ.40ಕ್ಕಿಂತ ಕಡಿಮೆಯಾಗಿದೆ ಎಂದು ವರದಿ ನೀಡಿತ್ತು.

ಜುಲೈ ಆರಂಭದಲ್ಲಿ ಜಲಾಶಯಗಳ ನೀರಿನ ಸಂಗ್ರಹ

ರಾಜ್ಯದ ಆಲಮಟ್ಟಿ, ಕೃಷ್ಣರಾಜಸಾಗರ, ತುಂಗಭದ್ರಾ, ಕಬಿನಿ, ಲಿಂಗನಮಕ್ಕಿ, ನಾರಾಯಣಪುರ, ಸುಪಾ, ಹೇಮಾವತಿ, ಭದ್ರಾ, ಘಟಪ್ರಭಾ, ಮಲಪ್ರಭಾ, ಹಾರಂಗಿ, ವಾಣಿ ವಿಲಾಸ ಸಾಗರ, ವರಾಹಿ ಸಹಿತ ಪ್ರಮುಖ 14 ಜಲಾಶಯಗಳಿವೆ. ಇವುಗಳ ಸಂಗ್ರಹ ಸಾಮರ್ಥ್ಯವೇ ಸುಮಾರು 900 ಟಿಎಂಸಿಯಷ್ಟಿದೆ. ಇದಲ್ಲದೇ ಇನ್ನೂ 20ಕ್ಕೂ ಹೆಚ್ಚು ಕಿರುಜಲಾಶಯಗಳಿದ್ದು, ಪ್ರಮುಖ ಜಲಾಶಯಗಳೊಂದಿಗೆ ಸಂಪರ್ಕ ಹೊಂದಿವೆ.

ಈ ಬಾರಿ ಮಳೆ ಕೊರತೆಯಿಂದ ಈವರೆಗೂ ಜಲಾಶಯಗಳಲ್ಲಿ ಕೇವಲ 200 ಟಿಎಂಸಿ ನೀರು ಸಂಗ್ರಹವಿದೆ. ಹಿಂದಿನ ವರ್ಷ ಈ ವೇಳೆಗೆ ಸುಮಾರು 560 ಟಿಎಂಸಿ ನೀರು ಸಂಗ್ರಹವಾಗಿತ್ತು. ವಾಣಿ ವಿಲಾಸ ಸಾಗರ, ನಾರಾಯಣಪುರ ಜಲಾಶಯ ಹೊರತುಪಡಿಸಿದರೆ ಎಲ್ಲ ಜಲಾಶಯಗಳಲ್ಲಿ ಶೇ.50ರ ಒಳಗೆ ನೀರಿನ ಸಂಗ್ರಹವಿದ್ದು, ಆತಂಕದ ವಾತಾವರಣ ಎದುರಾಗಿದೆ.

ಪ್ರಸ್ತುತ, ರಾಜ್ಯದ ಕುಡಿಯುವ ನೀರಿನ ಅಗತ್ಯಗಳನ್ನು ಪೂರೈಸುವ 10 ಪ್ರಮುಖ ಜಲಾಶಯಗಳು ತಮ್ಮ ಒಟ್ಟು ಸಾಮರ್ಥ್ಯದ ಶೇ.22ರಷ್ಟು ಮಾತ್ರ ಸಂಗ್ರಹಿಸಿವೆ. ಆದರೆ ಕಳೆದ ವರ್ಷ ಇದೇ ದಿನಾಂಕದಂದು ಜಲಾಶಯಗಳು ತಮ್ಮ ಸಾಮರ್ಥ್ಯದ ಶೇ.59ರಷ್ಟು ವೇಗವಾಗಿ ತುಂಬಿದ್ದವು.

ಕೃಷ್ಣಾ ಜಲಾನಯನ ಪ್ರದೇಶದ ಪ್ರಮುಖ ಆರು ಜಲಾಶಯಗಳ ಪೈಕಿ ನಾಲ್ಕರಲ್ಲಿ ನೀರಿನ ಒಳಹರಿವು ಶೂನ್ಯವಾಗಿತ್ತು. ಕಳೆದ ವರ್ಷ, ಕೃಷ್ಣಾ ಜಲಾನಯನ ಪ್ರದೇಶದ ಜಲಾಶಯಗಳಲ್ಲಿ ಈ ವೇಳೆಗೆ 1.73 ಲಕ್ಷ ಕ್ಯುಸೆಕ್ ಒಳಹರಿವು ಇತ್ತು. ಈ ಬಾರಿ ತುಂಗಭದ್ರಾ, ಘಟಪ್ರಭಾ, ಮಲಪ್ರಭಾ ಮತ್ತು ಆಲಮಟ್ಟಿ ಅಣೆಕಟ್ಟುಗಳ ಒಳಹರಿವು ಸ್ಥಗಿತಗೊಂಡಿದ್ದು, ನದಿಗಳನ್ನು ಜೀವಂತವಾಗಿಡಲು ಅಧಿಕಾರಿಗಳು ಪ್ರತಿದಿನ 1,411 ಕ್ಯುಸೆಕ್ ನೀರನ್ನು ಬಿಡುಗಡೆ ಮಾಡುತ್ತಿದ್ದರು. ಮಹಾರಾಷ್ಟ್ರದಲ್ಲಿ ಸುರಿಯುತ್ತಿರುವ ಭಾರೀ ಮಳೆಯಿಂದಾಗಿ ಕೃಷ್ಣಾ ನದಿ ಪಾತ್ರದ ಜನರಲ್ಲಿ ಭರವಸೆ ಮೂಡಿಸಿದ್ದು, ಒಳಹರಿವು ಹೆಚ್ಚಿಸುವ ನಿರೀಕ್ಷೆಯನ್ನು ಹುಟ್ಟಿಸಿದೆ.

ಕಾವೇರಿ ಜಲಾನಯನ ಪ್ರದೇಶದ ಪ್ರಮುಖ ನಾಲ್ಕು ಜಲಾಶಯಗಳಿಗೆ ಕಳೆದ ವರ್ಷ ಜೂನ್ 30ರ ವೇಳೆಗೆ 54,010 ಕ್ಯುಸೆಕ್ ನೀರು ಒಳಹರಿವಿತ್ತು. ಈ ಬಾರಿ ಜೂನ್ 30ರಂದು ಒಟ್ಟಾಗಿ 3,121 ಕ್ಯುಸೆಕ್ ನೀರಿನ ಒಳಹರಿವು ಪಡೆದಿವೆ. ಪ್ರಮುಖ ಜಲವಿದ್ಯುತ್ ಜಲಾಶಯಗಳಾದ ಲಿಂಗನಮಕ್ಕಿ, ಸುಪಾ ಮತ್ತು ಮಾಣಿಗಳಲ್ಲಿ ಶುಕ್ರವಾರ ಬೆಳಿಗ್ಗೆ 8ರ ಹೊತ್ತಿಗೆ ಒಟ್ಟು ಸಾಮರ್ಥ್ಯದ ಕೇವಲ ಶೇ.14.9ರಷ್ಟು ಮಾತ್ರ ಸಂಗ್ರಹವಾಗಿದ್ದು, ಕಳೆದ ವರ್ಷ ಇದೇ ಅವಧಿಯಲ್ಲಿ ಇದು ಶೇ.44.05ರಷ್ಟಿತ್ತು. ಕಳೆದ 10 ವರ್ಷಗಳಲ್ಲೇ 2023ರಲ್ಲಿ ಈ ಮಟ್ಟಕ್ಕಿಂತ ಕಡಿಮೆ ನೀರಿನ ಸಂಗ್ರಹ ಇತ್ತು. ಆ ಸಮಯದಲ್ಲಿ ರಾಜ್ಯವು ತೀವ್ರ ಬರಗಾಲದಿಂದ ಬಳಲುತ್ತಿತ್ತು. ಈ ವೇಳೆ ಒಟ್ಟು ಜಲವಿದ್ಯುತ್ ಸಂಗ್ರಹವು ಕೇವಲ ಶೇ.12.55ರಷ್ಟಿತ್ತು ಎಂಬುದು ಇಂಧನ ಇಲಾಖೆಯ ಅಂಕಿ ಅಂಶಗಳಲ್ಲಿ ಲಭ್ಯವಿರುವುದು ಗಮನಾರ್ಹ. ಇದೀಗ ಮತ್ತೆ ದಾಖಲೆಯ ಮಟ್ಟದಲ್ಲಿ ನೀರು ಇಳಿಕೆಯಾಗಿತ್ತು. ಮುಂಗಾರು ಚುರುಕುಗೊಂಡಿರುವ ಹಿನ್ನೆಲೆಯಲ್ಲಿ ಒಳಹರಿವು ಆರಂಭವಾಗಿದೆ.

''ಜೂನ್ ತಿಂಗಳಲ್ಲಿ ರಾಜ್ಯದಲ್ಲಿ ಕಳೆದ 100 ವರ್ಷಗಳಲ್ಲಿಯೇ ಅತ್ಯಂತ ಕೆಟ್ಟ ಮಳೆ ಕೊರತೆ ಎದುರಾಗಿದ್ದು, ಇದು ಜಲಾಶಯಗಳ ಭರ್ತಿಯ ಮೇಲೆ ಪರಿಣಾಮ ಬೀರಿದೆ'' ಎಂಬುದು ಜಲಸಂಪನ್ಮೂಲ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ ಅವರ ಅಭಿಪ್ರಾಯವಾಗಿದೆ.

''ಕರ್ನಾಟಕದ ಜಲಾಶಯಗಳಲ್ಲಿ ಕಡಿಮೆ ನೀರಿನ ಸಂಗ್ರಹ ಮತ್ತು ಒಳಹರಿವಿನ ಸ್ಥಗಿತದಿಂದಾಗಿ ರಾಜ್ಯವು ಅಪಾಯಕಾರಿ ಪರಿಸ್ಥಿತಿಯಲ್ಲಿದೆ. ಭಾರತವು ಎಲ್ ನಿನೊ ಪರಿಣಾಮವನ್ನು ಎದುರಿಸುವ ನಿರೀಕ್ಷೆಯಿರುವುದರಿಂದ, ಈ ಮುಂಗಾರಿನಲ್ಲಿ ನಾವು ಸರಾಸರಿಗಿಂತ ಕಡಿಮೆ ಮಳೆಯನ್ನು ನಿರೀಕ್ಷಿಸುತ್ತಿದ್ದೇವೆ. ಈ ಅನಿಶ್ಚಿತ ಅವಧಿಯಲ್ಲಿ, ರಾಜ್ಯ ಸರ್ಕಾರವು ನೀರಿನ ಸಂರಕ್ಷಣೆಗೆ ಆದ್ಯತೆ ನೀಡಬೇಕು'' ಎಂದು ಧಾರವಾಡದ ನೀರು ಮತ್ತು ಭೂ ನಿರ್ವಹಣಾ ಸಂಸ್ಥೆಯ(ವಾಲ್ಮಿ) ಮಾಜಿ ನಿರ್ದೇಶಕ ರಾಜೇಂದ್ರ ಪೊದ್ದಾರ್ ಒತ್ತಾಯಿಸಿದ್ದರು.

ಕುಡಿಯುವ ನೀರಿನ ಆದ್ಯತೆ

ಉಪಮುಖ್ಯಮಂತ್ರಿ ಜಿ. ಪರಮೇಶ್ವರ ಮಳೆ ಕೊರತೆ ಮುಂದುವರೆದರೆ, ರಾಜ್ಯವು ಅಭೂತಪೂರ್ವ ಪರಿಸ್ಥಿತಿಯನ್ನು ಎದುರಿಸಬಹುದು. ಹಾಗಾಗಿ ಸರ್ಕಾರ ತುರ್ತು ಕ್ರಿಯಾ ಯೋಜನೆಯನ್ನು ಸಿದ್ಧಪಡಿಸುತ್ತಿದ್ದು, ನಿರಂತರ ಕುಡಿಯುವ ನೀರಿನ ಪೂರೈಕೆಯನ್ನು ಖಚಿತಪಡಿಸಿಕೊಳ್ಳಲು ₹5 ಕೋಟಿ ಹಂಚಿಕೆ ಮಾಡಿದೆ. ನೀರಿನ ನಿರ್ವಹಣಾ ಕ್ರಮಗಳನ್ನು ತಕ್ಷಣ ಜಾರಿಗೆ ತರಲು ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಿರುವುದಾಗಿ ತಿಳಿಸಿದ್ದರು.

ಮುಖ್ಯಮಂತ್ರಿಗಳ ಅಧ್ಯಕ್ಷತೆಯೊಂದಿಗೆ ನಡೆದ ಸಭೆಯಲ್ಲಿ ಪ್ರಾದೇಶಿಕ ಆಯುಕ್ತರು ಮತ್ತು ಉಪ ಆಯುಕ್ತರಿಗೆ ನಿರ್ದೇಶನ ನೀಡಿದ್ದು, ''ಕೆ ಆರ್ ಎಸ್ ಜಲಾಶಯದ ಈಗಿನ ಸಂಗ್ರಹ ಬೆಂಗಳೂರು, ಮೈಸೂರು ಮಂಡ್ಯಕ್ಕೆ ಎರಡು ತಿಂಗಳು ಕುಡಿಯುವ ನೀರು ಪೂರೈಸಬಹುದು. ಕೃಷಿಗೆ ನೀರು ಬಿಡುಗಡೆ ಮಾಡಿದರೆ ಕುಡಿಯುವ ನೀರು ಒಂದು ತಿಂಗಳಿಗೆ ಮಾತ್ರ ಸಾಕಾಗುತ್ತದೆ. ಈ ನೀರನ್ನು ಕುಡಿಯುವ ನೀರಿಗೆ ಮೀಸಲಿಡಬೇಕು. ಸೀಮಿತ ನೀರನ್ನು ಮಾತ್ರ ಬಳಸಿಕೊಳ್ಳಬೇಕು'' ಎಂದು ಜಲಾಶಯದ ಅಧಿಕಾರಿಗಳಿಗೆ ಆದೇಶ ನೀಡಲಾಗಿತ್ತು. ಅಲ್ಲದೆ ಬೆಳೆ ಇಡದಂತೆ ರೈತರಲ್ಲಿಯೂ ಮನವಿ ಮಾಡಿದ್ದರು.

ಏತನ್ಮಧ್ಯೆ, ನಿವಾಸಿಗಳು ನೀರನ್ನು ಸಂರಕ್ಷಿಸುವಂತೆ ಮತ್ತು ಅನಗತ್ಯವಾಗಿ ನೀರನ್ನು ಪೋಲು ಮಾಡದಂತೆ ಪಾಲಿಕೆ, ನಗರಸಭೆ, ಪಂಚಾಯಿತಿ ಅಧಿಕಾರಿಗಳು ಒತ್ತಾಯಿಸುತ್ತಿದ್ದರು.

ಈಗಾಗಲೇ ಮುಂಗಾರು ವಿಳಂಬದಿಂದ ಶೇ.50ರಷ್ಟು ಮಳೆ ಕೊರತೆಯಾಗಿದ್ದು, ರಾಜ್ಯಯದ ಬಹುತೇಕ ಜಲಾಶಯಗಳು ಬರಿದಾಗಿದ್ದವು. ಈಗ ಸುರಿಯುತ್ತಿರುವ ಮಳೆ ಮುಂದುವರೆದರೆ, ಕುಡಿಯುವ ನೀರಿನ ಆತಂಕವನ್ನು ಸ್ವಲ್ಪಮಟ್ಟಿಗೆ ನೀಗಿಸಿಕೊಳ್ಳಬಹುದು. ತುಂಗಾ ಭರ್ತಿಯಾಗಿದ್ದು, ಇತರೆ ಜಲಾಶಯಗಳಿಗೆ ಒಳಹರಿವು ಹೆಚ್ಚಿರುವುದು ಅಚ್ಚುಕಟ್ಟು ಪ್ರದೇಶದ ರೈತರಲ್ಲಿ ಸಧ್ಯಕ್ಕೆ ಭರವಸೆಯನ್ನುಂಟು ಮಾಡಿದೆ.

ಬಿಡದಿ ಟೌನ್‌ಶಿಪ್ ವಿವಾದ: ಬೆಂಗಳೂರು ಮಾತ್ರವೇ ಕರ್ನಾಟಕದ ಅಭಿವೃದ್ಧಿಯೇ?

ಬೆಂಗಳೂರು ಅಭಿವೃದ್ಧಿಯಾಗಬಾರದು ಎಂಬುದು ಯಾರ ಅಭಿಪ್ರಾಯವೂ ಅಲ್ಲ. ಆದರೆ ರಾಜ್ಯದ ಸಮಗ್ರ ಅಭಿವೃದ್ಧಿಯ ದೃಷ್ಟಿಯಿಂದ ಹೊಸ ಹೂಡಿಕೆಗಳು ಮತ್ತು ಮಹತ್ವಾಕಾಂಕ್ಷಿ ಯೋಜನೆಗಳನ್ನು ವಿವಿಧ ಪ್ರಾದೇಶಿಕ ಕೇಂದ್ರಗಳಿಗೆ ಹಂಚುವುದು ಕಾಲದ ಅಗತ್ಯವಾಗಿದೆ. ಕರ್ನಾಟಕದ ಭವಿಷ್ಯವು ಒಂದೇ ನಗರದ ಬೆಳವಣಿಗೆಯಲ್ಲಿ ಇರುವದಿಲ್ಲ, ಬದಲಿಗೆ ರಾಜ್ಯದ ಎಲ್ಲ ಭಾಗಗಳ ಸಮಾನ ಪ್ರಗತಿಯಲ್ಲಿ ಅಡಗಿದೆ.

ರಾಜ್ಯದ ಅಭಿವೃದ್ಧಿ ಎಂದಾಗ ಸರ್ಕಾರದ ಕಣ್ಣಿಗೆ ಕಾಣುವ ನಗರ ಬೆಂಗಳೂರು ಮಾತ್ರವೇ ಆಗಿದೆ. ಮಾಹಿತಿ ತಂತ್ರಜ್ಞಾನ, ಹೂಡಿಕೆ, ಉದ್ಯೋಗ, ಶಿಕ್ಷಣ, ಆರೋಗ್ಯ, ಮೂಲಸೌಕರ್ಯ ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲೂ ಬೆಂಗಳೂರು ದೇಶದ ಪ್ರಮುಖ ನಗರವಾಗಿ ಬೆಳೆದಿದೆ. ಆದರೆ ಈ ಬೆಳವಣಿಗೆಯ ಮತ್ತೊಂದು ಮುಖವೂ ಇದೆ. ರಾಜ್ಯದ ಬಹುತೇಕ ಸರ್ಕಾರಿ ಯೋಜನೆಗಳು, ಬೃಹತ್ ಹೂಡಿಕೆಗಳು ಮತ್ತು ಹೊಸ ಮಹತ್ವಾಕಾಂಕ್ಷಿ ಯೋಜನೆಗಳು ಮತ್ತೆ ಬೆಂಗಳೂರಿನ ಸುತ್ತಮುತ್ತಲೇ ಕೇಂದ್ರೀಕೃತವಾಗುತ್ತಿರುವುದು ಪ್ರಾದೇಶಿಕ ಅಸಮಾನತೆಗೆ ಕಾರಣವಾಗಿದೆ.

ಸುಮಾರು ₹20,000 ಕೋಟಿ ವೆಚ್ಚದಲ್ಲಿ ಬಿಡದಿ ಟೌನ್‌ಶಿಪ್ ಅಥವಾ ಗ್ರೇಟರ್ ಬೆಂಗಳೂರು ಇಂಟಿಗ್ರೇಟೆಡ್ ಟೌನ್‌ಶಿಪ್ ನಿರ್ಮಾಣಕ್ಕೆ ಸರ್ಕಾರ ಮುಂದಾಗಿದೆ. 7,500ರಿಂದ 9,000 ಎಕರೆ ಪ್ರದೇಶದಲ್ಲಿ ಸ್ವಾವಲಂಬಿ ಉಪಗ್ರಹ ನಗರ ನಿರ್ಮಿಸಿ ಬೆಂಗಳೂರಿನ ಸಂಚಾರ ದಟ್ಟಣೆ ಮತ್ತು ಜನಸಂಖ್ಯೆಯ ಒತ್ತಡ ಕಡಿಮೆ ಮಾಡುವುದು ಯೋಜನೆಯ ಉದ್ದೇಶವಾಗಿದೆ. ಆದರೆ ಈ ಯೋಜನೆಗಾಗಿ ಸಾವಿರಾರು ಎಕರೆ ಕೃಷಿಭೂಮಿ ಸ್ವಾಧೀನಪಡಿಸಿಕೊಳ್ಳುವ ವಿಚಾರ ರೈತರಲ್ಲಿ ಆತಂಕ ಮೂಡಿಸಿದೆ.

ಇದರ ಜತೆಗೆ ದೇಶದ ಮೊದಲ ಕೃತಕ ಬುದ್ಧಿಮತ್ತೆ() ನಗರಕ್ಕೂ ಬೆಂಗಳೂರನ್ನೇ ಆಯ್ಕೆ ಮಾಡಿರುವುದು ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಕರ್ನಾಟಕದಲ್ಲಿ ಬೆಂಗಳೂರು ಮಾತ್ರ ಅಭಿವೃದ್ಧಿಗೆ ಅರ್ಹವೇ? ಉಳಿದ ಜಿಲ್ಲೆಗಳು ಕೇವಲ ಸಂಪನ್ಮೂಲಗಳನ್ನು ಒದಗಿಸುವ ಪ್ರದೇಶಗಳಾಗಿಯೇ ಉಳಿಯಬೇಕೇ?

ಬೇರೆ ರಾಜ್ಯಗಳಲ್ಲಿಯ ಅಭಿವೃದ್ಧಿಯನ್ನು ನೋಡಿದಾಗ ಮಹಾರಾಷ್ಟ್ರದಲ್ಲಿ ಮುಂಬೈ ಜತೆಗೆ ಪುಣೆ, ನಾಗ್ಪುರ, ನಾಸಿಕ್ ನಗರಗಳು ಅಭಿವೃದ್ಧಿಯಾಗಿವೆ. ಗುಜರಾತ್‌ನಲ್ಲಿ ಅಹಮದಾಬಾದ್ ಜತೆಗೆ ಸೂರತ್, ವಡೋದರಾ ನಗರಗಳು ಬೆಳವಣಿಗೆ ಕಂಡಿವೆ. ತಮಿಳುನಾಡಿನಲ್ಲಿ ಚೆನ್ನೈ ಜತೆಗೆ ಕೊಯಮತ್ತೂರು, ಮದುರೈ, ತಿರುಚಿರಾಪಳ್ಳಿ ಕೈಗಾರಿಕೆ ಮತ್ತು ಶಿಕ್ಷಣ ಕೇಂದ್ರಗಳಾಗಿವೆ. ಆದರೆ ಕರ್ನಾಟಕದಲ್ಲಿ ಬಹುತೇಕ ಎಲ್ಲ ಪ್ರಮುಖ ಹೂಡಿಕೆಗಳು ಬೆಂಗಳೂರಿನ ಸುತ್ತಲೇ ಕೇಂದ್ರೀಕೃತವಾಗುತ್ತಿವೆ.

ಬೆಳಗಾವಿ, ಧಾರವಾಡ, ಕಲಬುರಗಿ, ವಿಜಯಪುರ, ಬಳ್ಳಾರಿ ಸೇರಿದಂತೆ ಅನೇಕ ನಗರಗಳು ಕೈಗಾರಿಕೆ, ಶಿಕ್ಷಣ, ಆರೋಗ್ಯ, ಐಟಿ ಮತ್ತು ಸೇವಾ ವಲಯಗಳಲ್ಲಿ ಬೆಳೆಯುವ ಎಲ್ಲ ಸಾಮರ್ಥ್ಯ ಹೊಂದಿವೆ. ಅಗತ್ಯ ಮೂಲಸೌಕರ್ಯ ಮತ್ತು ಸರ್ಕಾರಿ ಪ್ರೋತ್ಸಾಹ ದೊರೆತರೆ ಇವುಗಳು ಲಕ್ಷಾಂತರ ಉದ್ಯೋಗಗಳನ್ನು ಸೃಷ್ಟಿಸಬಲ್ಲವು. ಇದರಿಂದ ಬೆಂಗಳೂರಿನ ಮೇಲಿನ ಒತ್ತಡವೂ ಸ್ವಾಭಾವಿಕವಾಗಿ ಕಡಿಮೆಯಾಗುತ್ತದೆ.

ಲಭ್ಯವಿರುವ ಅಂಕಿ ಅಂಶಗಳ ಪ್ರಕಾರ, ಬೆಂಗಳೂರಿನಲ್ಲಿ ಒಂದು ಲಕ್ಷಕ್ಕೂ ಅಧಿಕ ಸಣ್ಣ, ಮಧ್ಯಮ ಮತ್ತು ಬೃಹತ್ ಕೈಗಾರಿಕೆಗಳು ಕಾರ್ಯನಿರ್ವಹಿಸುತ್ತಿದ್ದು, 67 ಸಾವಿರಕ್ಕೂ ಅಧಿಕ ಐಟಿ-ಬಿಟಿ ಕಂಪನಿಗಳು ನೆಲೆಸಿವೆ. ಆದರೆ ಉತ್ತರ ಕರ್ನಾಟಕದ ಭಾಗದಲ್ಲಿ ಸುಮಾರು 30 ಸಾವಿರ ನೋಂದಾಯಿತ ಕಾರ್ಖಾನೆಗಳಷ್ಟೇ ಇವೆ. ಈ ಅಂಕಿ-ಅಂಶಗಳೇ ಬೆಂಗಳೂರು ಮತ್ತು ಉತ್ತರ ಕರ್ನಾಟಕದ ನಡುವಿನ ಅಭಿವೃದ್ಧಿಯ ಅಂತರ ಎಷ್ಟರಮಟ್ಟಿಗೆ ಹೆಚ್ಚಿದೆ ಎಂಬುದನ್ನು ತೋರಿಸುತ್ತವೆ.

ಈ ಅಸಮಾನತೆಯ ಪರಿಣಾಮವಾಗಿ ಉತ್ತರ ಕರ್ನಾಟಕದ ಸಾವಿರಾರು ಯುವಜನರು ಪ್ರತಿವರ್ಷ ಉದ್ಯೋಗಕ್ಕಾಗಿ ಬೆಂಗಳೂರಿಗೆ ವಲಸೆ ಹೋಗುತ್ತಿದ್ದಾರೆ. ಇದರಿಂದ ರಾಜಧಾನಿಯ ಮೇಲೆ ಜನಸಂಖ್ಯೆ, ಸಂಚಾರ, ವಸತಿ, ನೀರು ಹಾಗೂ ಮೂಲಸೌಕರ್ಯಗಳ ಒತ್ತಡ ಹೆಚ್ಚುತ್ತಿದ್ದು, ಮತ್ತೊಂದೆಡೆ ಉತ್ತರ ಕರ್ನಾಟಕದಲ್ಲಿ ಉದ್ಯೋಗಾವಕಾಶಗಳ ಕೊರತೆ ಮುಂದುವರಿಯುತ್ತಿದೆ.

ಈ ಹಿನ್ನೆಲೆಯಲ್ಲಿ ಸರ್ಕಾರವು ಗ್ರೇಟರ್ ಬೆಂಗಳೂರು ಟೌನ್‌ಶಿಪ್‌ನಂತಹ ಮಹತ್ವಾಕಾಂಕ್ಷಿ ಯೋಜನೆಗಳನ್ನು ಕೇವಲ ಬೆಂಗಳೂರಿನ ಸುತ್ತಮುತ್ತ ಮಾತ್ರ ಸೀಮಿತಗೊಳಿಸದೆ, ಬೆಳಗಾವಿ, ಧಾರವಾಡ, ಕಲಬುರಗಿ, ವಿಜಯಪುರ, ಬಳ್ಳಾರಿ, ಮಂಗಳೂರು ಸೇರಿದಂತೆ ರಾಜ್ಯದ ಇತರೆ ನಗರಗಳಲ್ಲಿಯೂ ಜಾರಿಗೊಳಿಸಬೇಕು ಎಂಬುದು ಉತ್ತರ ಕರ್ನಾಟಕ ಜನರ ಪ್ರಮುಖ ಆಗ್ರಹವಾಗಿದೆ.

ಈ ಕುರಿತು ಯುವಕ ಕಲ್ಲಪ್ಪ ಮಾತನಾಡಿ, ''ಬೆಂಗಳೂರು ಬೆಳೆದರೆ ರಾಜ್ಯ ಬೆಳೆದಂತಾಗುವುದಿಲ್ಲ. ಉತ್ತರ ಕರ್ನಾಟಕ, ಕಲ್ಯಾಣ ಕರ್ನಾಟಕ, ಕರಾವಳಿ ಭಾಗವೂ ಬೆಳೆದಾಗ ಮಾತ್ರ ಕರ್ನಾಟಕ ನಿಜ ಅರ್ಥದಲ್ಲಿ ಅಭಿವೃದ್ಧಿ ಆದಂತಾಗುತ್ತದೆ. ಸರ್ಕಾರ ಒಂದೇ ಕಡೆ ಹೂಡಿಕೆ ಮಾಡುವುದನ್ನು ಬಿಟ್ಟು ಎಲ್ಲ ಭಾಗಗಳಿಗೂ ಸಮಾನ ಅವಕಾಶ ಕೊಡಬೇಕು. ಆಗ ಮಾತ್ರ ಯುವಜನರು ಊರು ಬಿಟ್ಟು ಬೆಂಗಳೂರಿಗೆ ವಲಸೆ ಹೋಗುವ ಪರಿಸ್ಥಿತಿ ತಪ್ಪುತ್ತದೆ'' ಎಂದು ಹೇಳಿದರು.

ಪರಿಸರಕ್ಕೆ ಹಾನಿಯಾಗುವ ಪ್ರದೇಶದಲ್ಲೇ ಯೋಜನೆ ಯಾಕೆ?

ಬಿಡದಿ ಸಮೀಪದ ಪ್ರಸ್ತಾವಿತ ಸಿಟಿ ಹಾಗೂ ಗ್ರೇಟರ್ ಬೆಂಗಳೂರು ಇಂಟಿಗ್ರೇಟೆಡ್ ಟೌನ್‌ಶಿಪ್ ಯೋಜನೆ ಅಭಿವೃದ್ಧಿಗಿಂತ ಹೆಚ್ಚಾಗಿ ಪರಿಸರ ಮತ್ತು ಕೃಷಿ ಭೂಮಿಯ ಸಂರಕ್ಷಣೆಯ ಪ್ರಶ್ನೆಯನ್ನು ಎತ್ತಿದೆ. ಅಭಿವೃದ್ಧಿ ಅಗತ್ಯವೇ ಸರಿ. ಆದರೆ ಅದು ಪರಿಸರ ನಾಶ ಮತ್ತು ರೈತರ ಬದುಕಿನ ಬೆಲೆಯ ಮೇಲೆ ಆಗಬೇಕೇ ಎಂಬ ಪ್ರಶ್ನೆ ಇಂದು ಗಂಭೀರವಾಗಿ ಕೇಳಿಬರುತ್ತಿದೆ.

ಯೋಜನೆಗೆ ಸಂಬಂಧಿಸಿದ ಆನ್‌ಲೈನ್ ಅರ್ಜಿಯ ಪ್ರಕಾರ, ಯೋಜನೆ ಜಾರಿಯಾದರೆ ಒಂಬತ್ತು ಕಂದಾಯ ಗ್ರಾಮಗಳ ಸುಮಾರು 5,000 ರೈತರು ತಮ್ಮ ಫಲವತ್ತಾದ ಕೃಷಿ ಭೂಮಿಯನ್ನು ಕಳೆದುಕೊಳ್ಳುವ ಸಾಧ್ಯತೆಯಿದೆ. ಹಲವು ತಲೆಮಾರುಗಳಿಂದ ಕೃಷಿಯನ್ನೇ ಜೀವನಾಧಾರವಾಗಿಸಿಕೊಂಡಿರುವ ಕುಟುಂಬಗಳು ತಮ್ಮ ನೆಲೆ ಕಳೆದುಕೊಳ್ಳುವ ಆತಂಕದಲ್ಲಿವೆ.

ಇನ್ನೂ ಆತಂಕಕಾರಿ ಸಂಗತಿಯೆಂದರೆ, ಯೋಜನೆಗಾಗಿ ಸುಮಾರು ಎರಡು ಲಕ್ಷಕ್ಕೂ ಹೆಚ್ಚು ಮರಗಳನ್ನು ತೆರವುಗೊಳಿಸಬೇಕಾಗುತ್ತದೆ ಎನ್ನಲಾಗಿದೆ. ಇದರಲ್ಲಿ 87,903 ತೆಂಗಿನ ಮರಗಳು, 83,536 ಅಡಿಕೆ ಮರಗಳು, 12,550 ಮಾವಿನ ಮರಗಳು ಹಾಗೂ 2,344 ಚಿಕ್ಕೂ ಮರಗಳು ಸೇರಿವೆ. ಇದಲ್ಲದೆ, ಮೂರು ಲಕ್ಷಕ್ಕೂ ಹೆಚ್ಚು ಬಾಳೆ ಗಿಡಗಳನ್ನು ಕಿತ್ತುಹಾಕುವ ಸಾಧ್ಯತೆಯನ್ನೂ ಉಲ್ಲೇಖಿಸಲಾಗಿದೆ. ಇಷ್ಟು ದೊಡ್ಡ ಪ್ರಮಾಣದ ಮರಗಳ ನಾಶವು ಪರಿಸರ ಸಮತೋಲನ, ಜೀವವೈವಿಧ್ಯ ಮತ್ತು ಸ್ಥಳೀಯ ಹವಾಮಾನದ ಮೇಲೆ ದೀರ್ಘಕಾಲೀನ ದುಷ್ಪರಿಣಾಮ ಉಂಟುಮಾಡುವ ಅಪಾಯವಿದೆ.

ಈ ಪ್ರದೇಶದಲ್ಲಿ ಹೈನುಗಾರಿಕೆ, ತೋಟಗಾರಿಕೆ, ರೇಷ್ಮೆ ಕೃಷಿ ಸೇರಿದಂತೆ ವಿವಿಧ ಗ್ರಾಮೀಣ ಆರ್ಥಿಕ ಚಟುವಟಿಕೆಗಳಲ್ಲಿ ತೊಡಗಿರುವ ಸುಮಾರು 3,500 ಕುಟುಂಬಗಳ ಜೀವನೋಪಾಯಕ್ಕೂ ಧಕ್ಕೆ ಉಂಟಾಗಲಿದೆ ಎಂಬ ಆತಂಕ ವ್ಯಕ್ತವಾಗಿದೆ. ಜತೆಗೆ ಅಂತರ್ಜಲ ಮರುಪೂರಣ ವ್ಯವಸ್ಥೆ, ನೀರಿನ ಸುರಕ್ಷತೆ ಹಾಗೂ ಆಹಾರ ಉತ್ಪಾದನೆಯ ಮೇಲೂ ಪ್ರತಿಕೂಲ ಪರಿಣಾಮ ಉಂಟಾಗುವ ಸಾಧ್ಯತೆ ಇದೆ. ಕೃಷಿ ಭೂಮಿಯನ್ನು ನಗರೀಕರಣಕ್ಕೆ ಪರಿವರ್ತಿಸುವುದರಿಂದ ಭವಿಷ್ಯದಲ್ಲಿ ಆಹಾರ ಭದ್ರತೆಯ ಮೇಲೆಯೂ ಪರಿಣಾಮ ಬೀರುವ ಸಾಧ್ಯತೆಯನ್ನು ಪರಿಸರ ತಜ್ಞರು ಸೂಚಿಸುತ್ತಿದ್ದಾರೆ.

ಅಭಿವೃದ್ಧಿ ಯೋಜನೆಗಳು ಅಗತ್ಯ. ಆದರೆ ಅವು ಪರಿಸರ ಸಂರಕ್ಷಣೆ, ರೈತರ ಹಿತಾಸಕ್ತಿ ಮತ್ತು ಸುಸ್ಥಿರ ಅಭಿವೃದ್ಧಿಯ ತತ್ವಗಳಿಗೆ ಅನುಗುಣವಾಗಿರಬೇಕು. ಲಕ್ಷಾಂತರ ಮರಗಳನ್ನು ಕಡಿದು, ಸಾವಿರಾರು ರೈತರ ಬದುಕನ್ನು ಅತಂತ್ರಗೊಳಿಸಿ ನಿರ್ಮಿಸುವ ಅಭಿವೃದ್ಧಿಯ ಮಾದರಿ ಎಷ್ಟು ಸಮರ್ಥನೀಯ ಎಂಬ ಪ್ರಶ್ನೆಗೆ ಸರ್ಕಾರ ಸ್ಪಷ್ಟ ಉತ್ತರ ನೀಡಬೇಕಾಗಿದೆ.

ಬೆಂಗಳೂರು ಅಭಿವೃದ್ಧಿಯಾಗಬಾರದು ಎಂಬುದು ಯಾರ ಅಭಿಪ್ರಾಯವೂ ಅಲ್ಲ. ಆದರೆ ರಾಜ್ಯದ ಸಮಗ್ರ ಅಭಿವೃದ್ಧಿಯ ದೃಷ್ಟಿಯಿಂದ ಹೊಸ ಹೂಡಿಕೆಗಳು ಮತ್ತು ಮಹತ್ವಾಕಾಂಕ್ಷಿ ಯೋಜನೆಗಳನ್ನು ವಿವಿಧ ಪ್ರಾದೇಶಿಕ ಕೇಂದ್ರಗಳಿಗೆ ಹಂಚುವುದು ಕಾಲದ ಅಗತ್ಯವಾಗಿದೆ. ಕರ್ನಾಟಕದ ಭವಿಷ್ಯವು ಒಂದೇ ನಗರದ ಬೆಳವಣಿಗೆಯಲ್ಲಿ ಇರುವದಿಲ್ಲ, ಬದಲಿಗೆ ರಾಜ್ಯದ ಎಲ್ಲ ಭಾಗಗಳ ಸಮಾನ ಪ್ರಗತಿಯಲ್ಲಿ ಅಡಗಿದೆ. ಇದೇ ಇಂದು ಸರ್ಕಾರದ ಮುಂದೆ ನಿಂತಿರುವ ದೊಡ್ಡ ಸವಾಲು ಮತ್ತು ಜನರ ನಿರೀಕ್ಷೆಯೂ ಆಗಿದೆ. ರಾಜ್ಯದ ಅಭಿವೃದ್ಧಿ ಎಂದರೆ ಕೇವಲ ಬೆಂಗಳೂರು ಅಲ್ಲ ಎನ್ನುವದನ್ನು ಸರ್ಕಾರವು ಅರಿಯಬೇಕಾಗಿದೆ. ರಾಜ್ಯದ ಅಭಿವೃದ್ಧಿಯ ಯೋಜನೆಗಳನ್ನು ರೂಪಿಸಬೇಕಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR